ಸಂಪುಟ: 22, ಸಂಚಿಕೆ: 214, ಪುಟಗಳು: 8, ಬುಧವಾರ, 14 ಮೇ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines



**ಸುಭಾಷಿತ**

ಜೀವನ ನಿಮಗೆ ಪ್ರತಿದಿನ ಕಷ್ಟ ಕೊಟ್ಟರೂ ಸೋಲೊಪ್ಪಿಕೊಳ್ಳದೇ, ನಗುತ್ತಲೇ ಇರಿ! ಮುಂದೊಂದು ದಿನ ಕಷ್ಟವೇ ಸೋತು ನಿಮ್ಮಿಂದ ದೂರವಾಗುತ್ತದೆ.

## ಪಂಚಾಂಗ

(ಬುಧವಾರ 14 ಮೇ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ
- ವಾರ: ಬುಧವಾರ, ತಿಥಿ: ದ್ವಿತೀಯ
- ನಕ್ಷತ್ರ: ಅನುರಾಧ
- ರಾಹುಕಾಲ: 12:20 ರಿಂದ 1:55
- ಗುಳಿಕಕಾಲ: 10:45 ರಿಂದ 12:20
- ಯಮಗಂಡಕಾಲ: 7:35 ರಿಂದ 9:10

## ಸಂಕ್ಷಿಪ್ತ ಸುದ್ದಿ

### ನಾಲ್ಕು ದಿನದ ಆಪರೇಷನ್ ಬಳಿಕ ಕಾಡಾನೆ ಸೆರೆ



**ಚಿಕ್ಕಮಗಳೂರು:** ಕಾಡಾನೆಯೊಂದು ಮಲೆನಾಡು ಭಾಗದಲ್ಲಿ ಆತಂಕ ಸೃಷ್ಟಿಸಿತ್ತು. ಆ ಕಾಡಾನೆ ಕುಳ್ಳ ಅಂತಾನೇ ಫೇಮಸ್ ಆಗಿತ್ತು. ಇಂದು ಈ ಊರಲ್ಲಿ ಇದ್ದರೆ, ನಾಳೆ ಮತ್ತೊಂದು ಊರಲ್ಲಿ ಕಾಣಿಸಿಕೊಂಡು ದಾಂಧಲೆ ಮಾಡುತ್ತಿದ್ದ ಕುಳ್ಳ ಕಾಡಾನೆ ಕೊನೆಗೂ ಲಾಕ್ ಆಗಿದೆ. ನಾಲ್ಕು ದಿನಗಳಿಂದ ನಡೆದ ಆಪರೇಷನ್ ಕೊನೆಗೂ ಯಶಸ್ವಿಯಾಗಿದ್ದ ರಣ ರೋಚಕ. ಪುಟ 2

» **ಜನರ ನಿದ್ದೆಗೆಡಿಸಿದ್ದ 'ಕುಳ್ಳ' ಕೊನೆಗೂ ಲಾಕ್**

### ಆಪರೇಷನ್ ಸಿಂಧೂರ ವಿಜಯೋತ್ಸವದ ವೇಳೆ ಪಾಕ್ ಪರ ಘೋಷಣೆ ಟೆಕ್ಕಿ ಅರೆಸ್ಟ್




**ಬೆಂಗಳೂರು:** ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಣೆ ವೇಳೆ ಪಾಕ್ ಪರ ಘೋಷಣೆ ಕೂಗಿದ ಆರೋಪದ ಮೇಲೆ ಟೆಕ್ಕಿಯೊಬ್ಬನನ್ನ ಬಂಧಿಸಿರುವ ಘಟನೆ ಬೆಂಗಳೂರಿನ ವೈಟ್ ಫೀಲ್ಡ್‌ನ ಪ್ರಶಾಂತ್ ಲೇಔಟ್‌ನಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಶುಭಾಂಶು ಶುಕ್ಲಾ (26) ಬಂಧಿತ ಆರೋಪಿ. ಛತ್ತಿಸ್‌ಗಢ ಮೂಲದ ಶುಕ್ಲಾ ಬೆಂಗಳೂರಿನಲ್ಲಿ ಟೆಕ್ಕಿ ಆಗಿ ಕೆಲಸ ಮಾಡಿಕೊಂಡಿದ್ದ, ವೈಟ್‌ಫೀಲ್ಡ್‌ನ ಪ್ರಶಾಂತ್ ಲೇಔಟ್‌ನಲ್ಲಿ ವಾಸಿಸುತ್ತಿದ್ದ. ಮೇ 9ರಂದು ಈ ಬಡಾವಣೆಯಲ್ಲಿ ಆಪರೇಷನ್ ಸಿಂಧೂರ ವಿಜಯೋತ್ಸವ ಆಚರಿಸಲಾಗುತ್ತಿತ್ತು. ಈ ವೇಳೆ ಶುಭಾಂಶು ಶುಕ್ಲಾ ಪಾಕಿಸ್ತಾನದ ಪರ ಘೋಷಣೆ ಕೂಗಿದ್ದಾನೆ. ಬಡಾವಣೆ ನಿವಾಸಿಗಳು ಸಂಭ್ರಮಾಚರಣೆ ನಡೆಸುವ ವೇಳೆ ಪಿಜಿಯಲ್ಲೇ ಇದ್ದ ಶುಭಾಂಶು ಬಾಲ್ಕನಿಗೆ ಬಂದು ಪಾಕಿಸ್ತಾನ ಪರ ಜೋರಾಗಿ ಘೋಷಣೆ ಕೂಗಿದ್ದಾನೆ. ಪುಟ 2

# ಭಾರತ-ಪಾಕ್ ಉದ್ವಿಗ್ನತೆ ನಡುವೆ ವಿದೇಶಾಂಗ ಸಚಿವ ಜೈಶಂಕರ್‌ಗೆ ಭದ್ರತೆ ಹೆಚ್ಚಳ

**ನವದೆಹಲಿ:** ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನತೆ ಮುಂದುವರೆದಿದೆ. ಏತನ್ಮಧ್ಯೆ, ಭಾರತದ ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರ ಭದ್ರತೆಯನ್ನು ಹೆಚ್ಚಿಸಲಾಗಿದೆ. ಈಗಾಗಲೇ ಇರುವ ಝಡ್ ಭದ್ರತೆ ಜತೆಗೆ ಬುಲೆಟ್ ಪ್ರೂಫ್ ಕಾರು ಕೂಡ ಸರ್ಕಾರ ಒದಗಿಸಲಿದೆ. ದೆಹಲಿಯಲ್ಲಿರುವ ಅವರ ನಿವಾಸದಲ್ಲಿ ಭದ್ರತಾ ವ್ಯವಸ್ಥೆಗಳನ್ನು ಹೆಚ್ಚಿಸಲಾಗಿದೆ. ಎಸ್ ಜೈಶಂಕರ್ ಅವರಿಗೆ ಈಗಾಗಲೇ ಗೃಹ ಸಚಿವಾಲಯವು ಝಡ್ ವರ್ಗದ ಭದ್ರತೆಯನ್ನು ಒದಗಿಸಿದೆ.

ವಿದೇಶಾಂಗ ಸಚಿವರಿಗೆ ಸಿಆರ್‌ಪಿಎಫ್ ಕಮಾಂಡೋಗಳು ಭದ್ರತೆ ಒದಗಿಸುತ್ತಾರೆ. ಇದರಲ್ಲಿ, 33 ಕಮಾಂಡೋಗಳು ಅವರ ಸುತ್ತಮುತ್ತಲಿರುತ್ತಾರೆ. ಅಕ್ಟೋಬರ್ 2023 ರಲ್ಲಿ ಅವರ ಭದ್ರತೆಯನ್ನು ವೈ ವರ್ಗದಿಂದ ಝಡ್-ವರ್ಗಕ್ಕೆ ಭದ್ರತೆ ಹೆಚ್ಚಿಸಲಾಗಿತ್ತು.

ಇತ್ತೀಚಿನ ದಿನಗಳಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಗಡಿಯಲ್ಲಿ ಉದ್ವಿಗ್ನತೆ ಹೆಚ್ಚಿರುವ ಸಮಯದಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಇಷ್ಟೇ ಅಲ್ಲ, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆಯು ಪಾಕಿಸ್ತಾನ ಮತ್ತು ಪಿಒಕೆ ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು.



ಭಾರತ-ಪಾಕಿಸ್ತಾನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ, ವಿದೇಶಾಂಗ ಸಚಿವರ ಭದ್ರತೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ನಿರ್ಧಾರ ತೆಗೆದುಕೊಂಡಿತು.

**ಝಡ್- ವರ್ಗದ ಭದ್ರತೆ ಎಂದರೇನು? :** ವಾಸ್ತವವಾಗಿ, ಝಡ್- ವರ್ಗದ ಭದ್ರತೆಯು ಭಾರತದಲ್ಲಿ ಮೂರನೇ ಅತ್ಯುನ್ನತ ಭದ್ರತೆಯಾಗಿದೆ. ಅದರಲ್ಲಿ 22 ಸೈನಿಕರಿದ್ದಾರೆ. ಇವರಲ್ಲಿ 4 ರಿಂದ 6 ಎನ್‌ಎಸ್‌ಜಿ ಕಮಾಂಡೋಗಳು ಮತ್ತು ಸ್ಥಳೀಯ ಪೊಲೀಸರು ಸೇರಿದ್ದಾರೆ. ಇದು ಬುಲೆಟ್ ಪ್ರೂಫ್ ಕಾರನ್ನು ಸಹ ಹೊಂದಿದೆ. ಹೆಚ್ಚುವರಿಯಾಗಿ, ಬೆಂಗಾವಲು ಪಡೆಗಳನ್ನು ಸಹ ಒದಗಿಸಲಾಗುತ್ತದೆ. ಈ ಭದ್ರತೆಯನ್ನು ಹೆಚ್ಚಿನ ಭದ್ರತೆಯ ಅಗತ್ಯವಿರುವ ದೊಡ್ಡ ನಾಯಕರು ಮತ್ತು ಸೆಲೆಬ್ರಿಟಿಗಳಿಗೆ ನೀಡಲಾಗುತ್ತದೆ. ಅಕ್ಟೋಬರ್ 2023 ರಲ್ಲಿ, ಜೈಶಂಕರ್ ಅವರ ಭದ್ರತೆಯನ್ನು ಹೆಚ್ಚಿಸಲಾಯಿತು. ಈ ಹಿಂದೆ ಅವರಿಗೆ ವೈ-ಕೆಟಗರಿ ಭದ್ರತೆಯನ್ನು ಒದಗಿಸಲಾಗಿತ್ತು.

**ಐಬಿ ವರದಿಯ ನಂತರ ಭದ್ರತೆ ಹೆಚ್ಚಿಸಲಾಗಿದೆ:** ವಿದೇಶಾಂಗ ಸಚಿವರಿಗೆ ಇರುವ ಬೆದರಿಕೆಯನ್ನು ನಿರ್ಣಯಿಸಿದ ನಂತರ ಗುಪ್ತಚರ ಬ್ಯೂರೋ (ಐಬಿ) ಭದ್ರತೆಯನ್ನು ಹೆಚ್ಚಿಸುವಂತೆ ಶಿಫಾರಸು ಮಾಡಿತ್ತು. ಆ ಸಮಯದಲ್ಲಿ ಕೇಂದ್ರ ಸಚಿವ ಜೈಶಂಕರ್ ಅವರ ಮನೆಯಲ್ಲಿ ಭದ್ರತೆಗಾಗಿ 12 ಸಶಸ್ತ್ರ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. 6 ಮಂದಿ ವೈಯಕ್ತಿಕ ಭದ್ರತಾ ಅಧಿಕಾರಿಗಳೂ (ಪಿಎಸ್‌ಒ) ಇದ್ದರು. ಮೂರು ಪಾಳಿಗಳಲ್ಲಿ 12 ಸಶಸ್ತ್ರ ಬೆಂಗಾವಲು ಕಮಾಂಡೋಗಳನ್ನು ನಿಯೋಜಿಸಲಾಗಿತ್ತು. ಮೂವರು ಪಾಳಿಯಲ್ಲಿ ಕೆಲಸ ಮಾಡುತ್ತಿದ್ದರು.

## ಆಕಸ್ಮಿಕವಾಗಿ ಗಡಿ ದಾಟಿ ಪಾಕ್‌ನಿಂದ ಬಂಧನ

# ಬಿಎಸ್‌ಎಫ್ ಯೋಧ ವಾಪಸ್

**ನವದೆಹಲಿ:** ಆಕಸ್ಮಿಕವಾಗಿ ಗಡಿ ದಾಟಿ ಪಾಕಿಸ್ತಾನದ ಸೇನೆಯಿಂದ ಬಂಧನಕ್ಕೊಳಗಾಗಿದ್ದ ಯೋಧ ಪೂರ್ಣಮ್ ಕುಮಾರ್ ಶಾ ವಾಘಾ ಗಡಿ ಮೂಲಕ ಸ್ವದೇಶಕ್ಕೆ ಮರಳಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನದ ಭೂಪ್ರದೇಶಕ್ಕೆ ಬಿಎಸ್‌ಎಫ್ ಕಾನ್‌ಸ್ಟೆಬಲ್ ಆಕಸ್ಮಿಕವಾಗಿ ದಾಟಿಹೋಗಿದ್ದು ರಾಜತಾಂತ್ರಿಕ ಅಂತ್ಯವಾಗಿದೆ, ಪಾಕಿಸ್ತಾನ ರೇಂಜರ್‌ಗಳು ಭಾರತೀಯ ಪಡೆಗಳೊಂದಿಗಿನ ಎಲ್ಲಾ ಧ್ವಜ ಸಭೆಗಳನ್ನು ಸ್ಥಗಿತಗೊಳಿಸಿದ್ದು, ಏಪ್ರಿಲ್ 24 ರಿಂದ ಬಂಧನಕ್ಕೊಳಗಾದ ಕಾನ್‌ಸ್ಟೆಬಲ್ ಪೂರ್ಣಮ್ ಕುಮಾರ್ ಶಾ ಅವರು ಮರಳಿದ್ದಾರೆ.



ಪೂರ್ಣಮ್ ಕುಮಾರ್ ಶಾ ಅವರನ್ನು ಲಾಹೋರ್-ಅಮೃತಸರ ವಲಯದ ರೇಂಜರ್ಸ್ ನೆಲೆಗೆ ಸ್ಥಳಾಂತರಿಸಲಾಗಿತ್ತು ಎಂದು ಮೂಲಗಳು ತಿಳಿಸಿವೆ. ಈ ಮಧ್ಯೆ, ಕಾನ್‌ಸ್ಟೆಬಲ್ ಅವರ ಪತ್ನಿ ರಜನಿ ಶಾ ಅವರು ಬಿಎಸ್‌ಎಫ್‌ನ ಪಶ್ಚಿಮ ಕಮಾಂಡ್‌ನ ಹಿರಿಯ ಅಧಿಕಾರಿಗಳೊಂದಿಗೆ ಈ ವಿಷಯದ ಕುರಿತು ಮಾತನಾಡಲು ಪಶ್ಚಿಮ ಬಂಗಾಳದಿಂದ ಪಂಜಾಬ್‌ಗೆ ಪ್ರಯಾಣ ಬೆಳೆಸಿದ್ದರು

ಸಿಂಗ್ ಸೇನಾ ಸಮವಸ್ತ್ರ ಧರಿಸಿದ್ದರು ಹಾಗೂ ಸೇವಾ ಬಂದೂಕು ಹೊಂದಿದ್ದರು. ರೈತರೊಂದಿಗೆ ಇದ್ದ ಇವರು, ವಿಶ್ರಾಂತಿಗಾಗಿ ನೆರಳು ಅರಸಿ ಹೊರಟಿದ್ದರು. ಈ ಸಂದರ್ಭದಲ್ಲಿ ಆಕಸ್ಮಿಕವಾಗಿ ಗಡಿ ದಾಟಿದ ಸಿಂಗ್ ಅವರನ್ನು ಪಾಕಿಸ್ತಾನಿ ಸೇನೆ ವಶಕ್ಕೆ ಪಡೆದಿದೆ ಎಂದು ಮೂಲಗಳು ಹೇಳಿವೆ. ಪುಟ 2



## ಭಾರತೀಯ ಸೇನೆಯ ಹೊಸ ಕಾರ್ಯಾಚರಣೆ

# ಆಪರೇಷನ್ ಕೆಲ್ಲರ್

**ನವದೆಹಲಿ:** ಆಪರೇಷನ್ ಸಿಂಧೂರ್ ಯಶಸ್ಸಿನಿಂದಾಗಿ ಭಾರತೀಯ ಸೇನೆಯ ನೈತಿಕ ಸ್ಥೈರ್ಯ ಹೆಚ್ಚಾಗಿದೆ. ಸೇನೆಯು ಈಗ ಭಯೋತ್ಪಾದನೆ ವಿರುದ್ಧ ಹೊಸ ಕಾರ್ಯಾಚರಣೆಯನ್ನು ಆರಂಭಿಸಿದೆ ಅದಕ್ಕೆ 'ಆಪರೇಷನ್ ಕೆಲ್ಲರ್' ಎಂದು ಹೆಸರಿಡಲಾಗಿದೆ. ಮಂಗಳವಾರ ಭಾರತೀಯ ಸೇನೆಯು ಕಾಶ್ಮೀರದ ಶೋಪಿಯಾನ್ ಜಿಲ್ಲೆಯ ಕೆಲ್ಲರ್ ದಟ್ಟ ಅರಣ್ಯ ಪ್ರದೇಶದಲ್ಲಿ ಲಷ್ಕರ್-ಎ-ತೊಯ್ಬಾದ ಮೂವರು ಉಗ್ರರನ್ನು ಸದೆಬಡಿದಿದೆ. ಹೀಗಾಗಿ ಈ ಪ್ರದೇಶದ ಹೆಸರನ್ನೇ ನಾಮಕರಣ ಮಾಡಲಾಗಿದೆ. ಈ ಹಿಂದೆ ಶೋಕಲ್ ಕೆಲ್ಲರ್ ಪ್ರದೇಶದಲ್ಲಿ ಭಯೋತ್ಪಾದಕರ ಇರುವಿಕೆಯ ಬಗ್ಗೆ ರಾಷ್ಟ್ರೀಯ ರೈಫಲ್ಸ್ ಘಟಕವು ನಿಖರವಾದ ಗುಪ್ತಚರ ಮಾಹಿತಿಯನ್ನು ನೀಡಿತ್ತು. ಅದರ ನಂತರ ಸೇನೆಯು ಈ ಕಾರ್ಯಾಚರಣೆಯನ್ನು ಪ್ರಾರಂಭಿಸಿತು.

ಸಾಮಾಜಿಕ ಮಾಧ್ಯಮದಲ್ಲಿ ಸೇನೆಯು ಕಾರ್ಯಾಚರಣೆ ಬಗ್ಗೆ ಅಧಿಕೃತ ಹೇಳಿಕೆಯನ್ನು ನೀಡಿದೆ. ಪೋಸ್ಟ್‌ನಲ್ಲಿ ಆಪರೇಷನ್ ಕೆಲ್ಲರ್ ಮೇ 13 2025ರಂದು ರಾಷ್ಟ್ರೀಯ ರೈಫಲ್ಸ್ ಘಟಕದ ನಿರ್ದಿಷ್ಟ ಗುಪ್ತಚರ ಮಾಹಿತಿಯನ್ನು ಆಧರಿಸಿ, ಭಾರತೀಯ ಸೇನೆಯು ಶೋಪಿಯಾನ್‌ನ ಶೋಕಲ್ ಕೆಲ್ಲರ್‌ನಲ್ಲಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿತು ಎಂದು ಬರೆಯಲಾಗಿದೆ.



ಕಾರ್ಯಾಚರಣೆಯ ಸಮಯದಲ್ಲಿ ಭಯೋತ್ಪಾದಕರು ಭಾರೀ ಗುಂಡು ಹಾರಿಸಿದರು, ಅದಕ್ಕೆ ಸೂಕ್ತ ಪ್ರತ್ಯುತ್ತರ ನೀಡಲಾಯಿತು ಎಂದು ಸೇನೆ ತಿಳಿಸಿದೆ. ಪುಟ 2

## ಪ್ರೀ ಸ್ಕೂಲ್‌ಗೆ ವಯೋಮಿತಿ ನಿಗದಿ

# ಶಿಕ್ಷಣ ಇಲಾಖೆಯಿಂದ ಸುತ್ತೋಲೆ

**ಬೆಂಗಳೂರು:** ನಿಮ್ಮ ಮಕ್ಕಳನ್ನ ಎಲ್‌ಕೆಜಿ, ಯುಕೆಜಿ ಸೇರಿಸಲು ಫ್ಲ್ಯಾನ್ ಮಾಡಿದರೆ ನೀವು ಈ ಸ್ಟೋರಿ ನೋಡ್ಲೇಬೇಕು. ಕೇವಲ 1ನೇ ತರಗತಿಗೆ ಮಾತ್ರವಲ್ಲ. ಇನ್ಮುಂದೆ ಪ್ರೀ ಸ್ಕೂಲ್‌ಗೂ ವಯೋಮಿತಿ ನಿಗದಿ ಮಾಡಿ ಶಿಕ್ಷಣ ಇಲಾಖೆ ಆದೇಶ ಮಾಡಿದೆ.

**ಮಕ್ಕಳ ಹಿತದೃಷ್ಟಿಯಿಂದ 5.5 ವರ್ಷಕ್ಕೆ ಇಳಿಕೆ:** ಈ ವರುಷ ಐದೂವರೆ ವರ್ಷ ವಯಸ್ಸಿದ್ದರೂ ಈ ಬಾರಿ 1ನೇ ತರಗತಿಗೆ ನೋಂದಣಿ ಮಾಡಲು ಶಿಕ್ಷಣ ಇಲಾಖೆ ಅವಕಾಶ ಮಾಡಿಕೊಟ್ಟಿದೆ. ಅದು ಆರು ಲಕ್ಷ ವಿದ್ಯಾರ್ಥಿಗಳ ಭವಿಷ್ಯ ದೃಷ್ಟಿಯಿಂದ ಈ ವರುಷಕ್ಕೆ ಮಾತ್ರ ಅನ್ವಯವಾಗುವಂತೆ ಈ ನಿರ್ಧಾರವನ್ನು ಮಾಡಲಾಗಿದೆ. ಇದನ್ನು ರೂಢಿ ಮಾಡಿಕೊಳ್ಳಬಾರದು ಅನ್ನೋ ಕಾರಣಕ್ಕೆ ಪ್ರಿ ಸ್ಕೂಲ್‌ಗೆ ಸೇರಿಸಲು ಮಕ್ಕಳ ವಯೋಮಿತಿಯನ್ನು ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ. ಇದರ ಪ್ರಕಾರ ಎಲ್‌ಕೆಜಿ ಸೇರಿಸಲು ಮಕ್ಕಳಿಗೆ 4 ವರ್ಷ, ಯುಕೆಜಿ ಸೇರಿಸಲು 5 ವರ್ಷ ಕಡ್ಡಾಯ ಮಾಡಲಾಗಿದೆ. ಇದನ್ನು ಖಾಸಗಿ ಶಾಲಾ ಸಂಘಟನೆ ಸ್ವಾಗತಿಸಿದೆ. ಪುಟ 2



## ಖಾಸಗಿ ಎಂಜಿನಿಯರಿಂಗ್ ಕಾಲೇಜು ಶುಲ್ಕ ಶೇ 7.5 ಹೆಚ್ಚಳ?

# ವಿದ್ಯಾರ್ಥಿಗಳಿಗೆ ದರ ಏರಿಕೆ ಶಾಕ್

**ಬೆಂಗಳೂರು:** ಖಾಸಗಿ ಅನುದಾನರಹಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಎಂಜಿನಿಯರಿಂಗ್ ಕೋರ್ಸ್‌ಗಳು ಮತ್ತಷ್ಟು ದುಬಾರಿ ಆಗುವ ಕಾಲ ಸನ್ನಿಹಿತವಾಗಿದೆ. ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳು ಶೇ 20ರಷ್ಟು ಶುಲ್ಕ ಹೆಚ್ಚಿಸುವಂತೆ ಸರಕಾರವನ್ನು ಆಗ್ರಹಿಸಿದ್ದವು. ಅಂತಿಮವಾಗಿ ಶೇ 7.5ರಷ್ಟು ಶುಲ್ಕ ಏರಿಕೆ ಮಾಡಲು ಸರಕಾರ ಒಪ್ಪಿಗೆ ನೀಡಿದೆ ಎಂದು ಮೂಲಗಳು ತಿಳಿಸಿವೆ. ಪರಿಣಾಮವಾಗಿ 2025-26ನೇ ಶೈಕ್ಷಣಿಕ ವರ್ಷದಲ್ಲಿ ಖಾಸಗಿ ಕಾಲೇಜುಗಳ ಎಂಜಿನಿಯರಿಂಗ್ ಕೋರ್ಸ್ ದುಬಾರಿಯಾಗಲಿದೆ.




ಕರ್ನಾಟಕ ಅನುದಾನರಹಿತ ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳ ಸಂಘ ಮತ್ತು ಖಾಸಗಿ ವೃತ್ತಿಪರ ಕಾಲೇಜುಗಳ ಆಡಳಿತ ಮಂಡಳಿಯ ಪ್ರತಿನಿಧಿಗಳ ಜತೆ ಸಭೆ ನಡೆಸಿರುವ ಉನ್ನತ ಶಿಕ್ಷಣ ಇಲಾಖೆ ಈ ತೀರ್ಮಾನಕ್ಕೆ ಬಂದಿದೆ ಎನ್ನಲಾಗಿದೆ. ಸಭೆಯ ಕುರಿತು ಉನ್ನತ ಶಿಕ್ಷಣ ಸಚಿವ ಎಂ. ಸಿ ಸುಧಾಕರ್ ಕೂಡ ಮಾಹಿತಿ ನೀಡಿದ್ದಾರೆ.

ಅಧ್ಯಾಪಕರ ವೇತನ ಹೆಚ್ಚಳ, ಕಾಲೇಜುಗಳ ಮೂಲಸೌಕರ್ಯ ಸುಧಾರಣೆ, ನಿರ್ವಹಣೆ ಮತ್ತು ಗುಣಮಟ್ಟವನ್ನು ಪರಿಗಣಿಸಿ 2025-26ನೇ ಸಾಲಿನಲ್ಲೂ ಶೇ 20ರಷ್ಟು ಹೆಚ್ಚಳಕ್ಕೆ ಕರ್ನಾಟಕ ಅನುದಾನರಹಿತ ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳ ಸಂಘ ಮನವಿ ಸಲ್ಲಿಸಿತ್ತು. ಆದರೆ ಶೇಕಡಾ 7.5 ರಷ್ಟು ಏರಿಕೆಗೆ ಮಾತ್ರ ಇಲಾಖೆ ಅಸ್ತು ಎಂದಿದೆ. ಇದು ವಾರ್ಷಿಕವಾಗಿ ನಡೆಯುವ ಸಹಜ ಪ್ರಕ್ರಿಯೆ ಎಂದೂ ಸ್ಪಷ್ಟನೆ ನೀಡಿದೆ. ಆದರೆ ಈಗಾಗಲೇ ಹಲವು ರೀತಿಯ ಬೆಲೆ ಏರಿಕೆಯಿಂದ ನಲುಗುತ್ತಿರುವ ಪೋಷಕರಿಗೆ ಶೇ 7.5 ರ ಪುಟ 2

## ಪ್ರಿಯಕರನ ಸಹಾಯದಿಂದ ನಿವೃತ್ತ ಸೈನಿಕನನ್ನು ಕೊಲೆ

# ಆರು ತುಂಡುಗಳಾಗಿ ಕತ್ತರಿಸಿ ಎಸೆದ ಪತ್ನಿ

**ಬಲ್ಲಿಯಾ:** ಮಹಿಳೆಯೊಬ್ಬಳು ಪ್ರಿಯಕರನ ಸಹಾಯದಿಂದ ನಿವೃತ್ತ ಸೈನಿಕರಾಗಿರುವ ಪತಿಯನ್ನು ಕೊಲೆ ಮಾಡಿ ಆರು ತುಂಡುಗಳಾಗಿ ಕತ್ತರಿಸಿ ಎಸೆದಿರುವ ಘಟನೆ ಮೀರತ್‌ನಲ್ಲಿ ನಡೆದಿದೆ. ಮೀರತ್‌ನಲ್ಲಿ ಪತ್ನಿ ಮತ್ತು ಆಕೆಯ ಪ್ರಿಯಕರನಿಂದ ಪತಿಯೊಬ್ಬನ ಭೀಕರ ಕೊಲೆ ನಡೆದು ತಿಂಗಳುಗಳ ನಂತರ, ಉತ್ತರ ಪ್ರದೇಶದ ಬಲ್ಲಿಯಾ ಜಿಲ್ಲೆಯಲ್ಲಿ ಮತ್ತೊಂದು ಆಘಾತಕಾರಿ ಪ್ರಕರಣ ಬೆಳಕಿಗೆ ಬಂದಿದೆ. 44 ವರ್ಷದ ಮಾಯಾದೇವಿ ತನ್ನ ಪ್ರಿಯಕರ ಹಾಗೂ ಇತರೆ ಇಬ್ಬರ ಸಹಾಯದಿಂದ ತನ್ನ ಗಂಡನನ್ನು ಆರು ತುಂಡುಗಳಾಗಿ ಕತ್ತರಿಸಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ದೇಹದ ಭಾಗಗಳನ್ನು ವಿವಿಧ ಸ್ಥಳಗಳಲ್ಲಿ ಎಸೆದಿದ್ದಾರೆ ಶನಿವಾರ ಸಿಕಂದರ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ಖರೀದ್ ಗ್ರಾಮದ ಬಳಿಯ ಹೊಲವೊಂದರಲ್ಲಿ ಕತ್ತರಿಸಿದ ಕೈಗಳು ಮತ್ತು ಕಾಲುಗಳನ್ನು ಪಾಲಿಥಿನ್‌ನಲ್ಲಿ ಸುತ್ತಿ ಇರಿಸಲಾಗಿತ್ತು, ಅವು ಪತ್ತೆಯಾಗುವುದರೊಂದಿಗೆ ಈ ಘಟನೆ ಬೆಳಕಿಗೆ ಬಂದಿದೆ.

ಆರೋಪಿಗಳು ಬಲಿಪಶುವಿನ ಗುರುತನ್ನು ಮರೆಮಾಚಲು ಮತ್ತು ತನಿಖಾಧಿಕಾರಿಗಳನ್ನು ದಾರಿ ತಪ್ಪಿಸಲು ದೇಹದ ಭಾಗಗಳನ್ನು ವಿವಿಧ ಸ್ಥಳಗಳಲ್ಲಿ ಎಸೆದಿದ್ದಾರೆ ಎಂದು ವರದಿಯಾಗಿದೆ. ನಂತರ ಬಲಿಯಾದವರನ್ನು ದೇವೇಂದ್ರ ಕುಮಾರ್ ಎಂದು ಗುರುತಿಸಲಾಗಿದ್ದು, ಅವರು 62 ವರ್ಷದ ನಿವೃತ್ತ ಸೇನಾ ಸಿಬ್ಬಂದಿ ಎಂದು ಪೊಲೀಸರು ತಿಳಿಸಿದ್ದಾರೆ.




**ಸೂಟ್‌ಕೇಸ್‌ನಲ್ಲಿ ತುಂಡಾಗಿ ಕತ್ತರಿಸಿದ ಮಹಿಳೆಯ ಶವ ಪತ್ತೆ:** ನಾಲ್ವರ ಬಂಧನ ಅವರ ಪತ್ನಿ ಮಾಯಾ ದೇವಿ ಆರಂಭದಲ್ಲಿ ಮೇ 10 ರಂದು ಬಲ್ಲಿಯಾ ನಗರ ಕೊಟ್ವಾಲಿ ಪೊಲೀಸ್ ಠಾಣೆಯಲ್ಲಿ ತನ್ನ ಪತಿ ಎಲ್ಲೂ ಕಾಣುತ್ತಿಲ್ಲ ಎಂದು ಆರೋಪಿಸಿ ನಾಪತ್ತೆ ದೂರು ದಾಖಲಿಸುವ ಮೂಲಕ ತನಿಖೆಯನ್ನು ದಾರಿ ತಪ್ಪಿಸಲು ಪ್ರಯತ್ನಿಸಿದ್ದರು. ಆದಾಗ್ಯೂ, ಅವರ ಮಗಳು ಅಂಬ್ಲಿ ಗೌತಮ್ ಪೊಲೀಸ್ ಠಾಣೆಗೆ ಬಂದು ಮಾಯಾ ದೇವಿ ತನ್ನ ತಂದೆಯನ್ನು ಕೊಲೆ ಮಾಡಿದ್ದಾರೆ ಎಂದು ನೇರವಾಗಿ ಆರೋಪಿಸಿ ಅವರ ವಿರುದ್ಧ ಸಾಕ್ಷ್ಯ ಕೊಟ್ಟಾಗ ಪ್ರಕರಣ ಬೇರೆ ದಾರಿಯನ್ನೇ ಹಿಡಿಯಿತು. ಮಗಳ ಹೇಳಿಕೆಯ ನಂತರ, ಪೊಲೀಸರು ಮಾಯಾ ದೇವಿಯ ವಿರುದ್ಧ ಕೊಲೆಗೆ ಸಂಬಂಧಿಸಿದ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿ, ಆಕೆಯನ್ನು ಬಂಧಿಸಿದರು.

ಬಲ್ಲಿಯಾ ಪೊಲೀಸ್ ವರಿಷ್ಠಾಧಿಕಾರಿ ಓಂವೀರ್ ಸಿಂಗ್ ಮಾಹಿತಿ ನೀಡಿ, ಮಾಯಾ ದೇವಿ ತನ್ನ ಪ್ರಿಯಕರ, ಟ್ರಕ್ ಚಾಲಕ ಅನಿಲ್ ಯಾದವ್ ಮತ್ತು ಇಬ್ಬರು ಸಹಚರರಾದ ಮಿಥಿಲೇಶ್ ಪಟೇಲ್ ಮತ್ತು ಸತೀಶ್ ಯಾದವ್ ಸಹಾಯದಿಂದ ತನ್ನ ಪತಿಯನ್ನು ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ ಎಂದು ಹೇಳಿದರು. ಪೊಲೀಸರ ಪ್ರಕಾರ, ಮಿಥಿಲೇಶ್ ಪಟೇಲ್ ಅವರನ್ನು ಸೋಮವಾರ ಬಂಧಿಸಲಾಗಿದ್ದು, ಅನಿಲ್ ಯಾದವ್ ಮತ್ತು ಸತೀಶ್ ಯಾದವ್ ಅವರನ್ನು ಮಂಗಳವಾರ ಬಂಧಿಸಲಾಗಿದೆ. ಪುಟ 2

## ರಾಜ್ಯದ ಹಲವೆಡೆ ವರುಣನ ಆರ್ಭಟ

# ಮಳೆಗೆ 7 ಮಂದಿ ಬಲಿ

**ಬೆಂಗಳೂರು:** ರಾಜ್ಯದ ಹಲವಡೆ ತಡರಾತ್ರಿ ವರುಣನ ಅಬ್ಬರ ಜೋರಾಗಿತ್ತು. ಧಾರಾಕಾರ ಮಳೆಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಜನಜೀವನ ಅಸ್ತವ್ಯಸ್ತವಾಗಿತ್ತು, ಮತ್ತೆ ಕೆಲವೆಡೆ ಅವಾಂತರ ಸೃಷ್ಟಿಯಾಗಿತ್ತು.. ಇನ್ನೂ ಕೆಲವೆಡೆ ಮಳೆಯ ಆರ್ಭಟಕ್ಕೆ 7 ಜೀವಗಳು ಬಲಿಯಾಗಿವೆ.

ಹೌದು. ಮಂಗಳವಾರ (ಮೇ 14) ರಾತ್ರಿ ಸುರಿದ ಧಾರಾಕಾರ ಮಳೆಗೆ ಅವಾಂತರವೇ ಸೃಷ್ಟಿಯಾಗಿತ್ತು. ಹಲವು ಜಿಲ್ಲೆಗಳಲ್ಲಿ ಮಳೆರಾಯನ ಅಬ್ಬರಕ್ಕೆ 7 ಜನ ಸಾವನ್ನಪ್ಪಿದ್ದಾರೆ. ಇನ್ನೂ ಕೆಲವೆಡೆ ಮನೆಗಳಿಗೆ ನೀರು ನುಗ್ಗಿದ್ದು ಅವಾಂತರವೇ ಸೃಷ್ಟಿಯಾಗಿದೆ.

ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ರಾರಾವಿ ಗ್ರಾಮದಲ್ಲಿ ಕುರಿ ಮೇಯಿಸಲು ಹೋದಾಗ ಸಿಡಿಲು ಬಡಿದು ಒಂದೇ ಕುಟುಂಬದ ಇಬ್ಬರು ಧಾರುಣವಾಗಿ ಮೃತಪಟ್ಟಿದ್ದಾರೆ. ಓರ್ವ ಬಾಲಕ ಗಂಭೀರವಾಗಿ ಗಾಯಗೊಂಡಿದ್ದಾನೆ. ರಾರಾವಿ ಗ್ರಾಮದ ಭೀರಪ್ಪ, ಸುನೀಲ ಮೃತ ದುರ್ದೈವಿಗಳಾಗಿದ್ದು, ವಿನೋದ ಎಂಬಾತ ಗಂಭೀರ ಗಾಯಗೊಂಡಿದ್ದಾನೆ.





ರಾಯಚೂರು ಜಿಲ್ಲೆಯಲ್ಲಿ ವಿವಿಧೆಡೆ ಗುಡುಗು ಸಹಿತ ಮಳೆ ಆಗಿದೆ. ಸಿಡಿಲು ಬಡಿದು ಓರ್ವ ವ್ಯಕ್ತಿ ಸಾವನ್ನಪ್ಪಿದ್ದು ಇಬ್ಬರು ಮಹಿಳೆಯರಿಗೆ ಗಾಯಗಳಾಗಿವೆ. ಮಸ್ಕಿ ತಾಲೂಕಿನ ಪಾಮನಕಲ್ಲೂರು ಗ್ರಾಮದ ರೈತ ಲಿಂಗಪ್ಪ ಮೃತಪಟ್ಟಿದ್ದಾರೆ.

**ಹಾವೇರಿ/ಕೊಪ್ಪಳ/ಚಿಕ್ಕಮಗಳೂರು:** ಹಾವೇರಿಯ ರಟ್ಟಿಹಳ್ಳಿ ತಾಲ್ಲೂಕಿನ ಕುಡಪಲಿ ಗ್ರಾಮದಲ್ಲೂ ಸಿಡಿಲು ಬಡಿದು ರೈತ ಸುನೀಲ್ ಕಾಳೇರ್ ಸಾವನ್ನಪ್ಪಿದ್ದಾರೆ. ಇನ್ನೂ ಕೊಪ್ಪಳದಲ್ಲೂ ಕನಕಗಿರಿ ತಾಲೂಕಿನ ಹುಲಿಹೈದರದಲ್ಲಿ ಸಿಡಿಲು ಬಡಿದು ಯಂಕಪ್ಪ ಜಾಡಿ ಎಂಬ ರೈತ ಮೃತಪಟ್ಟಿದ್ದಾರೆ. ಪುಟ 2

ಸಂಜೆ ಮುಗಿಲು
ಬುಧವಾರ
14.5.2025



## ಕಾನೂನು ವಿದ್ಯಾರ್ಥಿಗಳಿಗೆ ಮಾಹಿತಿ ಆಯೋಗದ ಕಾರ್ಯವೈಖರಿಯ ಪಾಠ

**ಬೆಂಗಳೂರು:** ಮಾಹಿತಿ ಹಕ್ಕು ಕಾಯ್ದೆಯು ಆಡಳಿತದಲ್ಲಿ ಪಾರದರ್ಶಕತೆ ತರಲು ಪ್ರಮುಖ ಅಸ್ತ್ರವಾಗಿದೆ ಎಂದು ಮಾಹಿತಿ ಆಯೋಗದ ಆಯುಕ್ತರಾದ ಡಾ. ಬಿ. ಆರ್.ಮಮತಾ ತಿಳಿಸಿದರು.

ಕರ್ನಾಟಕ ಮಾಹಿತಿ ಆಯೋಗದ ಕಾರ್ಯವೈಖರಿಯ ಬಗ್ಗೆ ತಿಳಿಯಲು ಆಯೋಗಕ್ಕೆ ಭೇಟಿ ನೀಡಿದ ಸೇಂಟ್ ಜೋಸೆಫ್ ಕಾನೂನು ಕಾಲೇಜಿನ 65 ವಿದ್ಯಾರ್ಥಿಗಳಿಗೆ ಮೇ 10 ರಂದು ಆಯೋಗದ ಆಯುಕ್ತರಾದ ಡಾ: ಬಿ.ಆರ್.ಮಮತಾ ಮಾಹಿತಿ ಒದಗಿಸಿದರು.

ಕಾಯ್ದೆಯ ಅಡಿಯಲ್ಲಿ ಅರ್ಜಿ ಸಲ್ಲಿಸುವ ಮೂಲಕ ಸಾರ್ವಜನಿಕ ಪ್ರಾಧಿಕಾರದ ಮೇಲೆ ಒತ್ತಡ ತಂದು ಸರ್ಕಾರದ ಕಾರ್ಯವೈಖರಿ, ಸಾರ್ವಜನಿಕ ಹಣದ ದುರುಪಯೋಗ, ಯೋಜನೆಗಳ ಅನು?ನಾನದಲ್ಲಿ ಲೋಪದೋಷದಂತಹ ಸಂಗತಿಗಳ ಬಗ್ಗೆ ಮಾಹಿತಿ ಪಡೆದು ಸರ್ಕಾರದ ಮತ್ತು ಸಾರ್ವಜನಿಕರ ಗಮನ ಸೆಳೆಯಬಹುದಾಗಿದೆ. ಮಾಹಿತಿ ಹಕ್ಕು ಕಾಯ್ದೆಯ ಕಾರಣದಿಂದಾಗಿ ಭ್ರ?ಚಾರದ ಅನೇಕ ಪ್ರಕರಣಗಳು ಹೊರಬಂದಿವೆ. ರಾಜ್ಯ ಮಾಹಿತಿ ಆಯೋಗಗಳು ಸಹ ದಕ್ಷವಾಗಿ ಕಾರ್ಯನಿರ್ವಹಿಸುತ್ತಿದ್ದು, ವಿಶೇಷವಾಗಿ ಮಾಹಿತಿ ಹಕ್ಕು ಕಾಯ್ದೆಯ ಅನು?ನಾನದ ಜವಾಬ್ದಾರಿ ಹೊತ್ತಿರುವ ಆಯೋಗ ಸಾರ್ವಜನಿಕರಿಗೆ ನ್ಯಾಯ ಒದಗಿಸಿ ಆತ್ಮವಿಶ್ವಾಸ ತುಂಬುವ ಕೆಲಸ ಮಾಡುತ್ತಿದೆ. ಸಾರ್ವಜನಿಕರಿಂದ ಸ್ವೀಕಾರವಾಗುವ ಅರ್ಜಿಗಳನ್ನು ಪರಿಶೀಲಿಸಿ ಸೂಕ್ತವಾಗಿ ವಿಲೇವಾರಿ ಮಾಡಲಾಗುತ್ತಿದೆ ಎಂದು ವಿವರಿಸಿದರು. ಮಾಹಿತಿ ಪಡೆಯುವ ಮೂಲಕ ಸೇವಾ ಗುಣಮಟ್ಟದ ಹೆಚ್ಚಳ, ಅಧಿಕಾರಿಗಳಲ್ಲಿ ಉತ್ತರದಾಯಿತ್ವವನ್ನು ಉಂಟುಮಾಡಲು ಮಾಹಿತಿ ಹಕ್ಕು ಕಾಯ್ದೆ ಪರಿಣಾಮಕಾರಿಯಾಗಿ ಕೆಲಸ ಮಾಡಿದೆ ಎಂದರು.

ಇದೇ ಸಂದರ್ಭದಲ್ಲಿ ಮಾಹಿತಿ ಹಕ್ಕು ಕಾಯ್ದೆಯ ಕಲಾಪಗಳನ್ನು ವೀಕ್ಷಿಸಲು ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಲಾಗಿತ್ತು. ನಂತರ ಮುಖ್ಯ ಮಾಹಿತಿ ಆಯುಕ್ತರಾದ ಅಶಿತ್ ಮೋಹನ್ ಪ್ರಸಾದ್ ಅವರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾಹಿತಿ ಹಕ್ಕು ಕಾಯ್ದೆಯ ಕುರಿತು ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ವಿವರವಾಗಿ ಉತ್ತರಿಸಿ ಅವರ ಸಂದೇಹಗಳನ್ನು ಪರಿಹರಿಸಲಾಯಿತು.

## ಜಾನಪದ ಕಲೆ, ಕಲಾವಿದರ ರಕ್ಷಣೆ ನಾಗೇಗೌಡರ ಉದ್ದೇಶ

**ರಾಮನಗರ:** ಎಚ್.ಎಲ್. ನಾಗೇಗೌಡರ ಆಶಯದಂತೆ ಜಾನಪದ ಲೋಕದಲ್ಲಿ ಜಾನಪದ ಕಲಾವಿದರಿಗೆ ಮೊದಲ ಗೌರವ, ಸನ್ಮಾನ ಹಾಗೂ ಆದ್ಯತೆ. ಜಾನಪದ ಕಲೆ, ಕಲಾವಿದರ ರಕ್ಷಣೆ; ಸಂರಕ್ಷಣೆ ನಾಗೇಗೌಡರ ಮೂಲ ಉದ್ದೇಶವಾಗಿತ್ತು ಎಂದು ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಹಿ.ಚಿ. ಬೋರಲಿಂಗಯ್ಯ ಅವರು ತಿಳಿಸಿದರು.

ಅವರು ಕರ್ನಾಟಕ ಜಾನಪದ ಪರಿಷತ್ತು ಹಾಗೂ ಜಾನಪದ ಲೋಕದ ವತಿಯಿಂದ ರಾಮನಗರ ಜಾನಪದ ಲೋಕದಲ್ಲಿ ನಾಡೋಜ ಎಚ್.ಎಲ್. ನಾಗೇಗೌಡರ ನೆನಪಿನ 'ಲೋಕಸಿರಿ-105' ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೇಶದ ಅನನ್ಯತೆಯನ್ನು ಉಳಿಸಿಕೊಂಡು ಬರುತ್ತಿರುವ ಸಮುದಾಯ ಲಂಬಾಣಿಗರು. ಈ ಸಮುದಾಯ ತಮ್ಮ ಕಷ್ಟ-ಸುಖಗಳ ಮಧ್ಯೆ ಕಲೆಯನ್ನು ಮತ್ತು ರಂಗುರಂಗಿನ ವೇಷಭೂಷಣಗಳನ್ನು ಬಿಡದೆ ಉಳಿಸಿಕೊಂಡು ಬರುತ್ತಿದ್ದಾರೆ ಭಾರತದ ಮೂಲ ಸಂಸ್ಕೃತಿಯನ್ನು ಪೋಷಿಸುತ್ತಿರುವವರಲ್ಲಿ ಲಂಬಾಣಿಗರು ಪ್ರಮುಖರು ಎಂದರು.

ಜಾನಪದ ಪರಿಷತ್ತಿನ ಆಡಳಿತ ಮಂಡಳಿ ಸದಸ್ಯರಾದ ಡಾ. ವೇಮುಗಲ್ ನಾರಾಯಣಸ್ವಾಮಿ ಮಾತನಾಡಿ, ವಿದ್ಯೆ ಕಲಿಸಿದ ಗುರು, ಜನ್ಮ ಕೊಟ್ಟ ತಂದೆ-ತಾಯಿ, ಅನ್ನ ಕೊಟ್ಟ ಅನ್ನದಾತರನ್ನು ಎಂದಿಗೂ ಮರೆಯಬಾರದು. ಜಾನಪದ ಲೋಕ ಈ ಬಗೆಯ ಸಾವಿರಾರು ಜಾನಪದ ಕಲಾವಿದರನ್ನು ಬೆಳೆಸಿದೆ, ಗೌರವಿಸಿದೆ. ಇಂತಹ ಅಪರೂಪದ ಹಿರಿಯ ಕಲಾವಿದರನ್ನು ಸರ್ಕಾರ ಗುರುತಿಸುವಂತೆ ಪರಿಷತ್ತು ಮಾಡಲಿದೆ ಎಂದರು.

ನಾಡೋಜ ಎಚ್.ಎಲ್.ನಾಗೇಗೌಡರ ನೆನಪಿನಲ್ಲಿ ಪ್ರತಿ ತಿಂಗಳು



ನಡೆಯುವ ಲೋಕಸಿರಿ ತಿಂಗಳ ಅತಿಥಿ-105ರ ಕಾರ್ಯಕ್ರಮದಲ್ಲಿ ಕಲಬುರ್ಗಿ ಜಿಲ್ಲೆಯ ಆಳಂದ ತಾಲ್ಲೂಕಿನ ತೀರ್ಥತಾಂಡದ ಲಂಬಾಣಿ ಗಾಯನ ಮತ್ತು ನೃತ್ಯ ಕಲಾವಿದೆ ಶ್ರೀಮತಿ ರಮಾಬಾಯಿ ಇವರನ್ನು ಗೌರವಿಸಲಾಯಿತು.

ಗೌರವ ಸ್ವೀಕರಿಸಿದ ರಮಾಬಾಯಿ ತಮ್ಮ ಬದುಕಿನ ಕಷ್ಟಸುಖಗಳನ್ನು ಹಂಚಿಕೊಂಡರು. ತಲೆಯ ಮೇಲೆ ಅಲಂಕೃತ ಕೊಡಗಳನ್ನು ಹೊತ್ತು ಮಾಡಿದ ಗೂಮರ್ ನೃತ್ಯ ಪ್ರದರ್ಶನ ನೋಡುಗರ ಮನಸೆಳೆಯಿತು. ಮದುಮಗಳನ್ನು ಗಂಡನ ಮನೆಗೆ ಬೀಳ್ಕೊಡುವ ಹವೇಲಿ ಹಾಡು, ಮದುವೆ ಪದ, ಡಾವಲೋ (ಅಳುವ ಸಾಹಿತ್ಯ) ಹಾಡು, ದೀಪಾವಳಿಯಲ್ಲಿ ಹಿರಿಯರ ಹಾರೈಕೆಯ ಗೀತೆಗಳನ್ನು ಹಾಡಿದರು. ಡಪಡಾ (ತಮಟೆ) ಕುಣಿತವಂತು ನೋಡಲು ಸೊಗಸಿನಿಂದ ಕೂಡಿತ್ತು. ಶ್ರೀಮತಿ ಲಲಿತ ಲೋಕೇಶ್ ಪವಾರ್, ಶ್ಯಾರುಬಾಯಿ, ಪಾರುಬಾಯಿ, ಪುತ್ತಳಬಾಯಿ, ಶೇಷಿಬಾಯಿ, ಗುರುಬಾಯಿಯರ ನೃತ್ಯ ವೈಭವವಿತ್ತು. ನಾರಾಯಣ ರಾಥೋಡ್ ಇವರ ನೃತ್ಯಕ್ಕೆ ತಮಟೆ ನುಡಿಸಿದರು.

### ಆರ್ಥಿಕ ಸಮಾನತೆ ಬಂದರೆ ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯ, ಆರ್ಥಿಕ ಸಮಾನತೆಗಾಗಿ ಗ್ಯಾರೆಂಟಿ ಯೋಜನೆಗಳನ್ನು ಜಾರಿ– ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ

# ಜನರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆ

**ಮೈಸೂರು / ಬೆಂಗಳೂರು:** ಯಾರು ಕೂಡ ಹಸಿವಿನಿಂದ ಇರಬಾರದು ಎಂದು ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಯಿತು. ಆರ್ಥಿಕ ಸಮಾನತೆಯನ್ನು ತಂದರೆ ಮಾತ್ರ ಅಭಿವೃದ್ಧಿಯನ್ನು ಕಾಣಲು ಸಾಧ್ಯ ಎಂದು ಆರ್ಥಿಕ ಸಮಾನತೆಯನ್ನು ತರಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಹೆಚ್. ಡಿ ಕೋಟೆಯ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ, ಪುತ್ಥಳಿ ಅನಾವರಣ, 2569 ನೇ ಬುದ್ಧಪೂರ್ಣಿಮೆ ಭಗವಾನ್ ಬುದ್ಧ ಜಯಂತಿ ಮಹೋತ್ಸವ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನು ನೆರವೇರಿಸಿ ಅವರು ಮಾತನಾಡಿದರು. ಇಂದು ಗೌತಮ ಬುದ್ಧ ಅವರ ಜನ್ಮದಿನ, ಸರ್ಕಾರದ ವತಿಯಿಂದ ಬುದ್ಧ ಜಯಂತಿಯನ್ನು ಆಚರಣೆ ಮಾಡುತ್ತಾ ಇದ್ದೇವೆ. ಬುದ್ಧ ಸುಮಾರು 2500 ವರ್ಷಗಳ ಹಿಂದೆ ಭಾರತದಲ್ಲಿ ಜನಿಸಿ ಜೀವಿಸಿದ್ದರು. ಬುದ್ಧ ಅವರು ಆಸೆಯೇ ದುಃಖಕ್ಕೆ ಕಾರಣ ಎಂದು ತಿಳಿಸಿದರು ಎಂದು ಮಾಹಿತಿ ನೀಡಿದರು.

ನಾವು ಇಂದು ಡಾ. ಬಿ ಆರ್ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವವನ್ನು ಆಚರಣೆ ಮಾಡುತ್ತಾ ಇದ್ದೇವೆ. ಬಸವಣ್ಣ ಅವರು ದಯೆಯೇ ಧರ್ಮದ ಮೂಲವಯ್ಯ ಎಂದು ತಿಳಿಸಿದ್ದಾರೆ. ನಮ್ಮ ದೇಶದಲ್ಲಿ ಹಲವು ಜಾತಿ ಧರ್ಮಗಳ ಜನರು ವಾಸಿಸುತ್ತಿದ್ದೇವೆ. ನಾವು ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣಬೇಕು. ಬುದ್ಧ ಬಸವ ಅಂಬೇಡ್ಕರ್ ಅವರನ್ನು ಮಾನವತಾ ವಾದಿಗಳು ಎಂದು ಕರೆಯುತ್ತೇವೆ. ಮನುಷ್ಯ ಮನುಷ್ಯನನ್ನು ಪ್ರೀತಿಸಬೇಕು ಎಂದು ತಿಳಿಸಿದರು.

ಪರಿಶಿಷ್ಟಜಾತಿಯ ಒಳಮೀಸಲಾತಿ ಜಾರಿಗೆ ನ್ಯಾಯಮೂರ್ತಿ ಡಾ.ಎಚ್.ಎನ್. ನಾಗಮೋಹನ್ ದಾಸ್ ಅವರ ಏಕ ಸದಸ್ಯ ಆಯೋಗವನ್ನು ರಚಿಸಿ ಸಮೀಕ್ಷೆ ಮಾಡಿಸಲಾಗುತ್ತಿದೆ. ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆಯಬೇಕು. ಜನರು ಅಭಿವೃದ್ಧಿ ಹೊಂದಲು ಆರ್ಥಿಕವಾಗಿ ಸಬಲರಾಗಲು ಶಿಕ್ಷಣ ಅತಿ ಮುಖ್ಯ. ನಾವೆಲ್ಲರೂ ಮನುಷ್ಯರಾಗಿ ಬದುಕಬೇಕು. ಆಗ ನಾವು ಬುದ್ಧ ಬಸವ ಅಂಬೇಡ್ಕರ್ ಗಾಂಧಿ ಅವರಿಗೆ ಗೌರವ ನೀಡಿದಂತೆ ಆಗುತ್ತದೆ ಎಂದು ತಿಳಿಸಿದರು.

ನಾವು ಗ್ಯಾರೆಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಯನ್ನು ಮಾಡುತ್ತಿದ್ದೇವೆ. ನಮ್ಮ ಸರ್ಕಾರ ಆರ್ಥಿಕವಾಗಿ ಸಬಲವಾಗಿದೆ.



ಗ್ಯಾರೆಂಟಿ ಯೋಜನೆಗಳಿಗೆ ಕಳೆದ ವರ್ಷ 52 ಸಾವಿರ ಕೋಟಿ ಹಾಗೂ 1 ಲಕ್ಷದ 34 ಸಾವಿರ ಕೋಟಿಯನ್ನು ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಹಸಿವು ಮುಕ್ತ ಮಾಡಲು ಅನ್ನಭಾಗ್ಯ ಯೋಜನೆ, ರಾಜ್ಯದ 1.2 ಕೋಟಿ ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯಡಿ ಮಾಸಿಕ 2000, ಗೃಹ ಜ್ಯೋತಿ ಯೋಜನೆಯಡಿ 200 ಯುನಿಟ್ ವರೆಗೆ ಉಚಿತ ವಿದ್ಯುತ್, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಹಾಗೂ ಯುವನಿಧಿ ಯೋಜನೆಯಡಿ ಪದವಿ ಪಡೆದ ನಿರುದ್ಯೋಗಿಗಳಿಗೆ 3000 ಹಾಗೂ ಡಿಪ್ಲಮೋ ಪಡೆದ ನಿರುದ್ಯೋಗಿಗಳಿಗೆ 1500 ರೂ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪ ಅವರು ಮಾತನಾಡಿ, ಭಾರತ ದೇಶ ವೈವಿಧ್ಯಮಯವಾದ ದೇಶ. ಬಹುತ್ವದಿಂದ ಕೂಡಿರುವ ದೇಶದಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಇದ್ದೇವೆ. ದೇಶಕ್ಕೆ ಅಪಾಯ ಬಂದರೆ ನಾವೆಲ್ಲರೂ ಒಟ್ಟಾಗಿ ನಿಲ್ಲುತ್ತೇವೆ. ಡಾ.ಬಿ.ಆರ್. ಅಂಬೇಡ್ಕರ್ ಅವರು ದೇಶಕ್ಕೆ ಶ್ರೇಷ್ಟವಾದ ಸಂವಿಧಾನವನ್ನು ನೀಡಿದ್ದಾರೆ. ಸಂವಿಧಾನದಲ್ಲಿ ಅಭಿವ್ಯಕ್ತಿ ಸ್ವಾತಂತ್ರ್ಯ ವನ್ನು ನೀಡಿ ನನ್ನನ್ನು ಟೀಕೆ ಮಾಡಿ ಎಂದು ಜನರಿಗೆ ತಿಳಿಸಿದ್ದಾರೆ. ಎಲ್ಲಾ ಶಾಲಾ ಕಾಲೇಜುಗಳಲ್ಲಿ ಸಂವಿಧಾನದ ಪೂರ್ವ ಪೀಠಿಕೆಯನ್ನು ಓದಿಸಿ ಅರ್ಥಿಸಲಾಗುತ್ತಿದೆ. ಬೀದರ್‌ನಿಂದ ಚಾಮರಾಜನಗರದವರೆಗೆ ಮನವ ಸರಪಳಿ ನಿರ್ಮಿಸಿ ಸಂವಿಧಾನ ರಕ್ಷಣೆಯ ಶಪಥ ಮಾಡಿದೆವು ಎಂದು ತಿಳಿಸಿದರು.

ಇಂದು ಬುದ್ಧ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಣೆ ಮಾಡುತ್ತಿದ್ದೇವೆ. ಬುದ್ಧ ಎಂದರೆ ಶಾಂತಿ ಸಹನೆ ಪ್ರೀತಿ ಸಹಬಾಳ್ವೆ. ಆಲ್ಬರ್ಟ್ ಐನ್ ಸ್ಟೀನ್ ಅವರು ಬೌದ್ಧ ಧರ್ಮವನ್ನು ಅನುಸರಣೆ ಮಾಡಿದರು ಎಂದು ಮಾಹಿತಿ ನೀಡಿದರು.

ಪಶು ಸಂಗೋಪನೆ ಹಾಗೂ ರೇಷ್ಮೆ ಇಲಾಖೆಯ ಸಚಿವರಾದ ಕೆ. ವೆಂಕಟೇಶ್ ಅವರು ಮಾತನಾಡಿ, ಚಾಮರಾಜನಗರ ಜಿಲ್ಲೆಯ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿ ಈ ಭಾಗದ ಜಿಲ್ಲೆಗಳ ಅಭಿವದ್ಧಿಗೆ 3400 ಕೋಟಿಗಳನ್ನು ನೀಡಲಾಗಿದೆ. ಅನಿಲ್ ಕುಮಾರ್ ಅವರು ಉತ್ತಮವಾಗಿ ತಾಲ್ಲೂಕಿನ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದಾರೆ. ಇದೆ ರೀತಿ ಅಭಿವೃದ್ಧಿ ಮಾಡಲು ಮುಂದೆಯೂ ತಮ್ಮ ಅವಕಾಶ ಅತಿ ಮುಖ್ಯ. ಗ್ಯಾರಂಟಿ ಯೋಜನೆಗಳು ಜನರ ಜೀವನ ಮಟ್ಟವನ್ನು ಸುಧಾರಿಸಿವೆ. ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಯನ್ನು ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರು ತೋರಿಸಿರುವ ಹಾದಿಯಲ್ಲಿ ನಾವು ನಡೆಯಬೇಕು. ನಾವು ಆರ್ಥಿಕವಾಗಿ ಸಾಮಾಜಿಕವಾಗಿ ರಾಜಕೀಯವಾಗಿ ಬೆಳೆಯಬೇಕು. ನಾವು ಹಿಂದೆ ಕಳೆದುಕೊಂಡ ಎಲ್ಲಾ ಹಕ್ಕುಗಳನ್ನು ನಾವು ಪಡೆಯಲು ಶಿಕ್ಷಣವನ್ನು ಪಡೆಯಬೇಕು. ಹಾಂಡ್ಪೋಸ್ಟ್ ನಿಂದ ಬಾವಲಿ ವರೆಗೆ ರಸ್ತೆ ಅಗಲೀಕರಣಕ್ಕೆ ಕಳೆದ ಬಾರಿ ಅನುಧಾನ ನೀಡಲಾಗಿತ್ತು ಆದರೆ ತಾಂತ್ರಿಕ ಕಾರಣಗಳಿಂದ ರಸ್ತೆ ಆಗಿಲ್ಲ. ಈ ಬಾರಿ ಆಗುತ್ತದೆ ತಾಲ್ಲೂಕಿನ ಎಲ್ಲಾ ರಸ್ತೆಗಳ ಅಭಿವೃದ್ಧಿ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಚಿಕ್ಕಮಾದು ಅವರು ಮಾತನಾಡಿ ನಾನು ಇಂದು ಇಲ್ಲಿ ನಿಂತು ಭಾಷಣ ಮಾಡಲು ಕಾರಣ ಡಾ. ಬಿ. ಆರ್ ಅಂಬೇಡ್ಕರ್. ನಮ್ಮ ತಾಲ್ಲೂಕಿಗೆ ಅತಿ ಹೆಚ್ಚು ಅನುಧಾನ ನೀಡಿದ್ದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು. ನಮ್ಮ ತಾಲ್ಲೂಕಿಗೆ ಡಬಲ್ ರಸ್ತೆಗೆ ಮನವಿ ಮಾಡಲಾಗಿದೆ. ಇದಕ್ಕೆ 300 ಕೋಟಿ ಅನುದಾನವನ್ನು ನೀಡಿದ್ದಾರೆ. ನಮ್ಮ ತಾಲ್ಲೂಕಿಗೆ ಹೆಚ್ಚು ಗಾರ್ಮೆಂಟ್ಸ್ ಗಳು ಹಾಗೂ ಕಾರ್ಖಾನೆಗಳು ಬೇಕು. ಇದರಿಂದ ಇಲ್ಲಿನ ಜನರಿಗೆ ಉದ್ಯೋಗಗಳು ದೊರೆಯುತ್ತವೆ. ನಮ್ಮ ತಾಲ್ಲೂಕಿನಲ್ಲಿ ಹೆಚ್ಚು ಎಸ್‌ಸಿ / ಎಸ್‌ಟಿ ಜನಸಂಖ್ಯೆ ಇದ್ದು ಇಲ್ಲಿಗೆ ಎಸ್ ಸಿ ಪಿ ಹಾಗೂ ಟಿ ಎಸ್ ಪಿ. ಅನುದಾನ ನೀಡಬೇಕು. ತಾಲ್ಲೂಕಿಗೆ 5 ಎಕರೆ ಜಾಗ ನೀಡಿ ಅಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡಿ ಕೊಡಬೇಕು ಎಂದು ಮನವಿ ಮಾಡಿದರು.

ಚಾಮರಾಜನಗರ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಮಾತನಾಡಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಹಲವಾರು ಡಿಗ್ರಿ ಗಳನ್ನು ಪಡೆದರು. ಇವರು ತಮ್ಮ ಜ್ಞಾನಕ್ಕೆ ಐ?ರಾಮಿ ಜೀವನ ನಡೆಸಬಹುದಿತ್ತು. ಆದರೆ ಅವರು ಐ?ರಾಮಿ ಜೀವನಕ್ಕೆ ಆಸೆ ಪಡದೇ ನೊಂದವರ ಬಡವರ ಪರ ಹೋರಾಟ ಮಾಡಿದರು. ಅವರು ಭಾರತಕ್ಕೆ ಶ್ರೇಷ್ಟವಾದ ಸಂವಿಧಾನವನ್ನು ನೀಡಿದರು. ಮಹಿಳೆಯರಿಗೆ ಸಮಾನತೆಯನ್ನು ನೀಡಬೇಕು ಎಂದು ಹೋರಾಟ ಮಾಡಿದರು. ಕಾರ್ಮಿಕರ ಪರ ಹೋರಾಟ ಮಾಡಿ ದಿನಕ್ಕೆ 8 ಗಂಟೆಗಳು ಮಾತ್ರ ಕೆಲಸ ಮಾಡಬೇಕು ಅಲ್ಲದೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಪ್ರತಿಪಾದಿಸಿದರು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಕೆ ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ ರವಿಶಂಕರ್, ಗುಂಡ್ಲು ಪೇಟೆ ಶಾಸಕರಾದ ಗಣೇಶ್ ಪ್ರಸಾದ್, ವಿಧಾನ ಪರಿಷತ್ ಸದಸ್ಯರಾದ, ಡಿ ತಿಮ್ಮಯ್ಯ, ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷರಾದ ಪುಷ್ಪ ಅಮರನಾಥ್, ಉರಿಲಿಂಗಿ ಪೆದ್ದಿ ಮಠದ ಜ್ಞಾನ ಪ್ರಕಾಶ ಸ್ವಾಮೀಜಿ, ಜಿಲ್ಲಾಧಿಕಾರಿಗಳಾದ ಜಿ. ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್ ಯುಕೇಶ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ವನ್ಯಜೀವಿ ವಿಭಾಗದ ಡಿಸಿಎಫ್ ಅವರಿಂದ ಸರ್ಕಾರಿ ವಾಹನ ದುರುಪಯೋಗ ಆರೋಪ : ವಿಡಿಯೋ ವೈರಲ್

**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲದಲ್ಲಿರುವ ಮಲೆಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ಚಕ್ರಪಾಣಿ ಅವರು ತಮಗೆ ನೀಡಿರುವ ಸರ್ಕಾರಿ ವಾಹನವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿದೆ. ಮಲೆ ಮಹದೇಶ್ವರ ವನ್ಯಜೀವಿಧಾಮದ ಉಪ ಸಂರಕ್ಷಣಾಧಿಕಾರಿ ಚಕ್ರಪಾಣಿ ಅವರಿಗೆ ನೀಡಿರುವ ಸರ್ಕಾರಿ ವಾಹನದಲ್ಲಿ(ಕೆಎ- 10 ಜಿ-0800) .ಚಕ್ರಪಾಣಿ ಕುಟುಂಬ ಕೊಳ್ಳೇಗಾಲದಿಂದ ಬೆಂಗಳೂರಿನ ನಿವಾಸಕ್ಕೆ ತೆರಳಿದ್ದಾರೆ. ಈ ವೇಳೆ ಅವರ ಮನೆ ಬಳಿಯೇ ಕೆಆರ್ ಎಸ್ ಪಕ್ಷದ ಕಾರ್ಯಕರ್ತರು ಕಾರಿನಿಂದ ಕೆಳಗೆ ಇಳಿದ ಚಕ್ರಪಾಣಿ ಕುಟುಂಬದವರು ಹಾಗೂ ಚಾಲಕನನ್ನು ಪ್ರಶ್ನಿಸಿದ್ದಾರೆ. ಈ ವೇಳೆ ಕಾರಿನಲ್ಲಿ ಚಕ್ರಪಾಣಿ ಇಲ್ಲದಿರುವುದು ಕಂಡುಬಂದಿದೆ. ಈ ಸಂಬಂಧ ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ.

ಅರಣ್ಯ ಭವನಕ್ಕೆ ಕರ್ತವ್ಯ ನಿಮಿತ್ತ ಬಂದಿದ್ದೇವೆ ಎಂದು ಹೇಳಿದ್ದಾರೆ. ಈ ವೇಳೆ ಕಾರಿನ ಚಾಲಕ ಕೊಳ್ಳೇಗಾಲದಿಂದ ಬೆಂಗಳೂರಿನ ಆದರೆ, ಅಧಿಕಾರ ಇಲ್ಲದ ಕಾರಣ ಪಕ್ಷದ ಕಾರ್ಯಕರ್ತರು ಸರ್ಕಾರಿ ವಾಹನವನ್ನು ದುರುಪಯೋಗಪಡಿಸಿಕೊಂಡಿರುವ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಕೆಆರ್‌ಎಸ್ ಪಕ್ಷದ ಕಾರ್ಯಕರ್ತರು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿರುವ ವಿಡಿಯೋಗೆ ಸಾರ್ವಜನಿಕರಿಂದ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಕೆ.ಆರ್. ಎಸ್. ಪಕ್ಷದವರು ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದು ಸ್ಥಳಕ್ಕೆ ಆಗಮಿಸಿದ ಪೊಲೀಸರು ವಾಹನವನ್ನು ವಶಕ್ಕೆ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ.

ಅಧಿಕಾರಿಗಳಿಗೆ ಸರ್ಕಾರಿ ಕರ್ತವ್ಯ ನಿರ್ವಹಣೆಗಾಗಿ ಸರ್ಕಾರ ಬಳಕೆ ಮಾಡಿಕೊಳ್ಳುವ ಮೂಲಕ ಅಧಿಕಾರಿಗಳು ವಾಹನವನ್ನು ವಾಹನಗಳನ್ನು ನೀಡಿದರೆ ವೈಯಕ್ತಿಕ ಕೆಲಸ ಕಾರ್ಯಗಳಿಗೆ ದುರ್ಬಳಕೆ ಮಾಡಿಕೊಳ್ಳುತ್ತಿರುವುದಕ್ಕೆ ಸಾರ್ವಜನಿಕರಿಂದ ಟೀಕೆ ವ್ಯಕ್ತವಾಗಿದೆ.



**ಶಾಸಕ ಸಿ.ಪುಟ್ಟರಂಗಶೆಟ್ಟಿ ಪುತ್ರ ಚಾಮರಾಜು ನಿಧನಕ್ಕೆ ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಗರದ ಸತ್ತಿ ರಸ್ತೆಯಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಚಾಮರಾಜು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮೌನಾಚರಣೆ ಮಾಡಲಾಯಿತು. ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ನಗರಸಭೆ ನಾಮ ನಿರ್ದೇಶಿತ ಸದಸ್ಯರಾದ ಸ್ವಾಮಿ, ಶಾಂತಲಾ ಪ್ರಸಾದ್, ಸಜ್ಜನಿಕೆ ವ್ಯಕ್ತಿಯಾಗಿದ್ದು ಜಿಪಂ ಮಾಜಿ ಸದಸ್ಯೆ ಕಾವೇರಿ ಶಿವಕುಮಾರ್, ನಗರಸಭೆಯ ಮಾಜಿ ಅಧ್ಯಕ್ಷೆ ಹಾಗೂ ಸದಸ್ಯೆ ಚಿನ್ನಮ್ಮ ಸಿದ್ದರಾಮಯ್ಯ, ತಾಪಂ ಮಾಜಿ ಸದಸ್ಯ ರಾಜು, ಮುಖಂಡರಾದ ಆಪಾರ ವಾದ ಸ್ನೇಹ ನಸುಲ್ಲಾ ಖಾನ್, ಪದ್ಮ ಪುರುಷೋತ್ತಮ್, ರಾಮಸಮುದ್ರ ಶಿವಮೂರ್ತಿ, ಮೋಹನ್ ರವಿಚಂದ್ರನ್, ಜುಬೇರ್ ಉಲ್ ಹಕ್, ಮಹಮ್ಮದ್ ಸಾಧಿಕ್, ಪರ್ವಿಜ್ ಅಹ್ಮದ್, ನಾಗರಾಜು, ಚನ್ನಬಸಪ್ಪ ಸೇರಿದಂತೆ ಇತರರಿದ್ದರು.**

## ಅರ್ಜಿ ಆಹ್ವಾನ

**ರಾಮನಗರ:** 2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ 90 ದಿನಗಳ ವಸತಿಯುತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿಎಸ್‌ಐ) ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಪ್ರಾರಂಭಿಸಲು ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು https://sevasindhu.karnataka.gov.inಮೂಲಕ ಮೇ 23ರೊಳಗೆ ಸಲ್ಲಿಸಬೇಕು. ಅಭ್ಯರ್ಥಿಗಳಿಗೆ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಲು ವಿವರವಾದ ಸೂಚನೆಗಳು /ವಿಧಾನಗಳು https://dom.karnataka.gov.inನಲ್ಲಿ ಲಭ್ಯವಿದೆ. ಹೆಚ್ಚಿನ ಮಾಹಿತಿಗೆ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಕಂದಾಯ ಭವನ, 2ನೇ ಮಹಡಿ, ಕೊಠಡಿ ಸಂಖ್ಯೆ 308 ಈ ಕಚೇರಿಯನ್ನು ಖುದ್ದು ಸಂಪರ್ಕಿಸಬಹುದು ಅಥವಾ ದೂ. ಸಂಖ್ಯೆ: 080-27271104 ನ್ನು ಅಥವಾ ಮಾಹಿತಿ ಕೇಂದ್ರದ ಸಿಬ್ಬಂದಿಗಳ ದೂರವಾಣಿ ಸಂಖ್ಯೆ 8310935776, 9886558821, 9880297132 ಮತ್ತು 8197514161 ಅಥವಾ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ; 8277799990 ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆಗಳ ಆಹ್ವಾನ

**ರಾಮನಗರ:** ಚನ್ನಪಟ್ಟಣ ನಗರಸಭೆ ವ್ಯಾಪ್ತಿಯ ಗಾಂಧಿ ಭವನದ ಮುಂಭಾಗ ಕುವೆಂಪು ಅವರ ಪ್ರತಿಮೆ ಇರುವ ಸ್ಥಳದ ಪಕ್ಕದಲ್ಲಿ ನಾಡಪ್ರಭು ಕೆಂಪೇಗೌಡ ರವರ ಪುತ್ಥಳಿಯನ್ನು ನಿರ್ಮಾಣ ಮಾಡಲು ಉದ್ದೇಶಿಸಿದ್ದು, ಈ ಸಂಬಂಧ ಸಾರ್ವಜನಿಕರಲ್ಲಿ ಯಾವುದಾದರು ಆಕ್ಷೇಪಣೆಗಳಿದ್ದಲ್ಲಿ ಈ ಸಾರ್ವಜನಿಕ ಪ್ರಕಟಣೆ ಹೊರಡಿಸಿದ 30 ದಿನಗಳ ಒಳಗಾಗಿ ಚನ್ನಪಟ್ಟಣ ನಗರಸಭೆ ಕಚೇರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಸೂಚಿಸಲಾಗಿದೆ. 30 ದಿನಗಳ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 17ರಂದು ಉಚಿತ ಕಾರ್ಯಗಾರ

**ರಾಮನಗರ:** 2025-26 ಸಾಲಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕಗಳೊಂದಿಗೆ ತೇರ್ಗಡೆಯಾದ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಎಚ್ ಸಿಎಲ್ ಟೆಕ್ ಸಂಸ್ಥೆಯಿಂದ ಶಿಷ್ಯವೇತನದೊಂದಿಗೆ ತರಬೇತಿ, ಖಾಯಂ ಉದ್ಯೋಗವಕಾಶ ಹಾಗೂ ಸಂಸ್ಥೆಯ ಹಣಕಾಸಿನ ನೆರವಿನೊಂದಿಗೆ ಉನ್ನತ ಪದವಿ ಶಿಕ್ಷಣ ಪಡೆಯುವ ಅವಕಾಶವನ್ನು ಕಲ್ಪಿಸಲಾಗಿದೆ. ಈ ಸಂಬಂಧ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನ ಸಹಭಾಗಿತ್ವದಲ್ಲಿ ಮೇ 17ರಂದು ಬೆಳಿಗ್ಗೆ 10 ಗಂಟೆಗೆ ಗೌಸಿಯಾ ಇಂಜಿನಿಯರಿಂಗ್ ಕಾಲೇಜಿನಲ್ಲಿ ಉಚಿತ ಕಾರ್ಯಗಾರವನ್ನು ಆಯೋಜಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು, ಎಸ್.ಎಸ್.ಎಲ್.ಸಿ, ದ್ವಿತೀಯ ಪಿಯುಸಿ ಅಂಕಪಟ್ಟಿ, ಆಧಾರ್ ಕಾರ್ಡ್‌ಗಳ ಜೆರಾಕ್ಸ್ ಪ್ರತಿ ಹಾಗೂ ನೋಂದಣಿಗಾಗಿ ಸ್ಮಾರ್ಟ್ ಫೋನ್‌ನೊಂದಿಗೆ ಹಾಜರಾಗಬಹುದು. https://bit.ly/TechBeeKSDC ಮೂಲಕ ಉಚಿತ ನೋಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊ. ಸಂ: 8050475672, 8722790340, 9845454471 ಅನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆ

**ರಾಮನಗರ:** 2024-25ನೇ ಸಾಲಿನ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮಗಳೂ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯನ್ನು ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಮೇ 17ರ ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜು ಮತ್ತು ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಕಾಲೇಜುಗಳಲ್ಲಿ (ಆಂಗ್ಲ ಮಾಧ್ಯಮ) ಖಾಲಿ ಇರುವ ವಿವಿಧ ವಿಷಯಗಳ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗೆ ಅತಿಥಿ ಶಿಕ್ಷಕರ / ಉಪನ್ಯಾಸಕ ರಿಂದ ಗೌರವಧನದ ಆಧಾರದ ಮೇಲೆ ಅರ್ಜಿ ಅಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು, ಸಂಬಂಧಪಟ್ಟ ವಿಷಯದಲ್ಲಿ ಪದವಿ /ಸ್ನಾತಕೋತ್ತರ ಪದವಿ ಹಾಗೂ ಬಿಎಡ್ /ಬಿಪಿಎಡ್ ಪದವಿ ಪಡೆದಿರುವುದು ಕಡ್ಡಾಯವಾಗಿರುತ್ತದೆ. ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ನಿವೃತ್ತ ಶಿಕ್ಷಕರು ಅರ್ಜಿ ಸಲ್ಲಿಸಬಹುದು. ಅಯ್ಕೆಯಾದ ಅತಿಥಿ ಶಿಕ್ಷಕರು / ಉಪನ್ಯಾಸಕರಿಗೆ ಗೌರವ ಸಂಭಾವನೆ ನೀಡಲಾಗುವುದು. ಆಸಕ್ತರು ಅರ್ಜಿಗಳನ್ನು ಜಿಲ್ಲಾ ಕಚೇರಿ, ಸಂಬಂಧಪಟ್ಟ ಶಾಲೆ/ ಕಾಲೇಜು ಅಥವಾ https://dom.karnataka.gov.in ನಲ್ಲಿ ಅರ್ಜಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಕಚೇರಿ/ತಾಲ್ಲೂಕು ಮಾಹಿತಿ ಕೇಂದ್ರಗಳು ಅಥವಾ ಸಂಬಂಧಪಟ್ಟ ಶಾಲೆಗಳು / ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯೋಪಾಧ್ಯಾಯರುಗಳಿಗೆ ಮೇ 19ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರು, ಪ್ರಾಂಶುಪಾಲರು ಅಥವಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ: 308, 2ನೇ ಮಹಡಿ, ಕಂದಾಯಭವನ, ಬಿ.ಎಂ. ರಸ್ತೆ, ರಾಮನಗರ. ದೂ. ಸಂಖ್ಯೆ: 080-27271104 ಅನ್ನು ಸಂಪರ್ಕಿಸಬಹುದು.

# ಗೌತಮ ಬುದ್ಧ ನಡೆದಾಡಿದ ದಾರಿ ಪೂಜನೀಯ, ಪವಿತ್ರ

**ರಾಮನಗರ:** ಜಗತ್ತಿನ ಬೆಳಕು ಎಂಬ ಅಬಿದಾಮಕ್ಕೆ ಪಾತ್ರನಾದ ಗೌತಮ ಬುದ್ಧ ಶಾಂತಿಯ ನೇತಾರ, ಸತ್ಯ ಅಹಿಂಸೆಯ ಪ್ರತಿರೂಪ, ಜಗತ್ತಿನ ಮೊದಲ ಸಮಾಜ ಸುಧಾರಣೆಯ ಹರಿಕಾರ ಕ್ರಿ.ಪೂ 6ನೇ ಶತಮಾನದಿಂದಲೇ ಭಾರತದಲ್ಲಿ ಜನಸಾಮಾನ್ಯರ ಆಕ?ಣೆಯ ವ್ಯಕ್ತಿತ್ವ, ಹಾಗಾಗಿ ಬುದ್ಧ ಹುಟ್ಟಿದ ಊರು, ನೆಲೆ ನಿಂತ ಸ್ಥಳ, ಬೇಟಿ ನೀಡಿದ ಹಳ್ಳಿಗಳು, ನಡೆದಾಡಿದ ದಾರಿ ಎಲ್ಲವೂ ಪೂಜನೀಯ ಮತ್ತು ಪವಿತ್ರ ಎಂದು ಜಾನಪದ ಲೋಕದ ಕ್ಯೂರೇಟರ್ ಡಾ. ರವಿ ಅವರು ಅಭಿಪ್ರಾಯ ಪಟ್ಟರು.

ಅವರು ಮೇ 12ರ ಸೋಮವಾರ ನಗರದ ಕಂದಾಯ ಭವನದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಭಗವಾನ್ ಬುದ್ದರ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ಭಗವಾನ್ ಬುದ್ದರು ಹುಟ್ಟಿದ ದಿನದಂದು ಪಕೃತಿಯೇ ತನ್ನ ಮೂಲ ರೂಪದ ಬದಲಾವಣೆಯೊಂದಿಗೆ ಹೂ ಅರಳಿ ದುಂಬಿಗಳು ಝೇಂಕರಿಸುವ ಕಾಲ, ಅದುವೇ ಮೇ ತಿಂಗಳ ಈ ಸುದಿನ ಬುದ್ಧ ಪೂರ್ಣಿಮೆ, ಅಂದರೆ ಬುದ್ಧ ಜಯಂತಿ ಎಂದೂ ಕರೆಯಲ್ಪಡುತ್ತದೆ, ಬುದ್ಧ ಎಂದು ಪ್ರಸಿದ್ಧನಾದ ಮತ್ತು ಬೌದ್ಧಧರ್ಮವನ್ನು ಸ್ಥಾಪಿಸಿದ ರಾಜಕುಮಾರ ಸಿದ್ಧಾರ್ಥ ಗೌತಮನ ಜನನವನ್ನು ಸೂಚಿಸುತ್ತದೆ. ಪೂರ್ಣಿಮೆ ಎಂಬ ಪದವು ಸಂಸ್ಕೃತದಲ್ಲಿ ಹುಣ್ಣಿಮೆ ಎಂದು ಅನುವಾದಿಸುತ್ತದೆ. ಹಿಂದೂ ಮತ್ತು ಬೌದ್ಧ ಧರ್ಮದ ಚಂದ್ರಮಾನ ಕ್ಯಾಲೆಂಡರ್ ಗಳಲ್ಲಿ ವೈಶಾಖ ಮಾಸದ ಹುಣ್ಣಿಮೆಯ ದಿನದಂದು ಈ



ಹಬ್ಬವನ್ನು ಆಚರಿಸಲಾಗುತ್ತದೆ ಎಂದರು.

ಬುದ್ಧ ಪೂರ್ಣಿಮೆಯು ಬುದ್ಧನು ಬೋಧಿಸಿದಂತೆ ಎಲ್ಲಾ ಜೀವಿಗಳ ಬಗ್ಗೆ ಕರುಣೆ ಮತ್ತು ದಯೆಯ ಬೋಧನೆಗಳನ್ನು ಪ್ರತಿಬಿಂಬಿಸುವ ಸಮಯ. ಜನರು ತಮ್ಮ ಬಗ್ಗೆ ಮತ್ತು ಇತರರ ಬಗ್ಗೆ ದಯೆಯನ್ನು ಅಭ್ಯಾಸ ಮಾಡಲು ಈ ಅವಕಾಶವನ್ನು ಬಳಸಿಕೊಳ್ಳುತ್ತಾರೆ. ಅವರು ಅಪರಿಚಿತರನ್ನು ನೋಡಿ ನಗುವುದು, ಸ್ವಯಂಸೇವಕರಾಗುವುದು ಅಥವಾ ಅಗತ್ಯವಿರುವ ಯಾರಿಗಾದರೂ ಸರಳವಾಗಿ ಸಹಾಯ ಮಾಡುವುದು ಮುಂತಾದ ಸಣ್ಣ ದಯೆಯ ಕಾರ್ಯಗಳನ್ನು ಮಾಡಲು ಪ್ರಯತ್ನಿಸುತ್ತಾರೆ. ದಕ್ಷಿಣ ಕೊರಿಯಾದಲ್ಲಿ, ಅಗತ್ಯವಿರುವವರಿಗೆ ಉಚಿತ ಆಹಾರವನ್ನು ವಿತರಿಸುವ ಮೂಲಕ ಮತ್ತು ಕಮಲದ ಲ್ಯಾಟಿನ್‌ಗಳನ್ನು ಬೆಳಗಿಸುವ ಮೂಲಕ ಹಬ್ಬವನ್ನು ಆಚರಿಸಲಾಗುತ್ತದೆ ಎಂದು ಹೇಳಿದರು.

ಬುದ್ಧ ಪೂರ್ಣಿಮೆಯನ್ನು ಭಗವಾನ್ ಬುದ್ಧನ ಜನ್ಮ, ಸತ್ಯದ ಜ್ಞಾನ ಮತ್ತು ಮಹಾಪರಿನಿರ್ವಾಣ ಎಂದು ಪರಿಗಣಿಸಲಾಗಿದೆ. ಬುದ್ಧ ಪೂರ್ಣಿಮೆಯು ಬುದ್ಧನ ಜೀವನಕ್ಕೆ ಸಂಬಂಧಿಸಿಲ್ಲ, ಆದರೆ ಈ ಪೂರ್ಣಿಮಾ ದಿನಾಂಕದಂದು, ಕಾಡಿನಲ್ಲಿ ಅಲೆದಾಡುವ ಮತ್ತು ಕಠಿಣ ತಪಸ್ಸು ಮಾಡಿದ ನಂತರ, ಬುದ್ಧನು ಬೋಧಗಯಾದಲ್ಲಿನ ಬೋಧಿ ವೃಕ್ಷದ ಕೆಳಗೆ ಸತ್ಯದ ಜ್ಞಾನವನ್ನು ಪಡೆದನು ಎನ್ನುವ ಕಾರಣಕ್ಕಾಗಿ ಆಚರಿಸಲಾಗುತ್ತದೆ ಎಂದರು.

ವೈಶಾಖ ಪೂರ್ಣಿಮೆಯ ದಿನದಂದು ಅವರ ಮಹಾಪರಿನಿರ್ವಾಣವು ಕುಶಿನಗರದಲ್ಲಿ ನಡೆಯಿತು. ಗೌತಮ ಬುದ್ಧರು ಸತ್ಯ ಮತ್ತು ಅಹಿಂಸೆಯ ಮಾರ್ಗವನ್ನು ಅನುಸರಿಸಲು ಜನರನ್ನು ಪ್ರೇರೇಪಿಸಿದವರು. ಬುದ್ಧ ಪೂರ್ಣಿಮೆಯಂದು, ಭಗವಾನ್ ಬುದ್ಧನ ಅನುಯಾಯಿಗಳು ಅವರ ಬೋಧನೆಗಳನ್ನು ಆಲಿಸುತ್ತಾರೆ ಮತ್ತು ಅವರು ತೋರಿಸಿದ ಮಾರ್ಗವನ್ನು ಅನುಸರಿಸುವುದಾಗಿ ಪ್ರತಿಜ್ಞೆಯನ್ನು ತೆಗೆದುಕೊಳ್ಳುತ್ತಾರೆ. ಈ ದಿನ ನದಿಯಲ್ಲಿ ಪುಣ್ಯಸ್ನಾನ ಮಾಡಿದರೆ ಪಾಪ ಪರಿಹಾರವಾಗುತ್ತದೆ ಎಂಬ ನಂಬಿಕೆ ಇದೆ. ಭಗವಾನ್ ವಿ?ಣುವಿಗೆ ಸಹ ಪ್ರಾರ್ಥನೆಗಳನ್ನು ಸಲ್ಲಿಸಲಾಗುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಅಂತರರಾಷ್ಟ್ರೀಯ ಟೆಕ್ವಾಂಡೊ ಸ್ಪರ್ಧೆಯಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿ, ವಿವಿಧ ಪದಕ ಗೆದ್ದು ಜಿಲ್ಲೆಗೆ ಕೀರ್ತಿ ತಂದಿರುವ ರಾಮನಗರ ಜಿಲ್ಲೆಯ ಶಾನ್ವಿ ಸತೀಶ್ ಅವರನ್ನು ಸನ್ಮಾನಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸತೀಶ್, ಮುಖಂಡರುಗಳಾದ ಶಿವಶಂಕರ್ ಹಾಗೂ ಲೋಕೇಶ್ ಮೌರ್ಯ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಮಂಜುನಾಥ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತಾ, ನಾಗರತ್ನ ಬಂತೇಜಿ, ಸಮುದಾಯದ ಮುಖಂಡರುಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಕನಿಷ್ಠ ಬೆಂಬಲ ಬೆಲೆ: ರೈತರಿಂದ ರಾಗಿ ಖರೀದಿ

**ರಾಮನಗರ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಖರೀದಿ ಕೇಂದ್ರದ ಅಧಿಕಾರಿಗಳು ಮತ್ತು ಗ್ರೇಡರ್‌ಗಳು ಸರಿಯಾದ ತೂಕ ಮತ್ತು ನಿಗದಿತ ಪ್ರಮಾಣದಲ್ಲಿ ಉತ್ತಮ ಗುಣಮಟ್ಟದ ರಾಗಿಯನ್ನು ಮಾತ್ರ ಖರೀದಿಸಲು ಈಗಾಗಲೇ ಸೂಚನೆಗಳನ್ನು ನೀಡಲಾಗಿದೆ. ಕಳಪೆ ಗುಣಮಟ್ಟದ ರಾಗಿ ಖರೀದಿಗೆ ಅವಕಾಶವಿರುವುದಿಲ್ಲ. ರಾಗಿ ಖರೀದಿ ಕೇಂದ್ರಗಳಲ್ಲಿ ರೈತರನ್ನು ಹೊರತುಪಡಿಸಿ ಇತರೆ ದಲ್ಲಾಳಿಗಳು ಮತ್ತು ಮಧ್ಯವರ್ತಿಗಳಿಗೆ ಪ್ರವೇಶವಿರುವುದಿಲ್ಲ. ಒಂದು ವೇಳೆ ಈ ರೀತಿ ಕಂಡು ಬಂದಲ್ಲಿ ಅವರ ವಿರುದ್ಧ ಕಾನೂನು ರೀತ್ಯಾ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಮತ್ತು ರೈತರು ತಮ್ಮ ರಿಜಿಸ್ಟ್ರೇಷನ್ ದಾಖಲಾತಿ ಮತ್ತು ಫ್ರೂಟ್ ಐಡಿಯೊಂದಿಗೆ ಒಳ್ಳೆಯ ಗುಣಮಟ್ಟದ ರಾಗಿಯನ್ನು ಖುದ್ದು ಖರೀದಿ ಕೇಂದ್ರಗಳಿಗೆ ತೆರಳಿ ನೀಡುವಂತೆ ರಾಮನಗರ ಜಿಲ್ಲಾ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಗರಸಭೆಯಿಂದ ಅರ್ಜಿ ಆಹ್ವಾನ

**ರಾಮನಗರ:** ಜಿಲ್ಲೆಯ ಚನ್ನಪಟ್ಟಣ ನಗರಸಭೆ ವ್ಯಾಪ್ತಿಯ 2025-26ನೇ ಸಾಲಿನ ಎಸ್‌ಎಫ್‌ಸಿ ಹಾಗೂ ನಗರಸಭಾ ನಿಧಿಯ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿರುವ ಶೇ. 24.10, ಶೇ. 7.25 ಮತ್ತು ಶೇ. 5ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತ್ತು ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ ಹಾಗೂ ವಿಕಲಚೇತನರ ಕಾರ್ಯಕ್ರಮದಡಿ ವ್ಯಕ್ತಿ ಸಂಬಂಧಿತ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಬಡಜನರು ಹಾಗೂ ವಿಕಲಚೇತನರು ಚನ್ನಪಟ್ಟಣ ನಗರಸಭೆ ಕಚೇರಿಯಿಂದ ಉಚಿತವಾಗಿ ಅರ್ಜಿ ಪಡೆದು ನಿಗಧಿತ ದಾಖಲಾತಿಗಳೊಂದಿಗೆ ಇದೇ ಜೂನ್ 30ರಂದು ಸಂಜೆ 5 ಗಂಟೆಯೊಳಗೆ (ನಿಗಧಿಪಡಿಸಿರುವ ಅನುದಾನದ ಲಭ್ಯತೆ ಇರುವವರೆಗೆ ಮಾತ್ರ) ಸಂಬಂಧಿಸಿದ ಮಾಹಿತಿಯನ್ನು ಭರ್ತಿ ಮಾಡಿ ಅರ್ಜಿಯೊಂದಿಗೆ ಸಲ್ಲಿಸುವ ಪ್ರತಿಯೊಂದು ನಕಲು ಪ್ರತಿಯನ್ನು ಗೆಜೆಟೆಡ್ ಅಧಿಕಾರಿ/ನೋಟರಿ ರವರಿಂದ ದೃಢೀಕರಿಸಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಕೆಲಸದ ವೇಳೆಯಲ್ಲಿ ಚನ್ನಪಟ್ಟಣ ನಗರಸಭೆಯ ಯೋಜನಾ ಶಾಖೆ ಅಥವಾ ವೆಬ್‌ಸೈಟ್ ವಿಳಾಸ www.channapatnacity.mrc.gov.inಅನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿಆಹ್ವಾನ

**ಮಂಡ್ಯ:** ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ವತಿಯಿಂದ2024–25 ನೇ ಸಾಲಿಗೆ ಮಂಜೂರಾದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಅಲ್ಪಸಂಖ್ಯಾತರ ಸಮುದಾಯದಯುವಜನರಿಗೆ ವಸತಿಯುತ ನೇಮಕಾತಿ ಪರೀಕ್ಷಾ ಪೂರ್ವತರಬೇತಿ ನೀಡಲುಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಬೆಳಗಾವಿ ಮತ್ತುಮೈಸೂರುಕಂದಾಯ ವಿಭಾಗಗಳಲ್ಲಿ90 ದಿನಗಳ ವಸತಿಯುತತರಬೇತಿಗಾಗಿಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದೆ. ಅರ್ಜಿಯನ್ನು ಮೇ 23 ರೊಳಗೆ ಸಲ್ಲಿಸಬಹುದಾಗಿದೆ, ತರಬೇತಿಯನ್ನು ಮೈಸೂರು ಮತ್ತು ಬೆಳಗಾವಿಯಲ್ಲಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್ ಸೈಟ್‌ನಲ್ಲಿ 2024–25 ನೇ ಸಾಲಿನ ಪಿ.ಎಸ್.ಐ.ಪರೀಕ್ಷೆಗಳ ತರಭೇತಿಸಹಾಯವಾಣಿ ಸಂಖ್ಯೆ:8277799990, ಕೆರೆಅಂಗಳದ ಬೀಡಿ ಕಾಲೋನಿ ಆಟೋ ನಿಲ್ದಾಣದ ಹತ್ತಿರವಿರುವಜಿಲ್ಲಾಅಲ್ಪಸಂಖ್ಯಾತರ ಅಧಿಕಾರಿಗಳ ಜಿಲ್ಲಾಕಛೇರಿದೂರವಾಣಿ ಸಂಖ್ಯೆ: 08232–297240, ತಾಲ್ಲೂಕು ವಿಸ್ತರಣಾಧಿಕಾರಿದೂ.ಸಂ:7259138868, ತಾಲ್ಲೂಕು ವಿಸ್ತರಣಾಧಿಕಾರಿ ಪಾಂಡವಪುರ ವಿಭಾಗದೂ.ಸಂ: 8892212574, ತಾಲ್ಲೂಕು ಮಾಹಿತಿಕೇಂದ್ರ, ಮಂಡ್ಯ, ದೂ.ಸಂ: 9880743927, 9986682921, ಮಾಹಿತಿಕೇಂದ್ರ, ಪಾಂಡವಪುರ ನಾಗಮಂಗಲದೂ.ಸಂ: ದೂ.ಸಂ: 7353860464, ತಾಲ್ಲೂಕು ಮಾಹಿತಿಕೇಂದ್ರ, 9663180791. ತಾಲ್ಲೂಕು ಮಾಹಿತಿಕೇಂದ್ರ, ಶ್ರೀರಂಗಪಟ್ಟಣದೂ.ಸಂ: 9036485386, .: 9886786913, ಮಾಹಿತಿಕೇಂದ್ರ, ಕೆ.ಆರ್.ಪೇಟೆದೂ.ಸಂ: 9035251834. ಸಂಪರ್ಕಿಸಬಹುದಾಗಿದೆಎಂದುಅಲ್ಪಸಂಖ್ಯಾತರಕಲ್ಯಾಣಇಲಾಖೆಯಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಯು ಕಾಲೇಜಿನ ದಾಖಲಾತಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಅತ್ಯಂತ ಪ್ರತಿಷ್ಠಿತ ಕಾಲೇಜು ಆಗಿದ್ದು 1912 ರಲ್ಲಿ ಪ್ರಾರಂಭವಾಗಿರುತ್ತದೆ. ಈ ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ಹಾಗೂ ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕರು ಆಗಿರುವ ಪ್ರದೀಪ್ ಈಶ್ವರ್ ರವರ ಮಾರ್ಗದರ್ಶನದಲ್ಲಿ ಕಾಲೇಜಿನ ಎಲ್ಲಾ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳು ಸುಗಮವಾಗಿ ನಡೆಯುತ್ತಿವೆ. ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ 2025–26ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗೆ ದಾಖಲಾತಿ ನಡೆಯುತ್ತಿದೆ. ನಮ್ಮ ಕಾಲೇಜಿನಲ್ಲಿ ವಿಜ್ಞಾನ ವಿಭಾಗ, , ವಾಣಿಜ್ಯ ವಿಭಾಗ, ಕಲಾ ವಿಭಾಗ ಮಾಹಿತಿ ತಂತ್ರಜ್ಞಾನ , ಬ್ಯೂಟಿ ಅಂಡ್ ವೆಲ್ ನೆಸ್ , ಕೋರ್ಸ್ ಗಳು ಲಭ್ಯವಿದ್ದು, ಅತ್ಯಂತ ಕಡಿಮೆ ಶುಲ್ಕದಲ್ಲಿ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. ನಮ್ಮ ಕಾಲೇಜಿನ ಉಪನ್ಯಾಸಕರು 10 ರಿಂದ 15 ವರ್ಷಗಳು ಪಾಠ ಪ್ರವಚನದಲ್ಲಿ ಅನುಭವ ಹೊಂದಿರುತ್ತಾರೆ. ನಮ್ಮಲ್ಲಿ ಇದರೊಂದಿಗೆ ಓಇಇಖಿ ಹಾಗೂ ಅಇಖಿ ವಿಶೇಷ ತರಗತಿಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಪಠ್ಯೇತರ ಚಟುವಟಿಕೆಗಳಾದ ಓಖಖ ಹಾಗೂ ಓಅಅ ಖಫಾಇಿಕ ಗಳನ್ನು ಹೊಂದಿದೆ. ಆದ್ದರಿಂದ ನಮ್ಮ ಕಾಲೇಜಿನಲ್ಲಿ ದಾಖಲಾತಿ ಮಾಡಿಕೊಳ್ಳಬೇಕೆಂದು ಪ್ರಾಂಶುಪಾಲರಾದ ಬಸವರಾಜ ಎಚ್. ಚಿಕ್ಕಣಜಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಬಾಗೇಪಲ್ಲಿ ತಾಲ್ಲೂಕಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025–26ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಆಫ್ ಲೈನ್ ಮೂಲಕ ಅರ್ಜಿ ಸಲ್ಲಿಸಿ, ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಸಂಸ್ಥೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ನಿಗದಿತ ಶುಲ್ಕವನ್ನು ಪಾವತಿಸಿ ಪ್ರವೇಶ ಪಡೆಯಬಹುದು. ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕೋರ್ಸ್ ಗಳ ವಿವರ: Automobile Engineering, Computer Science Engineering, Electronics & Communication Engineering, Mechanical Engineering ಕೋರ್ಸ್ ಗಳು ಲಭ್ಯವಿರುತ್ತವೆ ಎಂದು ಬಾಗೇಪಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಅರಿವು ನೆರವು

**ಚಿಕ್ಕಬಳ್ಳಾಪುರ:** ಕಾರ್ಮಿಕರು ಮತ್ತು ಆಡಳಿತ ಮಂಡಳಿಯವರು ಉತ್ತಮ ಬಾಂಧವ್ಯ ಹೊಂದಿದ್ದರೆ ಮಾತ್ರ ಯಾವುದೇ ಸಂಸ್ಥೆ ಉತ್ತಮ ಸುಸ್ಥಿರ ರೀತಿಯಲ್ಲಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನೇರಳೆ ವೀರಭದ್ರಯ್ಯ ಭವಾನಿ ರವರು ತಿಳಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಕಾರ್ಮಿಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಚಿಕ್ಕಬಳ್ಳಾಪುರ ನಗರದ ಹೊರ ವಲಯದಲ್ಲಿರುವ ಟೈಟಾನ್ ಕಂಪನಿ ಪ್ರೈವೇಟ್ ಲಿಮಿಟೆಡ್ ಇಲ್ಲಿ ಆಯೋಜಿಸಿದ್ದ ವಿಶ್ವ ಕಾರ್ಮಿಕರ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಡಳಿತ ಮಂಡಳಿಯವರು ಕಾರ್ಮಿಕರಿಗೆ ನೀಡಬೇಕಾದ ಸೌಲಭ್ಯಗಳನ್ನು ಕಾಲಕಾಲಕ್ಕೆ ಸರಿಯಾಗಿ ನೀಡಿದರೆ ಕಾರ್ಮಿಕರು ಸಹ ಹೆಚ್ಚಿನ ಗಮನಹರಿಸಿ ದಕ್ಷತೆಯಿಂದ ಕೆಲಸ ಮಾಡಿ ಸಂಸ್ಥೆಯ ಅಭಿವೃದ್ಧಿ ಹೊಂದಲು ದುಡಿಯುತ್ತಾರೆ. ಸೈನಿಕರು ದೇಶವನ್ನು ರಕ್ಷಣೆ ಮಾಡಲು ಶ್ರಮಿಸಿದರೆ ಕಾರ್ಮಿಕರು ದೇಶದ ಒಳಗಿರುವ ಜನರಿಗಾಗಿ ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು. ಜಿಲ್ಲಾ ಕಾರ್ಮಿಕ ಅಧಿಕಾರಿ ಶಬಾನಾ ಅಜ್ಮಿ ರವರು ಮಾತನಾಡಿ, ಕಾರ್ಮಿಕ ಕಾಯ್ದೆಗಳಾದ ಕನಿಷ್ಠ ವೇತನ ಕಾಯ್ದೆ, ಬೋನಸ್ ಪಾವತಿ ಕಾಯ್ದೆ, ಹೆರಿಗೆ ಭತ್ಯೆ ಕಾಯ್ದೆ ಮತ್ತು ಇತರೆ ಕಾರ್ಮಿಕ ಕಾಯ್ದೆಗಳ ಕುರಿತು ಅರಿವು ಮೂಡಿಸಿದರು. ಸಂದರ್ಭದಲ್ಲಿ ಗೌರವಾನ್ವಿತ 3ನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರಾದ ಎಸ್.ಶ್ರೀಧರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಬಿ. ಶಿಲ್ಪ, ಜಿಲ್ಲಾ ಕಾರ್ಮಿಕ ಅಧಿಕಾರಿ ಶಬಾನಾ ಅಜ್ಮಿ, ಟೈಟಾನ್ ಸಂಸ್ಥೆಯ ಪ್ರತಿನಿಧಿಗಳು, ಕಾರ್ಮಿಕರು ಹಾಜರಿದ್ದರು.

# ತಾಯಿ ಮರಣ ಪ್ರಮಾಣ ಶೂನ್ಯಕ್ಕೆ ಬರಬೇಕು: ಜಿಲ್ಲಾಧಿಕಾರಿ

**ಚಿಕ್ಕಬಳ್ಳಾಪುರ:** 2024 ರ ಏಪ್ರಿಲ್ ನಿಂದ 2025 ರ ಮಾರ್ಚ್ ಮಾಹೆಯವರೆಗೆ ಜಿಲ್ಲೆಯಲ್ಲಿ 10 ತಾಯಂದಿರ ಮರಣ ಸಂಭವಿಸಿರುವುದು ಕಂಡುಬಂದಿದೆ,ಮುಂದಿನ ದಿನಗಳಲ್ಲಿ ತಾಯಿ ಮರಣ ಪ್ರಮಾಣ ಶೂನ್ಯಕ್ಕೆ ಬರುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಗಳ ಸಭಾಂಗಣದಲ್ಲಿ ನಡೆದ "ತಾಯಿ ಮರಣ ಪ್ರಕರಣಗಳ ಪರಿಶೀಲನಾ" ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2024–25 ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ,ಗೌರಿಬಿದನೂರು,ಶಿಡ್ಲಘಟ್ಟ ತಾಲ್ಲೂಕುಗಳಲ್ಲಿ ತಲಾ 2 ತಾಯಿ ಮರಣಗಳು ಸಂಭವಿಸಿವೆ. ಚಿಂತಾಮಣಿ ತಾಲೂಕಿನಲ್ಲಿ 3 ಪ್ರಕರಣ ಹಾಗೂ ಬಾಗೇಪಲ್ಲಿ ತಾಲ್ಲೂಕಿನಲ್ಲಿ 1 ಪ್ರಕರಣ ದಾಖಲಾಗಿವೆ, ಈ ಪ್ರಕರಣಗಳನ್ನು ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಮೃತರ ಕುಟುಂಬದ ಸದಸ್ಯರ ಸಮ್ಮುಖದಲ್ಲಿ ಮರಣ ಸಂಭವಿಸಲು ನೈಜ ಕಾರಣ ಏನು ಎಂಬುದರ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಮರಣ ಪ್ರಮಾಣ ತಗ್ಗಿಸಲು ಪೋಷಕರ, ಪಾತ್ರವೇನು, ಆರೋಗ್ಯ ಚಿಕಿತ್ಸೆ ನೀಡುವವರ ಪಾತ್ರವೇನು ಯಾವುದನ್ನು ಸುಧಾರಿಸಿಕೊಳ್ಳಬೇಕು. ಮುಂದೆ ತಾಯಿ ಮರಣ ಪ್ರಮಾಣಗಳು ಜಿಲ್ಲೆಯಲ್ಲಿ ಸಂಭವಿಸದಂತೆ




ಏನೆಲ್ಲ ಕ್ರಮಗಳನ್ನು ಕೈಗೊಳ್ಳಬಹುದು ಎಂಬುದನ್ನು ಅರಿಯಲು ಈ ಸಭೆಯು ಸಹಕಾರಿಯಾಗಿದೆ ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಆರೋಗ್ಯ ಇಲಾಖೆಗೆ ಸೂಚನೆಗಳನ್ನು ನೀಡಲಾಗಿದೆ.ಮಗುವಿನ ಜನನದ ನಂತರವೂ ನಿಯಮಿತವಾಗಿ ಆರೋಗ್ಯ ಚಿಕಿತ್ಸೆಗಳನ್ನು ತಾಯಂದಿರು ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ಸಾರ್ವತ್ರಿಕ ಲಸಿಕಾ ಕಾರ್ಯಕ್ರಮವು ಈ ತಿಂಗಳ 24 ರಿಂದ 30ರವರೆಗೆ ಜಿಲ್ಲೆಯಲ್ಲಿ ನಡೆಯಲಿದ್ದು, ದಡಾರ, ರುಬೆಲ್ಲ ಲಸಿಕೆಯಿಂದ ತಪ್ಪಿ ಹೋದ ಮಕ್ಕಳು ಅಥವಾ ಇತರೆ ಲಸಿಕೆಗಳಿಂದ ವಂಚಿತರಾದ ಮಕ್ಕಳು ಲಸಿಕೆ ಹಾಕಿಸಿಕೊಳ್ಳುವಂತೆ ಆಗಬೇಕು. ಲಸಿಕೆ ಹಾಕಿದ ಮಾಹಿತಿಯನ್ನು HMIS, RCH UWIN ಪೋರ್ಟಲ್ ಗಳಲ್ಲಿ ನಮೂದಿಸಿ ಇಂಡೀಕರಿಸಬೇಕು. ಪ್ರತಿ ಗುರುವಾರ ಎಲ್ಲಾ ಲಸಿಕಾ ಕೇಂದ್ರಗಳಲ್ಲಿ ವಿಶೇಷ ಲಸಿಕಾ ಅಭಿಯಾನವನ್ನು ಕೈಗೊಳ್ಳಬೇಕು. ಲಸಿಕೆಗಳನ್ನು ಹಾಕಿಸಿಕೊಳ್ಳುವುದರಿಂದ ಅಡ್ಡ ಪರಿಣಾಮಗಳು ಉಂಟಾಗುತ್ತವೆ ಎಂದು ಕೆಲವರು ತಪ್ಪಾಗಿ ಭಾವಿಸುತ್ತಾರೆ. ಅಂತಹ ತಪ್ಪು ಭಾವನೆಯನ್ನು ಹೋಗಲಾಡಿಸಲು ಅರಿವು ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಲಸಿಕೆಯನ್ನು ನಿರ್ಲಕ್ಷ್ಯ ಮಾಡುವ ಭಾಗಗಳಲ್ಲಿ, ಗ್ರಾಮ ಗಳಲ್ಲಿ, ವಾರ್ಡ್‌ಗಳಲ್ಲಿ ಸಮುದಾಯದವರನ್ನು ಸೇರಿಸಿಕೊಂಡು ಅರಿವು ಮೂಡಿಸಬೇಕು. ಗೌರಿಬಿದನೂರು ತಾಲೂಕಿನ ಅಲ್ಲಿಪುರ ಗ್ರಾಮದಲ್ಲಿ ಲಸಿಕೆ ಪ್ರಮಾಣವನ್ನು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ಈ ವೇಳೆ ಸೂಚನೆ ನೀಡಿದರು.

2024 – 2025 ನೇ ಸಾಲಿನಲ್ಲಿ ಲಸಿಕಾಕರಣಕ್ಕೆ 15,378 ಮಕ್ಕಳನ್ನು ಗುರುತಿಸಲಾಗಿತ್ತು. ಈ ಮಕ್ಕಳ ಪೈಕಿ 15,101 ಮಕ್ಕಳಿಗೆ ಮೊದಲನೆಯ ಡೋಸ್ ಲಸಿಕೆ ಹಾಕಿ ಶೇಕಡ 98 ರಷ್ಟು ಪ್ರಗತಿ ಸಾಧಿಸಲಾಗಿತ್ತು. ಎರಡನೇ ಡೋಸ್ ಲಸಿಕೆಯನ್ನು 14,110 ಲಸಿಕೆ ಹಾಕಿ ಜಿಲ್ಲೆಯಲ್ಲಿ ಶೇಕಡ 97 ರಷ್ಟು ಪ್ರಗತಿ ಸಾಧಿಸಲಾಗಿತ್ತು. ಈ ಬಾರಿ ಲಸಿಕಾಕರಣದಲ್ಲಿ ಶೇಕಡ 100 ರಷ್ಟು ಪ್ರಗತಿ ಸಾಧನೆಯಾಗಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಾಗೂ ಇತರೆ ಇಲಾಖೆಗಳ ಸಹಕಾರ ತೆಗೆದುಕೊಂಡು ಲಸಿಕಾಕರಣ ಪ್ರಮಾಣ ಕಡಿಮೆ ಇರುವ ಗ್ರಾಮಗಳು, ವಾರ್ಡ್ ಗಳ ಮಾಹಿತಿ ಪಡೆದು ವಿಶೇಷ ಕಾಳಜಿ ವಹಿಸಿ ಎಲ್ಲಾ ಐದು ವರ್ಷ ಒಳಗಿನ ಮಕ್ಕಳಿಗೆ ಲಸಿಕೆ ಹಾಕಿಸಲು ಕ್ರಮ ವಹಿಸಬೇಕು. ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಸಹಕಾರ ಪಡೆದು ಯಶಸ್ವಿ ಲಸಿಕಾಕರಣ ಆಗಬೇಕು. ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಲಸಿಕಾಕರಣ ಕೈಗೊಳ್ಳಲು ಮೊಬೈಲ್ ಲಸಿಕಾ ವಾಹನವನ್ನು ಒದಗಿಸಬೇಕು. ಒಟ್ಟಾರೆ ಯಾವುದೇ ಮಕ್ಕಳು ಲಸಿಕೆಯಿಂದ ವಂಚಿತರಾಗದಂತೆ ನಿರ್ವಹಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಹೇಶ್ ಕುಮಾರ್, ತಾಲೂಕು ಆರೋಗ್ಯ ಅಧಿಕಾರಿಗಳು, ವೈದ್ಯಾಧಿಕಾರಿಗಳು, ದಾದಿಯರು, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಬಣ್ಣನೆ

# ಭಗವಾನ್ ಬುದ್ದ ಜಗತ್ತಿನ ಬೆಳಕು

**ಕೋಲಾರ:** ಜಗತ್ತಿನ ಮಹಾನ್ ಮಾನವತಾವಾದಿಗಳು ಮತ್ತು ಅವರ ಜೀವನ, ಮಾರ್ಗದರ್ಶನ ಎಲ್ಲವೂ ಸಹ ನೀರಿನ?ೇ ಸುಲಭವಾಗಿದೆ ಆದ್ದರಿಂದ ನಮ್ಮ ಜೀವನವನ್ನು ನಾವು ವೃದ್ಧಿಸಿಕೊಳ್ಳಲು ಗೊಂದಲ ಮಾಡಿಕೊಳ್ಳುತ್ತಿದ್ದೇವೆ ಆದರೆ ನನ್ನ ಪ್ರಕಾರ ಬುದ್ಧ ಎಂದರೆ ಕೇವಲ ಹೆಸರಲ್ಲ ಒಬ್ಬ ವ್ಯಕ್ತಿಯು ತನ್ನಲ್ಲಿರುವ ಎಲ್ಲಾ ದೌರ್ಬಲ್ಯಗಳನ್ನು ಕಳೆದುಕೊಂಡು ಮುಂದಿನ ಹಂತಕ್ಕೆ ಹೋಗುವುದೇ ಬುದ್ಧ, ತಮ್ಮ ಜೀವನದಲ್ಲಿಯೂ ದೌರ್ಬಲ್ಯಗಳನ್ನು ಕಳೆದುಕೊಂಡು ಮುಂದಿನ ಹಂತಕ್ಕೆ ಬಂದು ಜಗತ್ತಿಗೆ ಬೆಳಕಾಗಿದ್ದರೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೋಲಾರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಭಗವಾನ್ ಬುದ್ಧ ಜಯಂತಿಯನ್ನು ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಅತಿಥಿಗಳು ದೀಪಬೆಳಗಿಸಿ ಪು?್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಜಗತ್ತಿನಲ್ಲಿ ಯಾವುದಾದರೂ ಧರ್ಮ ವೈಜ್ಞಾನಿಕ ರೀತಿಯಲ್ಲಿ ಇದೇ ವೈಚಾರಿಕವಾಗಿ ಒಪ್ಪಿಕೊಳ್ಳಬಹುದಾದ ಧರ್ಮ ಇದೆ ಅಂದರೆ ಅದು ಕೇವಲ ಬೌದ್ಧಧರ್ಮ ವಾಗಿದೆ ಎಂದು ಖ್ಯಾತ ವಿಜ್ಞಾನಿ ಆಲ್ಬರ್ಟ್ ಐನ್ ಸ್ಟೀನ್ ಹೇಳಿದ್ದಾರೆ ಎಂದು ತಿಳಿಸಿದರು.

ಒಂದು ಧರ್ಮ ಎಂದರೆ ಕೇವಲ ಗುರುಗಳು ಹೇಳುವುದನ್ನು ಒಪ್ಪಿಕೊಳ್ಳುವುದಲ್ಲ ಅಥವಾ ಮೌಢ್ಯಗಳನ್ನು ನಂಬುವುದಲ್ಲ ಭಗವಾನ್ ಬುದ್ಧರು ಹೇಳಿದಂತೆ ಓದುವುದು ಒಳ್ಳೆಯದು ಆದರೆ ಆಲೋಚನೆ ಮಾಡುವುದು ಉತ್ತಮ ಏನೇ ಮಾಡಬೇಕಾದರೂ ತಾಳ್ಮೆ ಬಹಳ ಮುಖ್ಯವಾಗಿರಬೇಕು ಎಂದರು.

ಹೆಣ್ಣು ಹೊನ್ನು ಮಣ್ಣು ಇಂತಹ ವ್ಯಾಮೋಹಗಳಿಗೆ ಒಳಗಾಗುತ್ತಿದ್ದು ಪ್ರಸ್ತುತ ಅಧಿಕಾರವೂ ವ್ಯಾಮೋಹವಾಗಿ ಸೇರ್ಪಡೆಯಾಗುತ್ತಿದೆ ಉಲ್ಲವರೆ ಅಧಿಕಾರವನ್ನು ಅನುಭವಿಸುವಾಂತಗುತ್ತಿದ್ದಾರೆ ಒಟ್ಟಾರೆ ಬೌದ್ಧಧರ್ಮ ನಿಂತಿರುವುದು ಒಳ್ಳೆಯವನಗು ಒಳ್ಳೆಯದನ್ನು ಮಾಡುವುದರಿಂದ ಮಾತ್ರ ಬೌದ್ಧಧರ್ಮ ನಿಂತಿದೆ ಎಂದು ತಿಳಿಸಿದರು .

ಇಂದು ಬುದ್ಧ ಹುಣ್ಣಿಮೆಯಂತಹ ಪವಿತ್ರ ದಿನದಂದು ನಾವೆಲ್ಲರೂ ಸೇರಿ ಒಂದು ಆತ್ಮ ವಿಮರ್ಶೆ ಮಾಡಿಕೊಳ್ಳೋಣ ನಾವೆಲ್ಲರೂ ಒಳ್ಳೆಯವರಗೋಣ ಅದಕ್ಕೆ ನಾವು ಯಾವುದೇ ತಪ್ಪಸ್ಸು ಮಾಡಬೇಕಾಗಿಲ್ಲ



ದೇಹವನ್ನು ದಂಡಿಸಬೇಕಾಗಿಲ್ಲ ಆತ್ಮ ಶೋದಕರಿಗೆ ಬೆಳಕಿಗೆ ಬೆಳಕಗಬೇಕಾಗಿದೆ ಅಂದರೆ ನಾವು ಬೆಳಕಿನಲ್ಲಿ ಲಿನವಾಗಬೇಕು ಬೆಳಕು ಜಗತ್ತಿಗೆ ಬೆಳಕು ನೀಡುತ್ತದೆ ಅದರಲ್ಲಿ ನಾವೆಲ್ಲರೂ ಸೇರಿಕೊಳ್ಳಬೇಕು ನಮ್ಮ ಮನಸ್ಸನ್ನು ಶುದ್ಧವಾಗಿಟ್ಟುಕೊಂಡು ನಮ್ಮ ಮನಸ್ಸಿಗೆ ನಾವು ಬೆಳಕದರೆ ತಾವು ಸಮಾಜವನ್ನು ನೋಡುವ ದೃಷ್ಟಿಕೋನವೇ ಬದಲಾಗುತ್ತದೆ ಯಾರೇ ತಮಗೆ ಮಾರ್ಗದರ್ಶನ ನೀಡಬಹುದು ಆದರೆ ತೀರ್ಮಾನ ನಿಮ್ಮದಾಗಿರುತ್ತದೆ ಆದ್ದರಿಂದಲೇ ಬುದ್ಧರು ನಮಗೆ ಮಾರ್ಗದರ್ಶಕರು ಎಂದು ತಿಳಿಸಿದರು.

ಬೌದ್ಧಧರ್ಮದ ಗುರುಗಳಾದ ಪಾಂತೇಜಿ ಅವರು ಬೌದ್ಧಧರ್ಮದ ಮಹತ್ವ ಬುದ್ಧರು ಅನುಸರಿಸುತ್ತಿದ್ದ ಮಾರ್ಗ ಅವರ ಜೀವನ ಚರಿತ್ರೆ ಅವರ ಪಂಚಶೀಲ ತತ್ವಗಳನ್ನು ತಿಳಿಸಿ ಬುದ್ಧ ಎಂದರೆ ಜ್ಞಾನ,ಅರಿವು, ಬುದ್ಧ ವಂದನ, ಬಗ್ಗೆ ಮಾಹಿತಿ ನೀಡಿದರು.

ಪಂಡಿತ್ ಮುನಿವೆಂಕಟಪ್ಪ ಅವರು ಮಾತನಾಡಿ ಏ?ಯಾದ ಹೆಚ್ಚಿನ ಭಾಗಗಳಲ್ಲಿ ಆಚರಿಸಲಾಗುವ ಪ್ರಾಥಮಿಕವಾಗಿ ಬೌದ್ಧ ಹಬ್ಬವಾಗಿದ್ದು, ಗೌತಮ ಬುದ್ಧನಾದ ಮತ್ತು ಬೌದ್ಧಧರ್ಮವನ್ನು ಸ್ಥಾಪಿಸಿದ ರಾಜಕುಮಾರ ಸಿದ್ಧಾರ್ಥ ಗೌತಮನ ಜನನವನ್ನು ಸ್ಮರಿಸಲಾಗುತ್ತದೆ . ಬೌದ್ಧ ಸಂಪ್ರದಾಯ ಮತ್ತು ಪುರಾತತ್ತ್ವಜ್ಞರ ಪ್ರಕಾರ, ಗೌತಮ ಬುದ್ಧ, ಸುಮಾರು 623 ನೇಪಾಳದ ಲುಂಬಿನಿಯಲ್ಲಿ ಜನಿಸಿದರು.ತಾಯಿ ರಾಣಿ ಮಾಯಾ ದೇವಿ , ಅವಳು ತನ್ನ ಸ್ಥಳೀಯ ಮನೆಗೆ ಪ್ರಯಾಣ ಬೆಳೆಸುವಾಗ ಬುದ್ಧನನ್ನು ಹೆರಿಗೆ ಮಾಡಿದಳು, ಮತ್ತು ಅವನ ತಂದೆ ರಾಜ ಶುದ್ಧೋದನ ಬುದ್ಧನ ಜನ್ಮದಿನದ ನಿಖರವಾದ ವ?ವು ಶ್ರೀಲಂಕಾದ ಸಂಪ್ರದಾಯವನ್ನು ಆಧರಿಸಿದೆ, ಆದರೆ ಹಲವಾರು ಏ?ಯನ್ ಚಾಂದ್ರಸೌರ ಕ್ಯಾಲೆಂಡರ್‌ಗಳು ವಿಭಿನ್ನ ಚಂದ್ರ ದಿನಗಳನ್ನು ಹೇಳುತ್ತವೆ. ಆದ್ದರಿಂದ ಬುದ್ಧನ ಜನ್ಮದಿನದ ಆಚರಣೆಯ ದಿನಾಂಕವು ಪಶ್ಚಿಮ ಗ್ರೆಗೋರಿಯನ್ ಕ್ಯಾಲೆಂಡರ್‌ನಲ್ಲಿ ವ?ದಿಂದ ವ?ಕ್ಕೆ ಬದಲಾಗುತ್ತದೆ ಆದರೆ ಇದನ್ನು ಸಾಮಾನ್ಯವಾಗಿ ಏಪ್ರಿಲ್ ಅಥವಾ ಮೇ ತಿಂಗಳಲ್ಲಿ ಆಚರಿಸಲಾಗುತ್ತದೆ ಎಂದರು.

ಮಹಾನ್ ಬುದ್ಧರು ಶಾಂತ ಪ್ರಿಯರು ಆದ್ದರಿಂದಲೇ ಇಂದು ಬುದ್ಧರ ಜನ್ಮದಿನ ಹೌದು ಹಾಗೂ ಭಾರತ ಮತ್ತು ಪಾಕಿಸ್ತಾನ ನಡುವೆ ನಡೆಯುತ್ತಿರುವ ಯುದ್ಧದಲ್ಲಿಯೂ ಇಂದೆ ಎರಡು ದೇಶದವರು ಶಾಂತಿ ಸಭೆಯನ್ನು ನಡೆಸುತ್ತಿರುವುದು ವಿಶೇ?ವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಕೊತ್ತೂರು ಡಾ.ಜಿ.ಮಂಜುನಾಥ್,ವಿಧಾನ ಪರಿ?ತ್ ಸದಸ್ಯ ಎಂ.ಎಲ್.ಅನಿಲ್ ಕುಮಾರ್,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಜಯಲಕ್ಷ್ಮಿ,ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀನಿವಾಸ್, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ವೈ.ಶಿವಕುಮಾರ್, ನಗರಸಭೆ ಸದಸ್ಯರಾದ ರಾಮಯ್ಯ, ಅರಿವು ಶಿವಪ್ಪ,ಪಿಚ್ಚಳ್ಳಿ ಶ್ರೀನಿವಾಸ್, ದಲಿತ ಮುಖಂಡರಾದ ವಿಜಿಕುಮಾರ್,ಚಂದ್ರಶೇಖರ್ ,ವೆಂಕಟಾಚಲಪತಿ,ಮತ್ತಿತರರು ಉಪಸ್ಥಿತರಿದ್ದರು.

# ನಾಗರಿಕ ರಕ್ಷಣಾ ಸ್ವಯಂಸೇವಕರಾಗಿ ನೋಂದಾಯಿಸಿಕೊಳ್ಳಲು ಮೈ ಭಾರತ್‌ನಿಂದ ಯುವಕರಿಗೆ ಕರೆ

**ಬೆಂಗಳೂರು:** ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಮೈ ಭಾರತ್, ದೇಶಾದ್ಯಂತ ಯುವಕರನ್ನು ನಾಗರಿಕ ರಕ್ಷಣಾ ಸ್ವಯಂಸೇವಕರಾಗಿ ನೋಂದಾಯಿಸಿಕೊಳ್ಳುವಂತೆ ಕರೆ ನೀಡಿ ಸಕ್ರಿಯವಾಗಿ ಸಜ್ಜುಗೊಳಿಸುತ್ತಿದೆ.

ಯುವ ನಾಗರಿಕರು ವಿಶೇಷವಾಗಿ ತುರ್ತು ಪರಿಸ್ಥಿತಿಗಳು ಮತ್ತು ಬಿಕ್ಕಟ್ಟಿನ ಸಮಯದಲ್ಲಿ ರಾಷ್ಟ್ರೀಯ ಉದ್ದೇಶದಲ್ಲಿ ಪ್ರಮುಖ ಪಾತ್ರ ವಹಿಸಲು ಸಬಲೀಕರಣಗೊಳಿಸುವ ಸಂಘಟಿತ ಪ್ರಯತ್ನದ ಭಾಗವಾಗಿದೆ. ನೈಸರ್ಗಿಕ ವಿಕೋಪಗಳು, ಅಪಘಾತಗಳು, ಸಾರ್ವಜನಿಕ ತುರ್ತು ಪರಿಸ್ಥಿತಿಗಳು ಮತ್ತು ಇತರ ಅನಿರೀಕ್ಷಿತ ಸಂದರ್ಭಗಳಲ್ಲಿ ನಾಗರಿಕ ಆಡಳಿತವನ್ನು ಪೂರೈಸಬಲ್ಲ ಉತ್ತಮ ತರಬೇತಿ ಪಡೆದು, ಸ್ಪಂದಿಸುವ ಮತ್ತು ಸ್ಥಿತಿಸ್ಥಾಪಕ ಸ್ವಯಂಸೇವಕ ಪಡೆಯನ್ನು ನಿರ್ಮಿಸುವ ಗುರಿಯನ್ನು ಈ ಕರೆ ಹೊಂದಿದೆ.

ಪ್ರಸ್ತುತ ಸನ್ನಿವೇಶ ಮತ್ತು ಉದಯೋನ್ಮುಖ ಭದ್ರತಾ ಕಾಳಜಿಗಳನ್ನು ಗಮನದಲ್ಲಿಟ್ಟುಕೊಂಡು, ಬಲವಾದ, ಸಮುದಾಯ ಆಧಾರಿತ ಪ್ರತಿಕ್ರಿಯೆ ಕಾರ್ಯವಿಧಾನವನ್ನು ಸ್ಥಾಪಿಸುವ ತುರ್ತು ಅಗತ್ಯವಿದೆ. ವ್ಯಾಪಕ ಶ್ರೇಣಿಯ ಸೇವೆಗಳ ಮೂಲಕ ಸ್ಥಳೀಯ ಅಧಿಕಾರಿಗಳನ್ನು ಬೆಂಬಲಿಸುವ ಮೂಲಕ ನಾಗರಿಕ ರಕ್ಷಣಾ ಸ್ವಯಂಸೇವಕರು ಈ ವಿಷಯದಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತಾರೆ. ಇವುಗಳಲ್ಲಿ ರಕ್ಷಣೆ ಮತ್ತು ಸ್ಥಳಾಂತರಿಸುವ ಕಾರ್ಯಾಚರಣೆಗಳು, ಪ್ರಥಮ ಚಿಕಿತ್ಸೆ ಮತ್ತು ತುರ್ತು ಆರೈಕೆ, ಸಂಚಾರ ನಿರ್ವಹಣೆ, ಜನಸಂದಣಿ ನಿಯಂತ್ರಣ, ಸಾರ್ವಜನಿಕ ಸುರಕ್ಷತೆ ಮತ್ತು ವಿಪತ್ತು ಪ್ರತಿಕ್ರಿಯೆ ಮತ್ತು ಪುನರ್ವಸತಿ ಪ್ರಯತ್ನಗಳಲ್ಲಿ ಸಹಾಯ ಮಾಡುವುದು ಸೇರಿವೆ. ಸಿದ್ಧ ಮತ್ತು ತರಬೇತಿ ಪಡೆದ ನಾಗರಿಕ ಪಡೆಯ ಪ್ರಾಮುಖ್ಯತೆ ಹಿಂದೆಂದಿಗಿಂತಲೂ ಹೆಚ್ಚಾಗಿದೆ ಮತ್ತು ಈ ರಾಷ್ಟ್ರೀಯ ಧ್ಯೇಯಕ್ಕೆ ಕೊಡುಗೆ ನೀಡಲು ಮೈ ಭಾರತ್ ಬದ್ಧವಾಗಿದೆ.

ಆದ್ದರಿಂದ, ಮೈ ಭಾರತ್, ಯುವ ಸ್ವಯಂಸೇವಕರ ಕ್ರಿಯಾತ್ಮಕ ಜಾಲ ಮತ್ತು ಇತರ ಎಲ್ಲಾ ಉತ್ಸಾಹಿ ಯುವ ನಾಗರಿಕರು ಮುಂದೆ ಬಂದು ಮೈ ಭಾರತ್ ನಾಗರಿಕ ರಕ್ಷಣಾ ಸ್ವಯಂಸೇವಕರಾಗಿ ನೋಂದಾಯಿಸಿಕೊಳ್ಳುವಂತೆ ಮನವಿ ಮಾಡುತ್ತದೆ.

ಅಸ್ತಿತ್ವದಲ್ಲಿರುವ ಮೈ ಭಾರತ್ ಸ್ವಯಂಸೇವಕರು ಮತ್ತು ಈ ಸಾಮರ್ಥ್ಯದಲ್ಲಿ ರಾಷ್ಟ್ರಕ್ಕೆ ಸೇವೆ ಸಲ್ಲಿಸ ಬಯಸುವ ಹೊಸ ವ್ಯಕ್ತಿಗಳು ಸೇರಲು ಸ್ವಾಗತ. ಯುವಕರಲ್ಲಿ ಬಲವಾದ ನಾಗರಿಕ ಜವಾಬ್ದಾರಿ ಮತ್ತು ಶಿಸ್ತಿನ ಪ್ರಜ್ಞೆಯನ್ನು ತುಂಬುವುದಲ್ಲದೆ, ನಿರ್ಣಾಯಕ ಸಂದರ್ಭಗಳಲ್ಲಿ ತ್ವರಿತವಾಗಿ ಕಾರ್ಯನಿರ್ವಹಿಸಲು ಪ್ರಾಯೋಗಿಕ ಜೀವ ಉಳಿಸುವ ಕೌಶಲ್ಯ ಮತ್ತು ತರಬೇತಿಯನ್ನು ನೀಡುತ್ತದೆ.

ನೋಂದಣಿ ಪ್ರಕ್ರಿಯೆಯು ಸರಳ ಮತ್ತು ಅಧಿಕೃತವಾಗಿದ್ದು, ಮೈ ಭಾರತ್ ಪೋರ್ಟಲ್ ಮೂಲಕ: https://mybharat.gov.in. ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ರಾಷ್ಟ್ರೀಯ ಭದ್ರತೆಯ ಉದ್ದೇಶಕ್ಕಾಗಿ ಆಸಕ್ತಿ ಹೊಂದಿರುವ ಎಲ್ಲಾ ಯುವಕರು/ಸಾರ್ವಜನಿಕರನ್ನು ಸಜ್ಜುಗೊಳಿಸಲು ಯುವಕರಿಗೆ ಇದು ಸ್ಪಷ್ಟ ಕರೆಯಾಗಿದೆ.

ಹೆಚ್ಚಿನ ಮಾಹಿತಿಗಾಗಿ, ಎ ನಾಗಲಕ್ಷ್ಮಿ, ಜಿಲ್ಲಾ ಯುವ ಅಧಿಕಾರಿ, ಮೈ ಭಾರತ್,ನೆಹರು ಯುವಕೇಂದ್ರ, ಬೆಂಗಳೂರು ನಗರ, ದೂರವಾಣಿ ಸಂಖ್ಯೆ 080–23504273 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.



# ಜನರ ರಕ್ಷಣೆ ನನ್ನ ಹೊಣೆ –ಕೆ ಹೆಚ್ ಮುನಿಯಪ್ಪ

**ಕೋಲಾರ:** ಆಹಾರ ನಾಗರೀಕ ಸರಬರಾಜು ಮತ್ತು ವ್ಯವಹಾರಗಳ ಸಚಿವರಾದ ಕೆ ಹೆಚ್ ಮುನಿಯಪ್ಪ ಕೋಲಾರ ನಗರದ ಅವರ ನಿವಾಸದಲ್ಲಿ ಗಣೇಶನ ಹೋಮ. ದೇವತಾ ಪೂಜಾ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು.

ಕೋಲಾರ–ನಗರದ ಹಾರೋಹಳ್ಳಿಯಲ್ಲಿರುವ ಆಹಾರ ನಾಗರೀಕ ಸರಬರಾಜು ಮತ್ತು ವ್ಯವಹಾರಗಳ ಸಚಿವರಾದ ಕೆ ಹೆಚ್ ಮುನಿಯಪ್ಪ ಕೋಲಾರ ನಗರದ ಅವರ ನಿವಾಸದಲ್ಲಿ ಗಣೇಶನ ಹೋಮ. ದೇವತಾ ಪೂಜಾ ಹಾಗೂ 9:30 ಗಂಟೆಗೆ ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮಗಳು ನಡೆಯಿತು. ಈ ಸಂಧರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಕೋಲಾರ ನನ್ನ ಕರ್ಮಭೂಮಿ ಸತತವಾಗಿ ಏಳುಬಾರಿ ಸಂಸದನನ್ನಾಗಿ ಆಯ್ಕೆ ಮಾಡಿದ್ದೀರಿ ನಿಮಗೆ ಎಂದಿಗೂ ನಾನು ಚಿರಋಣಿ ಹಾಗೆಯೇ ನಿರಂತರವಾಗಿ ನನಗೆ ಆಶೀರ್ವಾದ ಮಾಡಿದ ಜನರ ರಕ್ಷಣೆ ನನ್ನ ಹೊಣೆ ಎಂದರು.

ಜಿಲ್ಲೆಯಲ್ಲಿ ಪಕ್ಷ ಸುಭದ್ರವಾಗಿದೆ ಆದರೆ ವಿಧಾನಸಭಾ ಚುನಾವಣೆಯನಂತರ ಬಹಳ ದಿನ ಕೋಲಾರಕ್ಕೆ ಬರಲಾಗಲಿಲ್ಲ ನಿರಂತರವಾಗಿ ನನ್ನ ಜೊತೆ ಮೂವತ್ತು ವರ್ಷಕ್ಕೂ ಮೇಲ್ಪಟ್ಟು ನೀತಿದ್ದೀರಿ ನಿಮ್ಮ ಯೋಗಕ್ಷೇಮ ಮತ್ತು ಕಷ್ಟಸುಖಗಳಲ್ಲಿ ಭಾಗಿಯಾಗಿ ನಿಮ್ಮೊಂದಿಗಿರಲು ತಿಂಗಳಲ್ಲಿ ನಾಲ್ಕರಿಂದ ಐದು ದಿನ ನಿಮ್ಮೊಂದಿಗಿದ್ದು ಮುಬರುವಂತಹ ಎಲ್ಲಾ ಚುನಾವಣೆಗಳಲ್ಲೂ ಜಿಲ್ಲೆಯಲ್ಲಿ ಪಕ್ಷವು ಹೆಚ್ಚಿನ ಸ್ಥಾನಗಳನ್ನು ಗೆಲ್ಲುವುದರೊಂದಿಗೆ ಕಾರ್ಯಕರ್ತರಿಗೆ ಶಕ್ತಿತುಂಬುವ ಕೆಲಸವಾಗುತ್ತದೆಂದರು.

ದಕ್ಷಿಣ ಭಾರತದಲ್ಲಿ ಸತತವಾಗಿ ಏಳುಬಾರಿ ಗೆದ್ದಿರುವುದು ಒಬ್ಬರಿಬ್ಬರು ಅಂತಹವರ ಸಾಲಿಗೆ ನನ್ನನ್ನು ನೀವು ಕೊಂಡ್ಯೆದಿದ್ದೀರಿ ಕೋಲಾರ ಚಿಕ್ಕಬಳ್ಳಾಪುರದ ಜನರ ಋಣ ನನ್ನಮೇಲಿದೆ ನಿಮ್ಮ ಯೋಗಕ್ಷೇಮ ನನ್ನ ಕರ್ತವ್ಯ ವೆಂದರು.

ಈ ಕಾರ್ಯಕ್ರಮದಲ್ಲಿ ಕೋಲಾರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಲಕ್ಷ್ಮೀ ನಾರಾಯಣ್ ,ಬಂಗಾರಪೇಟೆ ಶಾಸಕರಾದ ಎಸ್ ಎನ್ ನಾರಾಯಣಸ್ವಾಮಿ ,ಕೆಜಿಎಫ್ ಶಾಸಕಿ ರೂಪಾಶಶಿದರ್ , ಕಾರ್ಯಾಧ್ಯಕ್ಷರಾದ ಊರುಬಾಗಿಲು ಶ್ರೀನಿವಾಸ್ ,ಜಯದೇವ್ ,ರತ್ನಮ್ಮ ,ಪ್ರಸಾದ್ ಬಾಬು , ಉದಯಶಂಕರ್ , ಚಂದ್ರಾರೆಡ್ಡಿ ,ಸೋಮಶೇಖರ್ ,ಮುರಳಿಗೌಡ ,ರಾಮಪ್ರಸಾದ್ ,ಮಂಜುನಾಥ್ ಇದ್ದರು.

# ವೈರಾಗ್ಯ ಜೀವನವನ್ನು ತ್ಯಾಗಮಾಡಿ ಇಡೀ ಜಗತ್ತಿಗೆ ಬೆಳಕು ನೀಡಿದವರು ಬುದ್ಧ

**ಮೈಸೂರು:** ವೈರಾಗ್ಯ ಜೀವನವನ್ನು ತ್ಯಾಗ ಮಾಡಿ ಇಡೀ ಜಗತ್ತಿಗೆ ಬೆಳಕು ನೀಡಿದವರು ಬುದ್ಧ. ಬುದ್ಧ ಎಂದರೆ ಬೆಳಕು ಇಂತಹ ಮಹಾನ್ ವ್ಯಕ್ತಿಯು ನಮಗೆ ಇಂದಿಗೂ ಸಹ ಆದರ್ಶವಾಗಿದ್ದಾರೆ ಎಂದು ಕೃಷ್ಣರಾಜ ಕ್ಷೇತ್ರದ ವಿಧಾನ ಸಭೆಯ ಶಾಸಕರಾದ ಟಿ.ಎಸ್.ಶ್ರೀವತ್ಸ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಭಗವಾನ್ ಬುದ್ಧ ಜಯಂತ್ಯೋತ್ಸವ ಸಮಿತಿ ಇವರ ಸಹಯೋಗದಲ್ಲಿ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ, ಭಗವಾನ್ ಬುದ್ಧ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು.

ಭಗವಾನ್ ಬುದ್ಧ ಇರುವಂತಹ ನಡುವಿನ ಅನೇಕ ವಿಚಾರಗಳನ್ನು ನೋಡಿದ್ದೇವೆ. ಅವರು ಮಹಾರಾಜರಾಗಿದ್ದ ಅವರು ಸಿದ್ಧಾರ್ಥರಾಗಿ ಅವರು ರಸ್ತೆಯಲ್ಲಿ ಪ್ರಯಾಣ ಮಾಡುವ ಸಂದರ್ಭದಲ್ಲಿ ಯಾರು ಒಬ್ಬ ರೋಗಿ, ವೃದ್ಧ ಹಾಗೂ ಶವವನ್ನು ನೋಡಿದರು. ಈ ಮೂರು ನನ್ನ ರಾಜ್ಯದ ಸಾಮ್ರಾಜ್ಯದಲ್ಲಿ ಇಂತಹ ಘಟನೆಗಳು ನೋಡಿದಾಗ ಇದರ ಬಗ್ಗೆ ತಿಳಿದುಕೊಳ್ಳಲು ಗುರುಗಳ ಬಳಿ ಹೋಗಿ ಕೇಳಿದಾಗ. ನಿನಗೆ ಎಲ್ಲದಕ್ಕೂ ಉತ್ತರ ಸಿಗಬೇಕು ಎನ್ನುವುದಾದರೆ ನೀನು ವೈರಾಗ್ಯ ಆಗಬೇಕು. ಆಗ ಮಾತ್ರ ನಿನಗೆ ಪೂರ್ಣ ಅರಿವು ಆಗುತ್ತದೆ ಎಂದು ಅವರು ತಿಳಿಸಿಕೊಟ್ಟರು.

ನಂತರ ಭಗವಾನ್ ಬುದ್ಧ ದೀರ್ಘ ಕಠಿಣವಾದಂತಹ 26 ವರ್ಷಗಳ ತಪಸ್ಸನ್ನು ಮಾಡಿದ ಅವರಿಗೆ ಭೋಧಿ ವೃಕ್ಷದ ಕೆಳಗೆ ಜ್ಞಾನೋದಯವಾಗಿ ಇಡೀ ಜಗತ್ತಿಗೆ ಬೆಳಕನ್ನು ನೀಡಿದರು. ಬೌದ್ಧ ಧರ್ಮವನ್ನು ಇಡೀ ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ ಎಂದು ಅವರು ಹೇಳಿದರು.



ಆಸೆಯ ದುಃಖಕ್ಕೆ ಮೂಲ ಕಾರಣ, ದುಃಖ ಎನ್ನುವುದು ಇದೆ ಎಂದರೆ ಆ ದುಃಖ ಎನ್ನುವುದು ನಮ್ಮ ಅಸ್ತಿತ್ವದಲ್ಲಿಯೇ ಇದೆ, ನಮ್ಮ ಮನಸ್ಸಿನಲ್ಲಿಯೇ ಇದೆ, ಅದಕ್ಕೆ ಅವರು 8 ಹೆಜ್ಜೆಗಳ ಬಗ್ಗೆ ಹೇಳಿದ್ದಾರೆ. ಸರಿಯಾದ ತಿಳುವಳಿಕೆ, ಸರಿಯಾದ ಉದ್ದೇಶ, ಸರಿಯಾದ ಮಾತು, ಸರಿಯಾದ ನಡವಳಿಕೆ, ಸರಿಯಾದ ಜೀವನದ ರೀತಿಯ ಆಯ್ಕೆ, ಸರಿಯಾದ ಪ್ರಯತ್ನ, ಸರಿಯಾದ ಎಚ್ಚರ, ಸರಿಯಾದ ಕೇಂದ್ರೀಕೃತ ಮನಸ್ಸು ಈ 8 ಹೆಜ್ಜೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ. ನಮ್ಮ ಮನಸ್ಸಿನಲ್ಲಿ ಏನು ಆಸೆ ದುರಾಸೆ ಎಲ್ಲವೂ ದೂರ ಆಗುತ್ತದೆ ಎಂದು ತಿಳಿಸಿದರು.

ಅಪಾರ ಜಿಲ್ಲಾಧಿಕಾರಿಯಾದ ಡಾ. ಪಿ. ಶಿವರಾಜು ಅವರು ಮಾತನಾಡಿ ಭಗವಾನ್ ಬುದ್ಧ ಈ ಜಗತ್ತಿನ ಬೆಳಕು. ನಾವು ಕೆಲವೇ ಕೆಲವು ದಾಶಿಕರು, ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ಪಾಲನೆ ಮಾಡಿಕೊಳ್ಳುತ್ತಾ ಅವರ ಜಯಂತಿಗಳನ್ನು ಆಚರಣೆ ಮಾಡುತ್ತಿದ್ದೇವೆ ಎಂದು ಹೇಳಿದರು.

2569 ವರ್ಷ ಅವರ ಯುದ್ಧ ಕಾಲಘಟ್ಟ ಮತ್ತು ಇವತ್ತು ನಾವು ಇರುವಂತಹ ಕಾಲಘಟ್ಟಕ್ಕೆ ಇರುವಂತಹ ಅಂತರ ತುಂಬಾ ಇದೆ. ಆದರೆ ಬುದ್ಧರಿಗೂ ನಮಗೂ ಇರುವಂತಹ ಅಷ್ಟು ದೂರ ಇಲ್ಲ ಏಕೆಂದರೆ ಅವರು ನಮ್ಮ ಎಲ್ಲರ ಮನಸ್ಸಿನ ಒಳಗಡೆ ಇದ್ದಾರೆ ಎಂದು ಹೇಳಿದರು.

ಭಗವಾನ್ ಬುದ್ಧ 70–80 ತಲೆಮಾರುಗಳಿಂದ ಇಡೀ ಜಗತ್ತಿಗೆ ಗೊತ್ತಿದ್ದಾರೆ ಅಂತಹ ಮಹಾನ್ ವ್ಯಕ್ತಿ ನಮ್ಮ ಎಲ್ಲರಿಗೂ ತಿಳಿದಿದ್ದಾರೆ. ಅವರ ಆದರ್ಶಗಳು ನಮ್ಮೆಲ್ಲರಿಗೂ ಆದರ್ಶವಾಗಬೇಕು. ಇಂತಹ ಮಹಾನ್ ವ್ಯಕ್ತಿಗಳ ಬಗ್ಗೆ ಅತಿ ಹೆಚ್ಚಾಗಿ ಪಾಲನೆ ಮಾಡಬೇಕು. ಅವರು ತೋರಿಸುವಂತಹ ಶಾಂತಿ, ಅಹಿಂಸೆ, ಮತ್ತೊಬ್ಬರಿಗೆ ಗೌರವ ಕೊಡುವ ರೀತಿ, ಯಾರಿಗೂ ಸಹ ಅವಹೇಳನ ಮಾಡಬಾರದು ಈ ರೀತಿಯ ಎಲ್ಲಾ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು. ಬುದ್ಧ ಪೂರ್ಣಿಮೆಯ ದಿನ ಅವರಿಗೆ ಜ್ಞಾನೋದಯವಾಯಿತು. ಭಗವಾನ್ ಬುದ್ಧರನ್ನು ಬೆಳಕು ಎಂದು ಕರೆಯುವುದ?ೇ ಅಲ್ಲ, ಇಡೀ ಜಗತ್ತಿಗೆ ಅವರು ಬೆಳಕನ್ನು ತೋರಿಸಿ ಅವರೇ ಪೌರ್ಣಮಿಯ ಸಾಂಕೇತಿಕವಾಗಿದ್ದಾರೆ ಅನಿಸುತ್ತದೆ ಎಂದು ಹೇಳಿದರು.

ಮೈಸೂರು ವಿಶ್ವಮೈತ್ರಿ ಬುದ್ಧ ವಿಹಾರ ಡಾಕ್ಟರ್ ಕಲ್ಯಾಣ ಸಿರಿ ಭಾಂತೇಜಿ ಅವರು ಮಾತನಾಡಿ ಭಗವಾನ್ ಬುದ್ಧ ಜನಿಸುವವರೆಗೂ ಅಜ್ಞಾನದ ಅಂದಕಾರದಲ್ಲಿ ಜಗತ್ತು ಇತ್ತು. ಅದನ್ನು ಪರಿಪೂರ್ಣವಾಗಿ ಬೌದ್ಧನಾಗಿಸಿ ಬೆಳಕನ್ನು ಕೊಟ್ಟಂತಹ ದಿನ ಇವತ್ತು ಎಂದು ಹೇಳಿದರು.

ಈ ದಿನ ತುಂಬಾ ವಿಶೇಷಕರವಾದದ್ದು, ಯಾಕೆಂದರೆ ಬುದ್ಧ ಜನಿಸಿದ್ದು ವೈಶಾಖ ಪೂರ್ಣಿಮೆ ದಿನ. ಅವರಿಗೆ ಜ್ಞಾನೋದಯವಾಗಿದ್ದು ವೈಶಾಖ ಪೂರ್ಣಿಮೆ ದಿನ ಹಾಗೆ ಅವರು ಮಹಾಪರಿವಿಭೂಷಣ ಹೊಂದಿದಂತಹ ದಿನ ಕೂಡ ಇದೇ ವೈಶಾಖ ಪೂರ್ಣಿಮೆ ದಿನ. ಇದು ಜಗತ್ತಿನಲ್ಲೇ ಈ 3 ಕ್ರಿಯೆಗಳು ನಡೆದಿರುವಂತದ್ದು, ಭಗವಾನ್ ಬುದ್ಧರಲ್ಲಿ ಮಾತ್ರ ನಾವು ಕಾಣಲಿಕ್ಕೆ ಸಾಧ್ಯ ಎಂದು ತಿಳಿಸಿದರು.

2569 ವರ್ಷಗಳಾಗಿ ಇಷ್ಟು ವರ್ಷಗಳವರೆಗೂ ಕೂಡ ಬುದ್ಧ ಧರ್ಮ ವಿಶ್ವದ್ಯಾಂತ ತನ್ನ ಅಸ್ತಿತ್ವವನ್ನು ಉಳಿಸಿಕೊಂಡಿದೆ. ಎಂದರೆ ಅದರ ಒಂದು ಮಹತ್ವ ಎಷ್ಟು ಮಾನವೀಯ ಮೌಲ್ಯಗಳಿಂದ ತುಂಬಿದೆ ಎನ್ನುವಂತದ್ದು ಎಂದು ಹೇಳಿದರು.

ಬುದ್ಧ ಎಂದರೆ ಪರಿಪೂರ್ಣ ಎಚ್ಚರಗೊಂಡಂತಹ ವ್ಯಕ್ತಿ. ಪರಿಪೂರ್ಣವಾಗಿ ಎಚ್ಚರಗೊಂಡು ಮತ್ತೆ ಸಮೂಹ ಸಮೃದ್ಧಿಯನ್ನು ಪಡೆದುಕೊಂಡಿರುವ ಅಖಂಡ ಜ್ಞಾನವನ್ನು ಗಳಿಸಿರುವ ಸರ್ವಜ್ಞಾನೀಯ ಸ್ವರೂಪವೇ ಬುದ್ಧ ಎಂದು ಹೇಳಿದರು. ಪ್ರಪಂಚದಲ್ಲಿ ಪರಿಪೂರ್ಣ ಜ್ಞಾನೋದಯ ಕಂಡಂತಹ ಏಕೈಕ ಮಹಾನ್ ವ್ಯಕ್ತಿ ಬುದ್ಧ ಇವರು ಯಾವುದೇ ದೇವ ದೂತರಲ್ಲ, ದೇವರ ಮಗನಲ್ಲ, ದೇವರ ಸ್ವರೂಪವಲ್ಲ, ಮಾನವರು ಅಲ್ಲ, ಈ ಎಲ್ಲವನ್ನು ಮೀರಿರುವಂತಹ ಸಮಯ ಸಂಭೋಗಿಯನ್ನು ಪಡೆದಿರುವಂತಹ ಮಹಾನ್ ಪುರುಷರು, ಮಾರ್ಗದರ್ಶಕರು ಎಂದು ತಿಳಿಸಿದರು.

ಲೇಖಕರು ಮತ್ತು ಪ್ರಾಧ್ಯಾಪಕರು ಡಾ. ರಹಮತ್ ತರೀಕೆರೆ ಅವರು ಮಾತನಾಡಿ ಬುದ್ಧ ಪೂರ್ಣಿಮೆಯನ್ನು ವೈಶಾಖ ಅಥವಾ ಬುದ್ಧ ಜಯಂತಿ ಎಂದೂ ಕರೆಯುತ್ತಾರೆ, ಇದು ಭಗವಾನ್ ಗೌತಮ ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾಪರಿನಿರ್ವಾಣವನ್ನು ಸೂಚಿಸುತ್ತದೆ. ಇದು ಪ್ರಪಂಚದಾದ್ಯಂತ ಬೌದ್ಧರಿಗೆ ಅತ್ಯಂತ ಪವಿತ್ರ ದಿನಗಳಲ್ಲಿ ಒಂದಾಗಿದೆ, ಇದನ್ನು ಬಹಳ ಭಕ್ತಿ, ಆಧ್ಯಾತ್ಮಿಕ ಉತ್ಸಾಹ ಮತ್ತು ಸಾಂಸ್ಕೃತಿಕ ಮಹತ್ವದಿಂದ ಆಚರಿಸಲಾಗುತ್ತದೆ. ಹಿಂದೂ ಮಾಸ ವೈಶಾಖದಲ್ಲಿ ಹುಣ್ಣಿಮೆಯ ದಿನದಂದು ಆಚರಿಸಲಾಗುವ ಬುದ್ಧ ಪೂರ್ಣಿಮೆಯು ಹಲವಾರು ದೇಶಗಳಲ್ಲಿ ಸಾರ್ವಜನಿಕ ರಜಾದಿನವಾಗಿದೆ ಮತ್ತು ಶಾಂತಿ, ಕರುಣೆ ಮತ್ತು ಸಾವಧಾನತೆಯ ಸಮಯವಾಗಿದೆ ಎಂದು ತಿಳಿಸಿದರು.

ಯಾರು ಬೇಕಾದರೂ ಬುದ್ಧ ಮಾರ್ಗವನ್ನು ಅನುಸರಿಸಿ ದುಃಖದಿಂದ ಮುಕ್ತರಾಗಬಹುದು ಮತ್ತು ತನ್ನಂತೆ ಎಚ್ಚರದ ಸ್ಥಿತಿಯನ್ನು ಹೊಂದಬಹುದು. ಆದರೆ ಈ ಸಿದ್ಧಿಗೆ ಸ್ವಂತ ಪ್ರಯತ್ನ, ಸಾಧನೆ ಮಾತ್ರ ಕಾರಣ ಎಂದು ಹೇಳಿದ. ಭಗವಾನ್ ಬುದ್ಧ ರಾಜಕೀಯ ಯುದ್ಧದಿಂದ ವಿಮುಕ್ತರಾದರು ಆದರೆ ಸಾಮಾಜಿಕ ಯುದ್ಧಗಳಿಂದ ದೂರ ಉಳಿದು ಒಂದು ಯುದ್ಧದಿಂದ ವಿನುತರಾಗಿ ಇನ್ನೊಂದು ಯುದ್ಧಕ್ಕೆ ತೊಡಗಿದರು. ಯುದ್ಧ ಭಾರತದಲ್ಲಿ ಸಮಾನತೆಯನ್ನು ಸಾಮಾಜಿಕವಾಗಿ ಸಮಾನತೆಯನ್ನು ತರುವಂತ ಯುದ್ಧ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ. ಎನ್. ಮಲ್ಲಿಕಾರ್ಜುನ ಸ್ವಾಮಿ, ಸಹಾಯಕ ನಿರ್ದೇಶಕರಾದ ಎಂ. ಡಿ. ಸುದರ್ಶನ್, ಮಹಾಬೋಧಿ ನಿರ್ದೇಶಕರಾದ ಪೂಜ್ಯ ಸೇವಾನ ಭಂತೇಜಿ, ಕರ್ನಾಟಕ ಬುದ್ಧ ಧರ್ಮ ಸಮಿತಿಯ ಜಗನ್ನಾಥ ಬೋಧಿ ಸತ್ವ ಚಾರಿಟಬಲ್ ಟ್ರಸ್ಟ್ , ಅರಿವು ಬುದ್ಧ ಜ್ಞಾನ ಕೇಂದ್ರ ಕೆ.ಆರ್. ಗೋಪಾಲ ಕೃಷ್ಣ, ಇಂದ್ರಮ ಹಾಗೂ ಮತ್ತಿತರು ಉಪಸ್ಥಿತರಿದ್ದರು.

ಸಂಜೆ ಮುಗಿಲು
ಬುಧವಾರ
14.5.2025



# 15ಕ್ಕೆ ಚಾಮರಾಜೇಶ್ವರ ದೇವಾಲಯ ಆವರಣದಲ್ಲಿ ಅಣಕು ಪ್ರದರ್ಶನ



**ಚಾಮರಾಜನಗರ:** ತುರ್ತು ಸಂದರ್ಭದಲ್ಲಿ ನಾಗರಿಕರನ್ನು ಹಾಗೂ ಪ್ರಮುಖ ಸ್ಥಳಗಳನ್ನು ರಕ್ಷಣೆ ಮಾಡುವ ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನವನ್ನು (ಮಾಕ್ ಡ್ರಿಲ್) ಚಾಮರಾಜನಗರ ಪಟ್ಟಣದ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಮೇ 15ರಂದು ಸಂಜೆ 4 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಾಗರಿಕರ ರಕ್ಷಣಾ ಕಾರ್ಯ ಚಟುವಟಿಕೆಗಳ ಕುರಿತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧ ಮಾಕ್ ಡ್ರಿಲ್ ಆಯೋಜನೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತುರ್ತು ಸಂದರ್ಭ ಅವಘಡಗಳು ಸಂಭವಿಸಿದ ಸಮಯದಲ್ಲಿ ಜನರು ಗಾಬರಿ ಅಥವಾ ಆತಂಕಕ್ಕೆ ಒಳಗಾಗದಂತೆ ಆತ್ಮವಿಶ್ವಾಸ ತುಂಬಿ ಅರಿವು ಮೂಡಿಸುವ ಉದ್ದೇಶದಿಂದ ಅಣಕು ಪ್ರದರ್ಶನವನ್ನು ನಡೆಸಲಾಗುತ್ತದೆ. ಇದು ಅಣಕು ಕಾರ್ಯಾಚರಣೆ ಮಾತ್ರವಾಗಿದ್ದು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದರು.

ನಗರದ ಚಾಮರಾಜೇಶ್ವರ ದೇವಾಲಯದಲ್ಲಿ ಅಣಕು ಕಾರ್ಯಚರಣೆ (ಮಾಕ್ ಡ್ರಿಲ್) ಪ್ರದರ್ಶನ ಕೈಗೊಂಡು ಜಾಗೃತಿ ಮೂಡಿಸಲಾಗುತ್ತದೆ. ಈ ಅಣಕು ಕಾರ್ಯಚರಣೆಗೆ ಪೊಲೀಸ್ ಇಲಾಖೆ, ಅಗ್ನಿಶಾಮಕ ದಳ, ಹೋಂ ಗಾರ್ಡ್, ವೈದ್ಯಕೀಯ ತಂಡ, ಸಾರಿಗೆ ತಂಡ, ಕಂಟ್ರೋಲ್ ರೂಂ, ಇನ್ನಿತರ ತಂಡಗಳನ್ನು ರಚಿಸಲಾಗಿದ್ದು ಸಂಬಂಧಪಟ್ಟ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ತುರ್ತು ಸಂದರ್ಭದಲ್ಲಿ ನಾಗರಿಕರನ್ನು ರಕ್ಷಿಸುವ ವೇಳೆ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ, ಗಾಯಗೊಂಡವರಿಗೆ ಆಸ್ಪತ್ರೆಗೆ ದಾಖಲು ಮಾಡುವ ಬಗ್ಗೆ, ಪ್ರಥಮ ಚಿಕಿತ್ಸೆ, ಅಗ್ನಿಶಾಮಕ, ಪೊಲೀಸರು, ಇನ್ನಿತರ ಅಧಿಕಾರಿಗಳ ಕರ್ತವ್ಯ ಇನ್ನಿತರ ಕಾರ್ಯ ಚಟುವಟಿಕೆಗಳನ್ನು ಅಣಕು ಪ್ರದರ್ಶನದ ಮೂಲಕ ನಡೆಸಿ ಅರಿವು ಉಂಟು ಮಾಡಲಾಗುತ್ತದೆ ಎಂದು ಹೇಳಿದರು. ಅಣಕು ಕಾರ್ಯಾಚರಣೆಗೆ ಪೂರಕವಾಗಿರುವ ಎಲ್ಲ ಸಿದ್ದತೆಗಳನ್ನು ಅಧಿಕಾರಿಗಳು ಸಮರ್ಪಕವಾಗಿ ಕೈಗೊಳ್ಳಬೇಕು. ಅಗತ್ಯವಿರುವ ವಾಹನಗಳು, ಸಲಕರಣೆಗಳು, ಕಂಟ್ರೋಲ್ ರೂಂ, ಸಿಬ್ಬಂದಿ ನಿಯೋಜನೆ, ಆಂಬುಲೆನ್ಸ್‌ಗಳ ಕಾರ್ಯಚರಣೆ ಸೇರಿದಂತೆ ಎಲ್ಲವನ್ನು ಪರಿಪೂರ್ಣವಾಗಿ ಸಿದ್ದ ಮಾಡಿಕೊಂಡಿರಬೇಕು. ಜನರ ರಕ್ಷಣೆಗೆ ಕೈಗೊಳ್ಳಲಾಗುವ ಸುರಕ್ಷತಾ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಕ್ ಡ್ರಿಲ್ ಮುಖಾಂತರ ತಿಳಿವಳಿಕೆ ನೀಡಬೇಕಿದೆ. ಈ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಮಾತನಾಡಿ ಅಣಕು ಕಾರ್ಯಚರಣೆ ಬಗ್ಗೆ ಮಾಹಿತಿ ನೀಡಿ ಜನರನ್ನು ಜಾಗೃತಗೊಳಿಸಬೇಕು. ಅವಘಡದ ಸಂದರ್ಭದಲ್ಲಿ ಹೇಗೆ ಕಾರ್ಯಚರಣೆ ಮಾಡಲಾಗುತ್ತದೆ. ಈ ಸಮಯದಲ್ಲಿ ಸಾರ್ವಜನಿಕರ ಪಾತ್ರ, ವಿವಿಧ ಇಲಾಖೆಗಳು ನಿರ್ವಹಿಸಬೇಕಿರುವ ಕರ್ತವ್ಯಗಳ ಬಗ್ಗೆ ಮನವರಿಕೆ ಮಾಡಿ ಆತ್ಮಸ್ಥೈರ್ಯ ತುಂಬುವ ಕೆಲಸವನ್ನು ಮಾಡಬೇಕು ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಕುಮಾರ್, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ತಹಶೀಲ್ದಾರರಾದ ಗಿರಿಜಾ, ರಮೇಶ್ ಬಾಬು, ಬಸವರಾಜು, ಗುರುಪ್ರಸಾದ್, ಜಿಲ್ಲ ಅಗ್ನಿಶಾಮಕ ಅಧಿಕಾರಿ ಕೆ.ಪಿ. ಗುರುರಾಜ್, ಜಿಲ್ಲಾ ಗೃಹರಕ್ಷಕದಳ ಸಮಾದೇಷ್ಟರಾದ ಎಸ್.ಜಿ. ಮಹಾಲಿಂಗಸ್ವಾಮಿ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಬುದ್ದನ ಸಂದೇಶ ದಾರಿದೀಪ

**ಚಾಮರಾಜನಗರ:** ಭಾರತ ಸೇರಿದಂತೆ ಜಗತ್ತಿನ ಹಲವು ಸಮಸ್ಯೆ, ಸಂಕಷ್ಟ, ವಿಘಟನೆಗಳಿಗೆ ಭಗವಾನ್ ಬುದ್ಧರ ಆದರ್ಶ ಚಿಂತನೆಗಳು, ತತ್ವ ಸಂದೇಶಗಳು ದಾರಿದೀಪವಾಗಿವೆ ಎಂದು ನಗರದ ಸಾಹಿತಿ ಡಾ. ಬಿ.ಆರ್. ಕೃಷ್ಣಕುಮಾರ್ ಅವರು ತಿಳಿಸಿದರು.

ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ 2569ನೇ ಬುದ್ಧ ಪೂರ್ಣಿಮೆ ಅಂಗವಾಗಿ ಆಯೋಜಿಸಲಾಗಿದ್ದ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯಭಾಷಣ ಮಾಡಿ ಅವರು ಮಾತನಾಡಿದರು.

ಬುದ್ಧ ಈ ಜಗತ್ತಿನ ಬೆಳಕು ಎಂದಿದ್ದಾರೆ ಡಾ. ಬಿ.ಆರ್. ಅಂಬೇಡ್ಕರ್ ಅವರು. ಇಂದಿನ ಪ್ರಸ್ತುತ ಜಗತ್ತಿನಲ್ಲಿ ತಾಂಡವವಾಡುತ್ತಿರುವ ಅಶಾಂತಿ, ದೇಶ-ದೇಶಗಳ ನಡುವೆ ಯುದ್ಧದ ಪರಿಸ್ಥಿತಿ ನಿವಾರಣೆಗೆ ಬುದ್ಧರ ಸಾರ್ವಕಾಲಿಕ ಸಂದೇಶಗಳು ದಾರಿದೀಪವಾಗಿವೆ. ಬುದ್ಧರ ಮೌಲ್ಯಯುತ ಚಿಂತನೆಗಳಿಂದ ಪ್ರೇರೇಪಣೆಗೊಂಡ ದೇಶದ ಅನೇಕ ರಾಜಮಹಾರಾಜರು ಬುದ್ಧರ ಅನುಯಾಯಿಗಳಾದರು. ಅವರು ಪ್ರಸ್ತುತಪಡಿಸಿದ ಬೌದ್ಧಧರ್ಮವನ್ನು ದೇಶವಿದೇಶಗಳಲ್ಲಿ ಪ್ರಚಾರಪಡಿಸಿದರು ಎಂದರು.

ಮನುಷ್ಯ ಸೇರಿದಂತೆ ಸಕಲ ಜೀವರಾಶಿಗಳಿಗೂ ಒಳಿತನ್ನು ಬಯಸುವ ವೈಜ್ಞಾನಿಕ ತಳಹದಿಯ ಬುದ್ಧ ಅವರು ಮೇಲೆ ಬೌದ್ಧಧರ್ಮ ಸ್ಥಾಪಿಸಿದರು. ದೇಶದ 30 ಧರ್ಮಗ್ರಂಥಗಳನ್ನು ಅಧ್ಯಯನ ಮಾಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರು ಬೌದ್ಧಧರ್ಮದ ಮಹತ್ವವನ್ನು ಅರಿತು 1956ರಲ್ಲಿ ಲಕ್ಷಾಂತರ ಅನುಯಾಯಿಗಳೊಂದಿಗೆ ದೀಕ್ಷೆ ಸ್ವೀಕರಿಸಿದರು. ಭಾರತದ ಸಂವಿಧಾನ ಪೀಠಿಕೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಅಡಕಗೊಳಿಸಿರುವ ಸ್ವಾತಂತ್ರ್ಯ, ಸಮಾನತೆ, ಸಹೋದರತೆ, ಭ್ರಾತೃತ್ವ ಚಿಂತನೆಗಳು ಬುದ್ಧ ಅವರ ಆಶಯಗಳಾಗಿವೆ. ಇವೆಲ್ಲವೂ ದೇಶದ ಸುಭದ್ರತೆ ಹಾಗೂ ಬಲಿಷ್ಠ ಪ್ರಜಾಪ್ರಭುತ್ವಕ್ಕೆ ಸಾಕ್ಷಿಯಾಗಿವೆ ಎಂದು ತಿಳಿಸಿದರು.

ಬುದ್ಧ ಎಂದರೇ ಅರಿವು, ತಿಳಿವಳಿಕೆಯಾಗಿದೆ. ಬುದ್ಧ ತನ್ನ ಸಂದೇಶಗಳ ಮೂಲಕ ವ್ಯಕ್ತಿತ್ವ ಪರಿಪೂರ್ಣತೆಗೆ ಮುನ್ನುಡಿ ಬರೆದವರು. ಇಡೀ ಪ್ರಪಂಚಕ್ಕೆ ಧ್ಯಾನವನ್ನು ಪರಿಚಯಿಸಿದ ಬುದ್ಧ ಅವರು ಮನೋಚೈತನ್ಯದ ಸಾಕಾರಮೂರ್ತಿಯಾಗಿದ್ದಾರೆ. ಸ್ವರ್ಗ, ನರಕಗಳಿಲ್ಲದ ವಾಸ್ತವ ಸ್ಥಿತಿಯನ್ನು ಜನರಿಗೆ ಸರಳ ಬೋಧನೆಗಳ ಮೂಲಕ ಎಚ್ಚರಿಸಿದರು ಎಂದು ಸಾಹಿತಿ ಡಾ. ಬಿ.ಆರ್. ಕೃಷ್ಣಕುಮಾರ್ ಅವರು ತಿಳಿಸಿದರು.

### ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೊ. ಎಂ. ಗೋವಿಂದರಾವ್ ಭಾಗಿ

# ಅಸಮತೋಲನ ನಿವಾರಣೆ ಪರಾಮರ್ಶೆ



**ಚಾಮರಾಜನಗರ:** ಡಾ. ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನದ ಬಳಿಕ ಜಿಲ್ಲೆಗಳಲ್ಲಿ ಯಾವ ರೀತಿಯ ಬೆಳವಣಿಗೆ ಬದಲಾವಣೆಯಾಗಿದೆ, ಇನ್ನೂ ಏನೇನು ಅಭಿವೃದ್ದಿಯಾಗಬೇಕಿದೆ ಎಂಬುದನ್ನು ಗುರುತಿಸಿ ಹೊಸದಾಗಿ ಸೂಚ್ಯಂಕ ಆಧರಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪರಾಮರ್ಶಿಸಿ ವರದಿ ನೀಡಲಾಗುವುದೆಂದು ಆರ್ಥಿಕ ತಜ್ಞರು ಹಾಗೂ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಅಧ್ಯಕ್ಷರಾದ ಪ್ರೊ. ಎಂ. ಗೋವಿಂದರಾವ್ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ವಿತ್ತೀಯ ಸುಧಾರಣೆ ಮತ್ತು ಯೋಜನಾ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಆರ್. ವಿಶಾಲ್, ಸಮಿತಿಯ ಸದಸ್ಯರು, ನಿರ್ದೇಶಕರು ಹಾಗೂ ಜಿಲ್ಲೆಯ ಶಾಸಕರು, ಹಿರಿಯ ಅಧಿಕಾರಿಗಳು, ವಿವಿಧ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ನಡೆದ ಸಮಿತಿಯ ಜಿಲ್ಲಾ ಮಟ್ಟದ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತ ಡಾ. ಡಿ.ಎಂ. ನಂಜುಂಡಪ್ಪ ಅಧ್ಯಕ್ಷತೆಯ ಸಮಿತಿಯು 2002ರಲ್ಲಿ ವರದಿ ನೀಡಿದ ಶಿಫಾರಸಿನ ಅನ್ವಯ ಗುರುತಿಸಲಾದ ಹಿಂದುಳಿದ ತಾಲೂಕುಗಳ ಅಭಿವೃದ್ದಿಗೆ ಸರ್ಕಾರ 43 ಸಾವಿರ ಕೋಟಿ ರೂ. ವೆಚ್ಚ ಮಾಡಿದೆ. ಈ ತಾಲೂಕುಗಳಲ್ಲಿ ಯಾವ ರೀತಿಯ ಬೆಳವಣಿಗೆಯಾಗಿದೆ, ಯಾವ ತಾಲೂಕುಗಳಲ್ಲಿ ಇನ್ನೂ ಹಿಂದುಳಿದ ಪ್ರದೇಶಗಳು ಮುಂದುವರೆದಿವೆ ಎಂಬುದನ್ನು ಸಮಿತಿ ಪರಾಮರ್ಶಿಸಲಿದೆ ಎಂದರು.

ಅಸಮತೋಲನ ಹೆಚ್ಚಾದಾಗ ಪ್ರದೇಶಗಳು ಹಿಂದುಳಿಯಲಿವೆ. ನಂಜುಂಡಪ್ಪ ವರದಿ ಅನುಷ್ಠಾನದಿಂದ ಹೇಗೆ ಅಭಿವೃದ್ದಿಯಾಗಿದೆ ಎಂಬುದನ್ನು ಸೂಚ್ಯಂಕದ ಆಧಾರದ ಮೇಲೆ ನೋಡಲಾಗುತ್ತದೆ. ಹಿಂದುಳಿದಿದ್ದಲ್ಲಿ ಯಾವ ಕಾರಣಕ್ಕಾಗಿ ಯಾವ ಕ್ಷೇತ್ರದಲ್ಲಿ ಹಿಂದೆ ಉಳಿದಿದೆ ಎಂಬುದನ್ನು ಸಮಿತಿಯು ಪರಾಮರ್ಶಿಸಲಿದೆ. ತಲಾ ಆದಾಯ, ಶಿಕ್ಷಣ, ಆರೋಗ್ಯ, ಇನ್ನಿತರ ಕ್ಷೇತ್ರಗಳಲ್ಲಿನ ಸುಧಾರಣೆ, ಬೆಳವಣಿಗೆಯ ಬಗ್ಗೆಯು ಸಮಿತಿಯು ಪರಿಶೀಲಿಸಲಿದೆ. ಎಲ್ಲ ಅಂಶಗಳನ್ನು ಗಮನಿಸಿ ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುತ್ತದೆ ಎಂದು ಸಮಿತಿಯ ಅಧ್ಯಕ್ಷರಾದ ಪ್ರೊ. ಎಂ. ಗೋವಿಂದ ರಾವ್ ಅವರು ತಿಳಿಸಿದರು.

ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ವಿತ್ತೀಯ ಸುಧಾರಣೆ ಮತ್ತು ಯೋಜನಾ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಆರ್. ವಿಶಾಲ್ ಅವರು ಮಾತನಾಡಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯು ಹೊಸ ಸೂಚ್ಯಂಕಗಳನ್ನು ಆಧರಿಸಿ ಶಿಫಾರಸು ಮಾಡಬೇಕಿದೆ. ಅಸಮತೋಲನ ನಿವಾರಣೆ ಸಂಬಂಧ ಜಿಲ್ಲೆಗಳಿಗೆ ಭೇಟಿ ನೀಡಿ ಸಂವಾದ ನಡೆಸಿ ಅಭಿಪ್ರಾಯ ಸಲಹೆಗಳನ್ನು ಪಡೆಯಲಾಗುತ್ತಿದೆ. ಅಗಬೇಕಿರುವ ಅಭಿವೃದ್ದಿಗಳ ಸಂಬಂಧ ಸ್ಥಳೀಯವಾಗಿ ಚರ್ಚಿಸಿ ವಿವರ ಪಡೆದುಕೊಳ್ಳಲಾಗುತ್ತಿದೆ ಎಂದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಜಿಲ್ಲೆಯಲ್ಲಿ ಸಾಕಷ್ಟು ಅರಣ್ಯ ಪ್ರದೇಶವಿದ್ದು ಹಿಂದುಳಿದವರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಶಾಲೆಗಳಿಗೆ ಅಗತ್ಯ ಸಂಖ್ಯೆಗೆ ಅನುಗುಣವಾಗಿ ನುರಿತ ಶಿಕ್ಷಕರ ನೇಮಕವಾಗಬೇಕಿದೆ. ಕೌಶಲ್ಯ ಅಭಿವೃದ್ದಿಗೆ ಗಮನಹರಿಸಿ ಸ್ಥಳೀಯರಿಗೆ ಉದ್ಯೋಗ ಅವಕಾಶಗಳನ್ನು ನೀಡಬೇಕಿದೆ. ಪ್ರವಾಸಿ ತಾಣ, ಧಾರ್ಮಿಕ ಕ್ಷೇತ್ರಗಳು, ಅರಣ್ಯಧಾಮಗಳಂತಹ ಪ್ರವಾಸಿ ಸ್ಥಳಗಳಿದ್ದು ಪ್ರವಾಸೋದ್ಯಮ ಅಭಿವೃದ್ದಿಗೆ ಜಿಲ್ಲೆ ಪೂರಕವಾಗಿದೆ. ಕಬಿನಿ 2ನೇ ಹಂತ ಜಾರಿಯಾದರೆ ಅನುಕೂಲವಾಗಲಿದೆ. ಹೀಗೆ ಹಲವು ಕ್ಷೇತ್ರಗಳ ಅಭಿವೃದ್ದಿ ಬಗ್ಗೆ ಸಮಿತಿಯು ಗಮನಿಸಿ ಶಿಫಾರು ಮಾಡಬೇಕು ಎಂದರು.

ಶಾಸಕರಾದ ಎಂ.ಆರ್. ಮಂಜುನಾಥ್ ಅವರು ಮಾತನಾಡಿ ಹನೂರು ಕ್ಷೇತ್ರದಲ್ಲಿ ನೀರಾವರಿಗೆ ಹೆಚ್ಚಿನ ಆದ್ಯತೆ ಕಲ್ಪಿಸಬೇಕು. ಕ್ಷೇತ್ರದಲ್ಲಿ ಯಾವುದೇ ಕೈಗಾರಿಕೆ ಪ್ರದೇಶಗಳಿಲ್ಲ. ಹೀಗಾಗಿ ಉದ್ಯೋಗಕ್ಕಾಗಿ ಬೇರೆಕಡೆ ಸ್ಥಳೀಯರು ಹೋಗಬೇಕಿದೆ. ಕಾಡಂಚಿನ ಗ್ರಾಮಗಳು, ರಸ್ತೆ ಸಂಪರ್ಕಗಳು ಇಲ್ಲದ ಕಾರಣ ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗಿದೆ. ಉದ್ಯೋಗ ಸೃಷ್ಟಿ, ರೈತರಿಗೆ ನೆರವು, ಆರೋಗ್ಯ ಕ್ಷೇತ್ರದ ಸುಧಾರಣೆಯಾಗಬೇಕಿದೆ ಎಂದು ಸಮಿತಿಯ ಗಮನಕ್ಕೆ ತಂದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಇಲ್ಲಿ ಉತ್ಪಾದಿಸುವ ಬೆಳೆಗಳಿಗೆ ಮೌಲ್ಯವರ್ಧನೆ ಆಗಬೇಕಿದೆ. ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ದಿ ಸಂಬಂಧ ವಿಸ್ತೃತ ಯೋಜನೆ ತಯಾರಿಸಲಾಗಿದೆ. ಮೂಲ ಸೌಕರ್ಯಗಳ ಅಭಿವೃದ್ದಿಗೆ ಒತ್ತು ಕೊಡಲಾಗಿದೆ ಎಂದರು.

ವಾಣಿಜ್ಯೋದ್ಯಮಿಗಳು, ರೈತ ಮುಖಂಡರು, ವಿವಿಧ ಸ್ವಯಂ ಸೇವಾ ಸಂಸ್ಥೆಗಳು, ಶಿಕ್ಷಣ ಇನ್ನಿತರ ಕ್ಷೇತ್ರದ ಸಂಘಟನೆಗಳ ಮುಖಂಡರು, ಪ್ರತಿನಿಧಿಗಳು ಮಾತನಾಡಿ ಸ್ಥಳೀಯ ಸಮಸ್ಯೆಗಳನ್ನು ಗಮನಕ್ಕೆ ತಂದು ಸಲಹೆಗಳನ್ನು ನೀಡಿದರು.

ಬೆಳೆಗಳಿಗೆ ಬೆಂಬಲ ಬೆಲೆ, ಉದ್ಯೋಗ ಸೃಷ್ಟಿ, ನೀರಾವರಿ, ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗಳು, ಸಣ್ಣ ಉದ್ಯಮಗಳಿಗೂ ಹೆಚ್ಚಿನ ಉತ್ತೇಜನ, ಶಿಕ್ಷಣ ಸಂಸ್ಥೆಗಳಿಗೆ ಮೂಲ ಸೌಕರ್ಯ, ಕಾಡು ಪ್ರಾಣಿಗಳಿಂದ ಬೆಳೆಗಳ ರಕ್ಷಣ, ಟೆಕ್ಸ್‌ಟೈಲ್ಸ್ ಹಬ್, ಜಿ.ಎಸ್.ಟಿ ವಿನಾಯಿತಿ, ಬ್ಯಾಂಕುಗಳಿಂದ ಸಾಲ ಸೌಲಭ್ಯ, ವಿದ್ಯಾರ್ಥಿಗಳಿಗೆ ಕ್ರೀಡಾ ಕ್ಷೇತ್ರದಲ್ಲಿ ಪ್ರೋತ್ಸಾಹ, ಕೃಷಿ ಆಧಾರಿತ ಕೈಗಾರಿಕೆಗಳು, ಅತಿಥಿ ಶಿಕ್ಷಕರಿಗೆ ಹೆಚ್ಚಿನ ಗೌರವಧನ, ರೇಷ್ಮೆ ಅಭಿವೃದ್ದಿ ಪುನಶ್ಚೇತನ ಸೇರಿದಂತೆ ಇನ್ನಿತರ ಅಂಶಗಳ ಬಗ್ಗೆ ಸಲಹೆ ನೀಡಿದರು.

ಅಧಿಕಾರಿಗಳಿಂದಲೂ ಆರೋಗ್ಯ, ಶಿಕ್ಷಣ, ಕೈಗಾರಿಕೆ, ನಗರಾಭಿವೃದ್ದಿ, ಮೂಲ ಸೌಕರ್ಯ ಇನ್ನಿತರ ವಿಷಯಗಳ ಬಗ್ಗೆ ವಿವರವಾಗಿ ಮಾಹಿತಿ ಪಡೆಯಲಾಯಿತು.

ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯರಾದ ಡಾ. ಎಂ.ಹೆಚ್. ಸೂರ್ಯನಾರಾಯಣ, ನಿರ್ದೇಶಕರಾದ ಚಂದ್ರಶೇಖರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ವಿದ್ಯುತ್ ಕೇಬಲ್ ಬದಲಾವಣೆ : ಹಗಲು ವೇಳೆ ನೀಡಲಾಗುತ್ತಿದ 3 ಫೇಸ್ ವಿದ್ಯುತ್, ರಾತ್ರಿ ವೇಳೆ ಸರಬರಾಜು

**ಚಾಮರಾಜನಗರ:** ಚಾಮರಾಜನಗರ ವಿಭಾಗ ವ್ಯಾಪ್ತಿಯ ಬೇಗೂರಿನಲ್ಲಿ ಎಂವಿಎ ಶಕ್ತಿ ಪರಿವರ್ತಕಗಳಿಗೆ ಅಳವಡಿಸಲಾಗಿರುವ ನಿಯಂತ್ರಣ ಕೇಬಲ್‌ಗಳು ಹಾಳಾಗಿದ್ದು ಹೊಸ ಕೇಬಲ್‌ಗಳನ್ನು ಬದಲಾಯಿಸುವ ಕಾಮಗಾರಿಯನ್ನು ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಮೇ 12ರಿಂದ 15ರವರೆಗೆ 11 ಕೆವಿ ಐಪಿ ಮಾರ್ಗಗಳಿಗೆ ಹಗಲು ವೇಳೆಯಲ್ಲಿ ನೀಡಲಾಗುತ್ತಿದ್ದ 3 ಪೇಸ್ ವಿದ್ಯುತ್ ಸರಬರಾಜನ್ನು ರಾತ್ರಿ 12 ರಿಂದ ಬೆಳಿಗ್ಗೆ 6 ರವರೆಗೆ ಸರಿದೂಗಿಸಲಾಗುವುದು ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ತಿಳಿಸಿದೆ. ಮಲ್ಲಯ್ಯನಪುರ, ಬರಗಿ, ಕೋಡಿಹಳ್ಳಿ, ಬೇರಂಬಾಡಿ, ನೆನೆಕಟ್ಟೆ, ವೀರನಪುರ, ಮೈದನಹಳ್ಳಿ, ಬಾಚಳ್ಳಿ, ಬೊಮ್ಮಲಾಪುರ, ದಾರಿಬೇಗೂರು, ಕೊಡಸೋಗೆ ಮತ್ತು ಹೆಗ್ಗವಾಡಿ, ಕಬ್ಬಳ್ಳಿ, ಸೋಮಳ್ಳಿ ಪಡಗೂರು, ಬಲಚವಾಡಿ, ನಿಟ್ರೆ, ಅಗತಗೌಡನಹಳ್ಳಿ ಹಾಗೂ ಮೂಡ್ನಾಕೂಡು, ಮುಕ್ಕಡಹಳ್ಳಿ, ಉಡಿಗಾಲ, ಕಲ್ಪುರ, ದೇವಲಾಪುರ ಹಾಗೂ ಹೊಂಗಹಳ್ಳಿ ಐಪಿ, ಮುಂಟಿಪುರ ಐಪಿ, ಆಲತ್ತೂರು ಐಪಿ ಮತ್ತು ಮೂಕಳ್ಳಿ ಕಾಲೋನಿ ಐಪಿ, ಹಂಗಳ, ಶಿವಪುರ, ದೇವರಹಳ್ಳಿ, ಹೊನ್ನೇಗೌಡನಹಳ್ಳಿ, ಮಲ್ಲಯ್ಯನಪುರ, ಬೊಮ್ಮನಹಳ್ಳಿ, ಕುಂದಗೆರೆ, ಕಟ್ನವಾಡಿ, ದೇಪಾಪುರ, ಕಗ್ಗಳ, ಕೆಲಸಿಪುರ, ಲಕ್ಕೂರು ಹಾಗೂ ಸುತ್ತಮುತ್ತಲ ಪ್ರದೇಶಗಳಿಗೆ ಹಗಲು ವೇಳೆಯಲ್ಲಿ ನೀಡಲಾಗುತ್ತಿದ್ದ 3 ಪೇಸ್ ವಿದ್ಯುತ್ ಸರಬರಾಜನ್ನು ರಾತ್ರಿ 12 ರಿಂದ ಬೆಳಿಗ್ಗೆ 6 ರವರೆಗೆ ಸರಿದೂಗಿಸಲಾಗುವುದು. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಗೆ ಕರೆ ಮಾಡುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

**ಚಾಮರಾಜನಗರ:** ಚಾಮರಾಜನಗರದ ಕಾಫಿ ಡೇ ಎಂಟರ್ ಪ್ರೈಸಸ್ ಲಿಮಿಟೆಡ್ (ಬಂಡೀಪುರ ರೆಸಾರ್ಟ್)ನಲ್ಲಿ ಇರುವ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಮೇ 14ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನವನ್ನು ನಡೆಸಲಾಗುತ್ತದೆ.ಫ್ರೆಂಟ್ ಆಫೀಸ್/ ರಿಸೆಪ್ಷನಿಷ್, ಮೇಂಟೆನೆನ್ಸ್/ಎಂಜಿನಿಯರಿಂಗ್, ಫುಡ್/ಬಿವೆರೆಜ್ ಮತ್ತು ಹೌಸ್ ಕೀಪಿಂಗ್ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಡಿಪ್ಲೋಮಾ ಇನ್ ಹೋಟೆಲ್ ಮ್ಯಾನೇಜ್‌ಮೆಂಟ್ ಯಾವುದೇ ಪದವಿ ಅಥವಾ ಸ್ನಾತಕೋತ್ತರ ಪದವಿ ಹೊಂದಿದ 18 ರಿಂದ 30ರ ವಯೋಮಿತಿಯ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದು. ಸಂದರ್ಶನದಲ್ಲಿ ಭಾಗವಹಿಸುವ ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಸ್ವ-ವಿವರ (ಬಯೋ ಡೇಟಾ) ಮತ್ತು ಅಂಕಪಟ್ಟಿಗಳ ಮೂಲ ಜೆರಾಕ್ಸ್ ಪ್ರತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಅಥವಾ ದೂ.ಸಂ 08226-224430 ಸಂಪರ್ಕಿಸಬಹುದು.

## ಉಚಿತ ಬೇಸಿಗೆ ಶಿಬಿರ

**ಮಂಡ್ಯ:** ರಾಜ್ಯ ಬಾಲಭವನ ಸೊಸೈಟಿ, ಬೆಂಗಳೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತುಜಿಲ್ಲಾ ಬಾಲಭವನ ಸಮಿತಿ ಸಹಯೋಗದಲ್ಲಿ2025-2026 ನೇ ಸಾಲಿನ ಉಚಿತ ಬೇಸಿಗೆ ಶಿಬಿರವನ್ನುಮೇ 13 ರಿಂದ ಮೇ 27 ರವರೆಗೆ 5 ರಿಂದ 16 ವರ್ಷ ವಯೋಮಿತಿ ಒಳಗಿನ ನಗರ ವ್ಯಾಪ್ತಿಯ ಮಕ್ಕಳಿಗಾಗಿಆಯೋಜಿಸಲಾಗಿದೆ. ಆಸಕ್ತ ಮಕ್ಕಳು ಮೇ.12 ರ ಒಳಗಾಗಿ ಕಾರ್ಯಕ್ರಮದಜಿಲ್ಲಾ ಸಂಯೋಜಕರಾದ ಪಿ.ಕೋಮಲ ರವರನ್ನು ಸಂಪರ್ಕಿಸಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿದೂ.ಸಂ: 9036801065 ಅನ್ನು ಸಂಪರ್ಕಿಸಬಹುದಾಗಿದೆ.

## ಅರ್ಜಿಆಹ್ವಾನ

**ಮಂಡ್ಯ:** ಸರ್ಕಾರಿಕೈಗಾರಿಕಾತರಬೇತಿ ಸಂಸ್ಥೆ ವತಿಯಿಂದ2025-26ನೇ ಶೈಕ್ಷಣಿಕ ಸಾಲಿಗೆ ಮಳವಳ್ಳಿಯಲ್ಲಿ ಕೈಗಾರಿಕಾತರಬೇತಿಗೆ ಪ್ರವೇಶ ಪಡೆಯಲು ಅರ್ಜಿಆಹ್ವಾನಿಸಲಾಗಿದೆಆಸಕ್ತರುಮೇ 28ರೊಳಗೆಆನ್-ಲೈನ್ ಮೂಲಕ ವೆಬ್ ಸೈಟ್‌ನಲ್ಲಿಅರ್ಜಿ ಸಲ್ಲಿಸಬಹುದಾಗಿದೆ. 2025-26ನೇ ಸಾಲಿನ ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು ಮತ್ತುಒಂದು ವರ್ಷಕ್ಕೆ ಬೋಧನಾ ಶುಲ್ಕ ರೂ.1,200/-ಆಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿದೂ.ಸಂ: 9880175939, 9731715151, 9113283613 ಮತ್ತು 9972447565 ಸಂಪರ್ಕಿಸಬಹುದುಎಂದುಸರ್ಕಾರಿಕೈಗಾರಿಕಾತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಮಂಡ್ಯ:** ಚಿಕ್ಕ ಮಂಡ್ಯ ವಿದ್ಯುತ್ ವಿತರಣಾಕೇಂದ್ರದಿಂದ ಹೊರಹೊಮ್ಮುವ ಜಿ.ಪಿ ಎಕ್ಸ್‌ಪ್ರೆಸ್ ಫೀಡರ್ ನಲ್ಲಿ ಲಿಂಕ್ ಲೈನ್‌ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದಮೇ 14ರಂದು ಬೆಳಿಗ್ಗೆ 10-00 ರಿಂದ ಸಂಜೆ 6-00 ಗಂಟೆಯವರೆಗೆವಿದ್ಯುತ್ ವ್ಯತ್ಯಯಉಂಟಾಗಲಿದೆ. ನಗರ ಪ್ರದೇಶಗಳಾದ ಮಂಜುನಾಥನಗರ, ಬೀಡಿ ಕಾಲೋನಿ, ವಿನಾಯಕನಂದ ಬಡಾವಣೆ, ಕಾರೆಮನೆಗೇಟ್, ಕೆ.ಹೆಚ್.ಬಿ ಬಡಾವಣೆ ಹಾಗೂ ಗ್ರಾಮಾಂತರ ಪ್ರದೇಶಗಳು ಚಿಕ್ಕಮಂಡ್ಯ, ಸಾತನೂರು, ಕೊಮ್ಮೇರಹಳ್ಳಿ, ಹುಲಿವಾನ, ಹೊನಗಾನಹಳ್ಳಿ, ಎಸ್.ಐ.ಕೋಡಿಹಳ್ಳಿ, ಕೆ,ಗೌಡಗೆರೆ, ಜೀಗುಂಡಿಪಟ್ಟಣ, ಹೆಚ.ಮಲ್ಲಿಗೆರೆ, ಹೆಚ್.ಕೋಡಿಹಳ್ಳಿ, ಗೋಪಾಲಪುರ, ಚಿಂದಗಿರಿದೊಡ್ಡಿ, ಬೊಕ್ಕೇಗೌಡನದೊಡ್ಡಿ, ಚಿಕ್ಕಮಂಡ್ಯ ಫೀಡರ್ ಐ.ಪಿ ಮಾರ್ಗ, ಗೋಪಾಲಪುರ ಫೀಡರ್ ಐ.ಪಿ ಮಾರ್ಗ, ಹೆಚ್.ಮಲ್ಲಿಗೆರೆ ಫೀಡರ್ ಐ.ಪಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯಉಂಟಾಗಲಿದೆ.

## ಪಡುಕೋಟೆಯಲ್ಲಿ ವಿದ್ಯುತ್ ಉಪ-ಕೇಂದ್ರ ಸ್ಥಾಪನೆ : ಸರ್ಕಾರ ನಿಗಧಿ ಪಡಿಸುವ ಬೆಲೆಯಲ್ಲಿ ಜಮೀನು ಖರೀದಿ

**ಮೈಸೂರು:** ಮೈಸೂರು ಜಿಲ್ಲೆಯ ಚಾಮರಾಜನಗರ ಯೋಜನೆ ವಿಭಾಗದ ವ್ಯಾಪ್ತಿಯಲ್ಲಿ ಹೆಚ್.ಡಿ ಕೋಟೆ ತಾಲ್ಲೂಕಿನ ಪಡುಕೋಟೆಯಲ್ಲಿ 66/11 ಕೆ.ವಿ ವಿದ್ಯುತ್ ಉಪ-ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಈ ವಿದ್ಯುತ್ ಉಪ-ಕೇಂದ್ರಕ್ಕೆ ಕನಿ?ꠃ 2 ಎಕರೆ ಜಮೀನು ಮುಖ್ಯ ರಸ್ತೆಗೆ ಹೊಂದಿಕೊಂಡಂತೆ ಹಾಗೂ ಪಡುಕೋಟೆಯ ಗ್ರಾಮದ ವ್ಯಾಪ್ತಿಯ ಅಥವಾ ಸುತ್ತಮುತ್ತ ಇರುವ ಜಮೀನನ್ನು ಭೂ ಮಾಲೀಕರುಗಳಿಂದ ನೇರವಾಗಿ ಸರ್ಕಾರವು ನಿಗಧಿ ಪಡಿಸುವ ಬೆಲೆಯಲ್ಲಿ ಖರೀದಿ ಮಾಡಲು ಉದ್ದೇಶಿಸಲಾಗಿದೆ. ಜಮೀನನ್ನು ಕರ್ನಾಟಕ ವಿದ್ಯುತ ಪ್ರಸರಣ ನಿಗಮ ನಿಯಮಿತಗೆ ಮಾರಟ ಮಾಡಲು ಇಚ್ಚಿಸುವ ಭೂಮಾಲೀಕರು ಚಾಮರಾಜನಗರ ಕವಿಪ್ರನಿನಿಯ ಚಾಮರಾಜನಗರ ಯೋಜನೆ ಉಪ-ವಿಭಾಗ ಕಾರ್ಯನಿರ್ವಾಹಕರ ಇಂಜಿನಿಯರ್(ವಿ) ಕಚೇರಿಯನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಪ್ರೀತಮ್ ಎಮ್.ಎಮ್, 9448271524, ಸಂತೋ?-9448012526, ಸಹಾಯಕ ಕಾರ್ಯನಿರ್ವಾಹಕರ ಇಂಜಿನಿಯರ್(ವಿ)ವಿನೋದ್ ಕುಮಾರ್ ಸಿಂಗ್ ಎಮ್. ಎಮ್-9448365683, ಕಿರಣ್-9480813912 ನ್ನು ಸಂಪರ್ಕಿಸಬಹುದು ಎಂದು ಚಾಮರಾಜನಗರ ಕವಿಪ್ರನಿನಿಯ ಚಾಮರಾಜನಗರದ ಯೋಜನೆ ಉಪ-ವಿಭಾಗ ಕಾರ್ಯನಿರ್ವಾಹಕರ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಠ್ಯೇತರ ಚಟುವಟಿಕೆಗಳಿಂದ ಕೌಶಲ್ಯ ವೃದ್ಧಿ: ಶಾಸಕ ಕೃಷ್ಣಮೂರ್ತಿ



**ಚಾಮರಾಜನಗರ:** ವಿದ್ಯಾರ್ಥಿಗಳು ಪಠ್ಯದ ಕಾರ್ಯಕ್ರಮಗಳಲ್ಲಿ ಸಿಗುವ ಅವಕಾಶವನ್ನು ಸದ್ಬಳಕೆ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸು ಮಾಡಿಕೊಳ್ಳಬೇಕು ಎಂದರು. ವುದರಿಂದ ಕೌಶಲ್ಯ ವೃದ್ಧಿಯಾಗಲಿದೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಚಾಮರಾಜನಗರ ತಾಲೂಕಿನ ಕುದೇರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ 2024-25ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್ ಎಸ್‌ಎಸ್ ಮತ್ತು ವಿವಿಧ ಸಮಿತಿಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಪಠ್ಯೇತರ ಚಟುವಟಿಕೆಗಳಿಂದ ಮಾನಸಿಕ, ದೈಹಿಕ ಆರೋಗ್ಯದ ಜೊತೆಗೆ ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಅವಕಾಶ ಲಭಿಸುತ್ತದೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪ್ರತಿಯೊಬ್ಬರಲ್ಲಿಯೂ ಒಂದೊಂದು ಕಲೆ ಇರುತ್ತದೆ. ಬರವಣಿಗೆ, ವಾಕ್ ಚಾತುರ್ಯ, ಕ್ರೀಡೆ ಸೇರಿದಂತೆ ಇತರೆ ಹಲವು ಚಟುವಟಿಕೆಗಳಲ್ಲಿ ತಮ್ಮ ಆದ ಕೌಶಲ್ಯ ಹೊಂದಿರುತ್ತಾರೆ. ಆದ್ದರಿಂದ ವಿದ್ಯಾರ್ಥಿಗಳು ಕಾಲೇಜಿನಲ್ಲಿ ನಡೆಯುವ ಸಾಂಸ್ಕೃತಿಕ ವಿದ್ಯಾರ್ಥಿಗಳು ಓದುವುದರ ಜೊತೆಗೆ ಕಲೆ, ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಮಕ್ಕಳ ಸಾಧನೆ ಪೋಷಕರಿಗೆ ಹೆಮ್ಮೆಯ ಸಂಗತಿ, ಪೋಷಕರ ಸಾತ್ವಿಕ ಬಯಕೆಗಳನ್ನು ಸಾರ್ಥಕ ರೀತಿಯಲ್ಲಿ ನೆರವೇರಿಸುವುದು ವಿದ್ಯಾರ್ಥಿಗಳ ಜವಬ್ದಾರಿಯಾಗಿದೆ ಎಂದು ತಿಳಿಸಿದರು.

ಶ್ರಮವಿಲ್ಲದೇ ಪ್ರತಿಫಲವಿಲ್ಲ. ಶ್ರಮಕ್ಕೆ ಪರ್ಯಾಯ ಮಾರ್ಗವಿಲ್ಲ ಎಂಬುದನ್ನು ಅರಿಯಬೇಕು. ವಿದ್ಯಾರ್ಥಿಗಳು ಏಕಾಗ್ರತೆಯನ್ನು ಬೆಳೆಸಿಕೊಂಡು ಸಾಧನೆಯತ್ತ ಹೆಜ್ಜೆ ಇಡಬೇಕು. ಸಾಧನೆಗೆ ಶ್ರಮ, ಆತ್ಮವಿಶ್ವಾಸ, ಭರವಸೆ, ನಂಬಿಕೆಯೇ ಮೂಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ಗ್ರಾಪಂ ಅಧ್ಯಕ್ಷೆ ಸುಶೀಲಾ, ಬೆಂಗಳೂರಿನ ವಿಶ್ವೇಶ್ವರಪುರ ಕಲೆ ಮತ್ತು ವಾಣಿಜ್ಯ ಕಾಲೇಜಿನ ಪ್ರಾಂಶುಪಾಲ ಪ್ರೊ. ಅಮೃತಿ ರಾಜೇಶ್, ಅಂತರಾಷ್ಟ್ರೀಯ ಖೋ ಖೋ ಕ್ರೀಡಾಪಟು ಚೈತ್ರಾ, ಕಾಲೇಜಿನ ಪ್ರಾಂಶುಪಾಲ ಪ್ರೊ.ಥಿಯೋಡರ್ ಲೂಥರ್ ಸೇರಿದಂತೆ ಇತರರಿದ್ದರು.

# ಶುಶ್ರೂಷಕರ ವಿದ್ಯಾರ್ಥಿಗಳಿಗೆ ಕ್ಯಾಂಡಲ್ ಡೇ




**ಚಾಮರಾಜನಗರ:** ವೈದ್ಯಕೀಯ ಕ್ಷೇತ್ರದ ಮೂಲಕ ಸ್ವಾಸ್ಥ್ಯ ಕಾಪಾಡಿ ಸದೃಡ ರಾ?ꠃ ನಿರ್ಮಾಣದಲ್ಲಿ ಶುಶ್ರೂ?ಕರ ಕೊಡುಗೆ ಅನನ್ಯವಾಗಿದೆ ಸಮಾಜ, ಆರೋಗ್ಯ ಕ್ಷೇತ್ರದ ನಡುವಿನ ಸೇತುವೆಯಾಗೆ ಕಾರ್ಯನಿರ್ವಹಿಸುತ್ತಾರೆ ರೋಗಿಯ ಜೊತೆ ನಿರಂತರವಾಗಿದ್ದು ಉಪಚಾರ, ಆರೈಕೆ, ಸೇವೆ ಮಾಡುವುದರ ಮೂಲಕ ಶುಶ್ರೂಷಕರು ಆರೋಗ್ಯ ಕ್ಷೇತ್ರದ ಸೇನಾನಿಗಳಾಗಿದ್ದಾರೆ ಎಂದು ಮೈಸೂರಿನ ಶುಶ್ರೂಷಕರ ತರಬೇತಿ ಕೇಂದ್ರದ ಆಡಳಿತಾಧಿಕಾರಿ ಡಾ. ಆಶಾ.ಎಸ್ ತಿಳಿಸಿದರು

ನಗರದ ಜೋಡಿರಸ್ತೆಯಲ್ಲಿ ಇರುವ ಜಿಲ್ಲಾಸ್ಪತ್ರೆಯ ಹಿಂಭಾಗದಲ್ಲಿ ಇರುವ ಸರ್ಕಾರಿ ಶುಶ್ರೂ?ಕರ ಶಾಲೆಯಲ್ಲಿ ಸೋಮವಾರ ನಡೆದ ಶುಶ್ರೂಷಕರ ದಿನಾಚರಣೆ ಮತ್ತು 9ನೇ ತಂಡದ ಶುಶ್ರೂಷಕರ ವಿದ್ಯಾರ್ಥಿಗಳಿಗೆ ಕ್ಯಾಂಡಲ್ ಡೇ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಶುಶ್ರೂಷಕರ ಸೇವೆ ನಿರಂತರ ಮತ್ತು ಜವಬ್ದಾರಿಯುತವಾಗಿದೆ. ಮೇ 12ನ್ನು ವಿಶ್ವ ಶುಶ್ರೂಷಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಈ ದಿನ ವಿಶ್ವದ್ಯಾದಂತ ಸೇವೆ ಸಲ್ಲಿಸುತ್ತಿರುವ ಶುಶ್ರೂಷಕರನ್ನು ಸ್ಮರಿಸುವ ಉದ್ದೇಶವಾಗಿದೆ. ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮ ಇದಾಗಿದ್ದು ಅವರು ಆಧುನಿಕ ನರ್ಸಿಂಗ್ ಶಿಕ್ಷಣಕ್ಕೆ ಬುನಾದಿಯನ್ನು ಹಾಕಿ ಸಂಘಟನೆಯನ್ನು ಮಾಡಿದ್ದಾರೆ ಎಂದು ಹೇಳಿದರು.

ವಿದ್ಯಾರ್ಥಿಗಳು ಶ್ರದ್ದೆಯಿಂದ ಶಾಲೆಗಳಲ್ಲಿ ವಿದ್ಯೇ ಕಲಿತರೆ ಮುಂದಿನ ಭವಿ?ದಲ್ಲಿ ಸೇವೆಗಳು ನಿಮ್ಮನ್ನು ಗುರುತಿಸುತ್ತದೆ. ವಿದ್ಯಾರ್ಥಿಗಳು ಕುಂಟುಂಬದ ಜೊತೆಯಲ್ಲೆ ಮೊಬೈಲ್ ಜೊತೆಯಿಂದ ದೂರವಿದ್ದಾರೆ ಉತ್ತಮ ತರಗತಿಗಳು ಮುಗಿದ ನಂತರ ಕುಟುಂಬದವರ ಜೊತೆಯಲ್ಲಿ ಮಾತನಾಡುವ ಅವಕಾಶವನ್ನು ಶಾಲೆಯ ಪ್ರಾಂಶುಪಾಲರು ಕಲ್ಪಿಸಿಕೊಡುತ್ತಾರೆ.ನಿಮ್ಮ ವಿದ್ಯೇಗೆ ಅಡಚಣೆಯಾಗಬಹುದು ಎಂದು ಹೇಳಿದರು.

ಶಾಲೆ ಪ್ರಾಂಶುಪಾಲರಾದ ಮಹಮದ್ ಕುದರತ್ ಅವರು ಮಾತನಾಡಿ ವಿದ್ಯಾರ್ಥಿಗಳಿಗೆ ತಾಳ್ಮೇ ಮುಖ್ಯ ತರಬೇತಿಗಾಗಿ ವಿದ್ಯಾರ್ಥಿಗಳನ್ನು ಪಕ್ಕದ ಆಸ್ಪತ್ರೆಗೆ ಕಳುಹಿಸಲಾಗುತ್ತದೆ. ಅಲ್ಲಿ ಇರುವ ವೈದ್ಯರ ಜೊತೆ ಹಾಗೂ ರೋಗಿಗಳ ಜೊತೆ ಸಂತೋಷದಿಂದ ವರ್ತಿಸಬೇಕು. ನೀವು ನೀಡುವ ಚಿಕಿತ್ಸೆ ರೋಗಿಗಳಿಗಳಿಗೆ ಅನುಕೂಲವಾಗುವಂತೆ ಇರಬೇಕು. ಸರ್ಕಾರಿ ಶಶ್ರೂ?ಕರ ಶಾಲೆಯಲ್ಲಿ ವಿದ್ದೇ ಕಲಿತ ವಿದ್ಯಾರ್ಥಿಗಳು ದೊಡ್ಡ ದೊಡ್ಡ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ವೇದಿಕೆಯಲ್ಲಿ ಡಿ.ವೈ.ಡಿಹೆಚ್.ಓ ವೆಂಕಟಲಕ್ಷ್ಮಿ, ಭೋದಕರಾದ ಪ್ರೇಮ, ಸೌಮ್ಯ, ಕಾವ್ಯ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

ಮೊದನೇ ವರ್ಷದ ವಿದ್ಯಾರ್ಥಿಗಳು ಕ್ಯಾಂಡಲ್ ಇಡಿದು ಪ್ರತಿಜ್ಞ ವಿಧಿಯನ್ನು ಬೋದಿಸಿದರು..

# ಬುದ್ಧ ಎಂಬುದರ ಅರ್ಥ ಅಂತರಂಗದ ಅರಿವು

**ಮಂಡ್ಯ:** ವಿದೇಶಗಳು ಭಾರತೀಯರನ್ನು ಬುದ್ಧ ಜನಿಸಿದ ನಾಡಿನಿಂದ ಬಂದವರು ಎಂದು ಗುರುತಿಸುತ್ತಾರೆ, ಬುದ್ಧಎಂಬುದರ ನಿಜವಾದಅರ್ಥಅಂತರಂಗದಅರಿವು ಎಂದು ಅಪರಜಿಲ್ಲಾಧಿಕಾರಿ ಬಿ.ಸಿ. ಶಿವಾನಂದ ಮೂರ್ತಿಅವರು ಹೇಳಿದರು. ನಗರದಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದಆಯೋಜಿಸಲಾಗಿದ್ದ 2569 ನೇ ಭಗವಾನ್ ಬುದ್ಧಜಯಂತಿಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರು ಸಕಲ ಸಂಪತ್ತುರಾಜ ವೈಭೋಗವನ್ನುಜ್ಞಾನ, ನೆಮ್ಮದಿ, ಶಾಂತಿಗಾಗಿತೋರೆದವರು ಭಗವಾನ್ ಬುದ್ಧಎಂದು ಹೇಳಿದರು.

2569 ವರ್ಷಗಳು ಕಳೆದರೂ ಗೌತಮ್ ಬುದ್ಧಅವರ ಸಾದನೆ, ಸಹನೆಯನ್ನುಇನ್ನೂದೇಶ ವಿದೇಶದಜನರು ನೆನಪಿಟ್ಟಿಕೊಂಡಿದ್ದಾರೆಎಂದರೆ ಸಮಾಜಕ್ಕೆಅವರು ನೀಡಿದಕೊಡುಗೆಅಪಾರ.ಬುದ್ಧಅವರುತೋರಿದಜ್ಞಾನದ ಮಾರ್ಗದಲ್ಲಿಯೇ ಮುಂದೆ ಸಾಗೋಣಎಂದರು.ಗೌತಮ ಬುದ್ಧರ ಮಾರ್ಗದಲ್ಲಿ ಸಾಗಿದರೆ ಬದುಕಿನಲ್ಲಿ ಸುಖ, ಶಾಂತಿ, ನೆಮ್ಮದಿ ಕಾಣಬಹುದು, ಬುದ್ಧಅವರುಅತ್ಯಂತ ಸರಳವಾಗಿ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕಾದ ನೈತಿಕ ಮೌಲ್ಯಗಳ ಕುರಿತು ತಿಳಿಸಿದ್ದಾರೆ, ಶಾಂತಿ ಮತ್ತು ನೆಮ್ಮದಿಯ ಮುಂದೆಯಾವುದು ದೊಡ್ಡದಲ್ಲಎಂದುಅವರ ಪಂಚಶೀಲ ತತ್ವಗಳು ಹೇಳುತ್ತವೆ ಎಂದರು.ಕೊಳ್ಳೇಗಾಲದ ಚನ್ನಲಿಂಗನಹಳ್ಳಿಯ ಜೇತವನ ಬುದ್ಧವಿಹಾರದ ಭಂತೆ ಮನೋರಖ್ಖಿತ ಬಿಕ್ಕು ಸ್ವಾಮಿಜಿಗಳು ಮಾತನಾಡಿಇದೇ ಮೊದಲ ಬಾರಿಗೆರಾಜ್ಯ ಸರ್ಕಾರದಿಂದ ಬುದ್ಧಜಯಂತಿಯನ್ನುಆಚರಿಸಲುಆದೇಶ ಹೊರಡಿಸಿರುವುದರಿಂದ ರಾಜ್ಯ ಸರ್ಕಾರಕ್ಕೆಧನ್ಯವಾದ ತಿಳಿಸಿದರು, ಸತ್ತ ನಂತರ ಪಡೆಯುವುದು ನಿಬ್ಬಣಅಲ್ಲ, ಲೋಭ ಮೋಹ ದ್ವೇಷವಿಲ್ಲದೆ ಬದುಕುವುದು ನಿಬ್ಬಣಎಂದರು.

ಪಾಶ್ಚಿಮಾತ್ಯ ದೇಶಗಳಲ್ಲಿ ಜನರು ಬದ್ಧನತತ್ವ ಸಂದೇಶ ಮತ್ತುಅವರ ವಿಚಾರಗಳ ಪ್ರಭಾವಕ್ಕೊಳಗಾಗಿ ಬದ್ಧ ಪಥವನ್ನುಅನುಸರಿಸುತ್ತಿದ್ದಾರೆ, ಪ್ರಪಂಚದಲ್ಲಿ 300ಕ್ಕೂ ಹೆಚ್ಚು ಧರ್ಮಗಳಿವೆ, ಧರ್ಮವು ಮನುಷ್ಯ ಮತ್ತುದೇವರ ನಡುವಿನ ಸಂಬಂಧದಕುರಿತು ಹೇಳುತ್ತದೆ, ಆದರೆದಮ್ಮ ಮನುಷ್ಯ ಮತ್ತು ಅವನ ಮನಸ್ಸಿನ ನುಡುವಿನ ಸಂಬಂಧ ತಿಳಿಸುತ್ತದೆ, ಬುದ್ಧಿಸಂ ಧರ್ಮವಲ್ಲಎಂದು ತಿಳಿಸಿದರು. ಮನುಷ್ಯಇಚ್ಚಾಶಕ್ತಿಗಿಂತ ಮಿಗಿಲಾದದ್ದುಯಾವುದುಇಲ್ಲ, ನಾವೆಲ್ಲರೂಗೌತಮ ಬುದ್ಧರ ಪಂಚಶೀಲ ತತ್ವಗಳನ್ನು ಪಾಲಿಸಿದರೆ ಆದರಅರಿವು, ಯಶಸ್ಸಿನ ಮಾರ್ಗಗಳನ್ನು ತಿಳಿಯಬಹುದು ಹಾಗಾಗಿ ಬುದ್ಧನ ತತ್ವಗಳನ್ನು ಪಾಲಿಸಿ ಎಂದು ಹೇಳಿದರು.

ಮೈಸೂರು ವಿಶ್ವವಿದ್ಯಾನಿಲಯದಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾಕೇಂದ್ರದಅಧ್ಯಾಪಕರು ಮತ್ತು ಸಂಶೋಧನಾ ಸಹಾಯಕರಾದಡಾ.ಕಲಾವತಿ ಹೆಚ್.ಎಸ್ಅವರು ಮಾತನಾಡಿ ಬುದ್ಧನನ್ನು ಕೇವಲ ಸಮುದಾಯಗಳಿಗೆ ಸೀಮಿತ ಮಾಡಬೇಡಿ, ಬುದ್ಧನ ಪ್ರವಚನ ಕೇಳಲು ಬಡವರಿಂದ ಶ್ರೀಮಂತರವರೆಗೂ ಜನ ಸೇರುತ್ತಿದ್ದರು, ಅವರಧಮ್ಮಕ್ಕೆಅಷ್ಟು ಶಕ್ತಿ ಇತ್ತು, ಸಹಾಯಕರುಣೆ ಪ್ರೀತಿದಯೆ ಸಹನೆ ಮಾನವೀಯ ಮೌಲ್ಯಗಳನ್ನು ಗೌತಮ ಬುದ್ಧ ಹೊಂದಿದ್ದರುಎಂದು ತಿಳಿಸಿದರು.

ಡಾ.ಬಿ.ಆರ್. ಅಂಬೇಡ್ಕರ್ ಸಹ ನನ್ನ ಮೊದಲ ಗುರುಗೌತಮ ಬುದ್ಧಎಂದು ಹೇಳಿದರು, ಸಹಸ್ರಾರು ವರ್ಷಗಳಿಂದ ಹಿಂದುಳಿದಿದ್ದ ಬುದ್ಧಿಸಂ ಅನ್ನುಡಾ.ಬಿ. ಆರ್. ಅಂಬೇಡ್ಕರ್ಅವರು ಭಾರತಾದ್ಯಂತ ಮತ್ತೆ ಪಸರಿಸುತ್ತರೆ, ಬುದ್ಧಇಲ್ಲದೆಅಂಬೇಡ್ಕರ್ ಇಲ್ಲಅಂಬೇಡ್ಕರ್ಇಲ್ಲದೆ ಬುದ್ಧಇಲ್ಲಎಂದು ಹೇಳಿದರು.

ಜನರು ಮೌಢ್ಯದ ಸುಳಿಯಲ್ಲಿ ಸಿಲುಕಿದಾಗ ಏಷ್ಯದ ಬೆಳಕಾದ ಗೌತಮ ಬುದ್ಧಯಾರು ಏನೇ ಹೇಳಿದರೂ ಸ್ವತಃ ನಾನೆ ಹೇಳಿದರು ಪ್ರಶ್ನಿಸದೇ ಯಾವುದನ್ನು ಒಪ್ಪಿಕೊಳ್ಳಬೇಡಿ, ಪ್ರಶ್ನಿಸುವುದನ್ನು ತಿಳಿಯಿರಿ ಎಂದವರು ಬುದ್ಧ, ಜ್ಞಾನಯಾರ ಮನೆಯ ಆಸ್ತಿಯಲ್ಲ ಅದನ್ನು ಅರಿತುಕೊಳ್ಳುವುದರ ಮೂಲಕ ನೀವು ಬುದ್ಧರಾಗಿಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಂಡ್ಯ ಉಪ ವಿಭಾಗಾಧಿಕಾರಿ ಶಿವಮೂರ್ತಿ, ತಹಶೀಲ್ದಾರ್ ಶಿವಕುಮಾರ್ ಬಿರಾದರ್, ಬೌದ್ಧ ಮಹಾಸಭೆಯರಾಜ್ಯಉಪಾಧ್ಯಕ್ಷ ಶಿವರಾಜ್, ಬೌದ್ಧ ಮಹಾಸಭೆಯಜಿಲ್ಲಾಧ್ಯಕ್ಷ ಪ್ರೋ.ಎಂ.ವೆಂಕಟೇಶ್, ದಲಿತಪರ ಸಂಘಟನೆಯ ಮುಖಂಡ ವೆಂಕಟಗಿರಿಯ್ಯ, ಮಾಜಿ ನಗರಸಭೆಯಅಧ್ಯಕ್ಷೆ ವಿಜಯಲಕ್ಷ್ಮೀ, ಹಾಗೂ ಮುಖಂಡರುಗಳಾದ ಕುಮಾರಿ, ಅಮ್ಜದ್ ಪಾ?ಾ ಸೇರಿದಂತೆಇನ್ನಿತರಗಣ್ಯರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಐಪ್ಯಾಡ್ - ಐಫೋನ್ ಬಳಕೆದಾರರೇ ಎಚ್ಚರ

ಭಾರತ ಸರ್ಕಾರದ ಸೈಬರ್ ಭದ್ರತಾ ಸಂಸ್ಥೆ CERT-In (ಭಾರತೀಯ ಕಂಪ್ಯೂಟರ್ ತುರ್ತು ಪ್ರತಿಕ್ರಿಯೆ ತಂಡ) ಐಫೋನ್ ಮತ್ತು ಐಪ್ಯಾಡ್ ಬಳಕೆದಾರರಿಗೆ ಪ್ರಮುಖ ಭದ್ರತಾ ಸಲಹೆ ನೀಡಿದೆ.

ಆಯಪಲ್‌ನ ಮೊಬೈಲ್ ಆಪರೇಟಿಂಗ್ ಸಿಸ್ಟಮ್‌ಗಳಾದ iOS ಮತ್ತು iPadOSನಲ್ಲಿ ಕಂಡುಬರುವ ಹಲವಾರು ಅಪಾಯಕಾರಿ ದೋಷಗಳನ್ನು ಈ ಸಲಹೆ ಎತ್ತಿ ತೋರಿಸುತ್ತಿದೆ. ಇವುಗಳನ್ನು ಸೈಬರ್ ಅಪರಾಧಿಗಳು ಹ್ಯಾಕ್ ಮಾಡಲು, ಡೇಟಾ ಕದಿಯಲು ಅಥವಾ ಸಾಧನವನ್ನು ಸಂಪೂರ್ಣವಾಗಿ ಕ್ರ್ಯಾಶ್ ಮಾಡಲು ಕೂಡಾ ಬಳಸಿಕೊಳ್ಳಬಹುದು. CERT-In ಪ್ರಕಾರ, ಈ ಭದ್ರತಾ ನ್ಯೂನತೆಗಳು iOS 18.3 ಅಥವಾ ಹಳೆಯ ಆವೃತ್ತಿಗಳಲ್ಲಿ ಚಾಲನೆಯಲ್ಲಿರುವ ಸಾಧನಗಳ ಮೇಲೆ ಪರಿಣಾಮ ಬೀರಬಹುದು. iPadOS17.7.3 ಅಥವಾ 18.3ಗಿಂತ ಹಳೆಯ ಆವೃತ್ತಿಗಳನ್ನು ಚಾಲನೆ ಮಾಡುವ iPad ಸಾಧನಗಳಲ್ಲಿ ದುರ್ಬಲತೆ ಅಸ್ತಿತ್ವದಲ್ಲಿದೆ. ಈ ಸಾಧನಗಳಿಗೆ ಅಪಾಯ.. ಐಫೋನ್ XS ಮತ್ತು ನಂತರದ ಮಾಡೆಲ್ಸ್ ಐಪ್ಯಾಡ್ ಪ್ರೊ (2ನೇ ಜನರೇಷನ್ ಮತ್ತು ಅದಕ್ಕಿಂತ ಮೇಲ್ಪಟ್ಟ) ಐಪ್ಯಾಡ್ 6ನೇ ಜನರೇಶನ್ ಮತ್ತು ಹೊಸ ಮಾಡೆಲ್ಸ್ ಐಪ್ಯಾಡ್ ಏರ್ (3ನೇ ಜನರೇಷನ್ ಮತ್ತು ಅದಕ್ಕಿಂತ ಮೇಲ್ಪಟ್ಟ) ಐಪ್ಯಾಡ್ ಮಿನಿ 5ನೇ ಜನರೇಷನ್ ಮತ್ತು ನಂತರದ ಆವೃತ್ತಿಗಳು ಹ್ಯಾಕರ್‌ಗಳು ನಿಮ್ಮ ವೈಯಕ್ತಿಕ ಮತ್ತು ಹಣಕಾಸಿನ ಮಾಹಿತಿ ಕದಿಯಬಹುದು. ಇದರೊಂದಿಗೆ ನೀವು ಆಯಪಲ್‌ನ ಭದ್ರತಾ ವೈಶಿಷ್ಟ್ಯಗಳನ್ನು ಬೈಪಾಸ್ ಮಾಡಬಹುದು ಮತ್ತು ದುರುದ್ದೇಶಪೂರಿತ ಕೋಡ್ (ಮಾಲ್ವೇರ್) ಚಲಾಯಿಸಬಹುದು.ಈ ದೋಷಗಳಿಗೆ ಆಯಪಲ್ ಭದ್ರತಾ ಪ್ಯಾಚ್‌ಗಳನ್ನು ಬಿಡುಗಡೆ ಮಾಡಿದೆ. ಆದ್ದರಿಂದ ಎಲ್ಲಾ ಬಳಕೆದಾರರು ತಮ್ಮ ಐಫೋನ್ ಅಥವಾ ಐಪ್ಯಾಡ್ ಅನ್ನು ಇತ್ತೀಚಿನ iOS/ iPadOS ಆವೃತ್ತಿಗೆ ತಕ್ಷಣವೇ ಅಪ್‌ಡೇಟ್ ಮಾಡಲು ಒತ್ತಾಯಿಸಲಾಗುತ್ತದೆ. ಇದಲ್ಲದೆ ಬಳಕೆದಾರರು ಅಪರಿಚಿತ ಅಥವಾ ಪರಿಶೀಲಿಸದ ಅಪ್ಲಿಕೇಶನ್‌ಗಳನ್ನು ಡೌನ್‌ಲೋಡ್ ಮಾಡುವುದನ್ನು ತಪ್ಪಿಸಬೇಕು. ಯಾವುದೇ ಅನುಮಾನಾಸ್ಪದ ಲಿಂಕ್‌ಗಳು ಅಥವಾ ಸಂದೇಶಗಳ ಮೇಲೆ ಕ್ಲಿಕ್ ಮಾಡಬೇಡಿ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

## ಒಗ್ಗರಣೆ ಅವಲಕ್ಕಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ತೆಳು ಅಥವಾ ಪೇಪರ್ ಅವಲಕ್ಕಿ – 1 ಬೌಲ್, ಸಣ್ಣಗೆ ಹೆಚ್ಚಿದ ಅಥವಾ ತುರಿದ ಸವತೆಕಾಯಿ – 1 ಚಿಕ್ಕ ಬೌಲ್, ಸಣ್ಣಗೆ ಹೆಚ್ಚಿದ ಈರುಳ್ಳಿ – 1 ಚಿಕ್ಕಬೌಲ್, ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪು – 3 ಸ್ಪೂನ್ ನಷ್ಟು, ಹಸಿ ತೆಂಗಿನ ತುರಿ – 1/2 ಬೌಲ್, ಶೇಂಗಾ ಬೀಜ – 4–5 ಸ್ಪೂನ್, ಕರಿಬೇವಿನ ಎಲೆ – 8–10, ಅರಿಸಿನ – ಕಾಲು ಸ್ಪೂನ್, ಕೆಂಪುಮೆಣಸಿನ ಪುಡಿ – ಕಾಲು ಸ್ಪೂನ್, ಒಗ್ಗರಣೆಗೆ ಎಣ್ಣೆ – 4–5 ಸ್ಪೂನ್, ಉದ್ದಿನ ಬೇಳೆ – 1 ಸ್ಪೂನ್, ಸಾಸಿವೆ – 1 ಸ್ಪೂನ್, ಕತ್ತರಿಸಿದ ಹಸಿ ಮೆಣಸು – 2–3, ರುಚಿಗೆ ತಕ್ಕಷ್ಟು – ಉಪ್ಪು

### ಮಾಡುವ ವಿಧಾನ

ಮೊದಲು ಒಂದು ಬೌಲ್ ಸ್ವಚ್ಛಗೊಳಿಸಿದ ಪೇಪರ್ ಅವಲಕ್ಕಿ ಹಾಕಿಕೊಳ್ಳಿ. ನಂತರ ಅದಕ್ಕೆ ತುರಿದ ಸೌತೆಕಾಯಿ, ಹೆಚ್ಚಿದ ಈರುಳ್ಳಿ, ತುರಿದ ಹಸಿತೆಂಗಿನಕಾಯಿ, ಕೊತ್ತಂಬರಿ ಸೊಪ್ಪು ಸೇರಿಸಿ. ಬಳಿಕ ಗ್ಯಾಸ್ ಮೇಲೆ ಒಗ್ಗರಣೆ ಬಾಣಲಿ ಇಟ್ಟು ಅದಕ್ಕೆ ಎಣ್ಣೆ ಹಾಕಿ. ಈಗ ಎಣ್ಣೆಗೆ ಉದ್ದಿನಬೇಳೆ, ಶೇಂಗಾ ಹಾಕಿ ಹುರಿಯಿರಿ. ಇದಕ್ಕೆ ಸಾಸಿವೆ, ಹಸಿಮೆಣಸು, ಕರಿಬೇವು ಹಾಕಿ ಸಾಸಿವೆ ಸಿಡಿದ ಮೇಲೆ ಈ ಒಗ್ಗರಣೆಯನ್ನು ಅವಲಕ್ಕಿ ಬೌಲ್ ಗೆ ಹಾಕಿ ಮೇಲಿಂದ ಖಾರಕ್ಕೆ ಬೇಕಷ್ಟು ಖಾರದ ಪುಡಿ ಮತ್ತು ಅರಿಸಿನ, ಉಪ್ಪು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಇದನ್ನು ಕೈಯಿಂದ ಮಿಕ್ಸ್ ಮಾಡಿದರೇ ಸರಿಯಾಗಿ ಮಿಶ್ರಣ ಸಿದ್ಧವಾಗುತ್ತದೆ.

## ಏಲಕ್ಕಿ ಗುಟ್ಟು ಗೊತ್ತೇ

### ಹೆಲ್ತ್ ಟಿಪ್ಸ್



ಏಲಕ್ಕಿಯ ಕ್ಷಾರೀಯ ಪರಿಣಾಮವು ಆಮ್ಲೀಯತೆಯನ್ನು ಕಡಿಮೆ ಮಾಡುತ್ತದೆ, ಎದೆ ನೋವು ಮತ್ತು ಅಜೀರ್ಣದಂತಹ ಸಮಸ್ಯೆಗಳನ್ನು ಕಡಿಮೆ ಮಾಡುತ್ತದೆ. ಇದರಲ್ಲಿ ಉತ್ಕರ್ಷಣ ನಿರೋಧಕಗಳು ಹೇರಳವಾಗಿದ್ದು, ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡುತ್ತದೆ, ರಕ್ತದೊತ್ತಡ ನಿಯಂತ್ರಣದಲ್ಲಿಡುತ್ತದೆ ಮತ್ತು ಹೃದಯದ ಕಾರ್ಯವನ್ನು ಸುಧಾರಿಸುತ್ತದೆ. ಏಲಕ್ಕಿಯನ್ನು ನಿಯಮಿತವಾಗಿ ಸೇವಿಸುವುದರಿಂದ ಕ್ಯಾಲೊರಿಗಳನ್ನು ಸುಡಲು ಸಹಾಯ ಮಾಡುತ್ತದೆ ಮತ್ತು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ದೇಹದ ತೂಕವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಏಲಕ್ಕಿಯಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿದ್ದು, ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ರಕ್ತದಲ್ಲಿನ ಗ್ಲೂಕೋಸ್ ಮಟ್ಟವು ಸ್ಥಿರವಾಗಿರುತ್ತದೆ. ಊಟದ ನಂತರ ಏಲಕ್ಕಿಯನ್ನು ಅಗಿಯುವುದರಿಂದ ನರಗಳಿಗೆ ಉತ್ತಮ ವಿಶ್ರಾಂತಿ ದೊರೆಯುತ್ತದೆ ಮತ್ತು ಒತ್ತಡ ಕಡಿಮೆಯಾಗುತ್ತದೆ. ಇದು ನಿಮಗೆ ಚೆನ್ನಾಗಿ ನಿದ್ರೆ ಮಾಡಲು ಸಹಾಯ ಮಾಡುತ್ತದೆ.

ಏಲಕ್ಕಿಯ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಬಾಯಿಯ ಬ್ಯಾಕ್ಟೀರಿಯಾಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ, ಇದರಿಂದಾಗಿ ತಾಜಾ ಉಸಿರಾಟ ದೊರೆಯುತ್ತದೆ. ಏಲಕ್ಕಿ ತಿನ್ನುವುದರಿಂದ ಮನಸ್ಥಿತಿ ಸುಧಾರಿಸುತ್ತದೆ. ಏಲಕ್ಕಿ ದೇಹದ ಚಯಾಪಚಯ ಕ್ರಿಯೆಯನ್ನು ನಿಧಾನವಾಗಿ ಹೆಚ್ಚಿಸುತ್ತದೆ. ದಿನಕ್ಕೆ ಎರಡು ಏಲಕ್ಕಿ ತಿನ್ನುವುದರಿಂದ ಜೀರ್ಣಕಾರಿ ಕಿಣ್ವಗಳ ಉತ್ಪಾದನೆ ಹೆಚ್ಚಾಗುತ್ತದೆ. ಹೊಟ್ಟೆ ಉಬ್ಬುವುದು, ಆಮ್ಲೀಯತೆ ಮತ್ತು ಅಜೀರ್ಣದಂತಹ ಸಮಸ್ಯೆಗಳು ಕಡಿಮೆಯಾಗುತ್ತವೆ. ಈ ಆಹಾರಗಳ ಥರ್ಮೋಜೆನಿಕ್ ಗುಣಲಕ್ಷಣಗಳು ದೇಹದಲ್ಲಿನ ಕ್ಯಾಲೊರಿಗಳನ್ನು ಪರಿಣಾಮಕಾರಿಯಾಗಿ ಸುಡುತ್ತವೆ. ರಾತ್ರಿ ಏಲಕ್ಕಿ ತಿನ್ನುವುದರಿಂದ ತೂಕ ಇಳಿಸಿಕೊಳ್ಳಲು ಸಹಾಯವಾಗುತ್ತದೆ. ಏಲಕ್ಕಿ ಚರ್ಮ ಮತ್ತು ಕೂದಲಿಗೆ ಸಹ ಒಳ್ಳೆಯದು. ಇವುಗಳಲ್ಲಿರುವ ಉತ್ಕರ್ಷಣ ನಿರೋಧಕಗಳು ರಕ್ತ ಪೂರೈಕೆಯನ್ನು ಸುಧಾರಿಸುತ್ತದೆ. ಇದರಿಂದ ಚರ್ಮವು ಕಾಂತಿಯುತ ಮತ್ತು ಕಾಂತಿಯುತವಾಗುತ್ತದೆ. ಬ್ಯಾಕ್ಟೀರಿಯಾ ವಿರೋಧಿ ಗುಣಗಳು ಮೊಡವೆಗಳ ವಿರುದ್ಧ ಹೋರಾಡುತ್ತವೆ. ಏಲಕ್ಕಿಯಲ್ಲಿರುವ ಪೋಷಕಾಂಶಗಳು ಕೂದಲನ್ನು ಬಲಪಡಿಸುತ್ತವೆ. ತಲೆಹೊಟ್ಟು ತಡೆಯುತ್ತದೆ.

## ದಾಸವಾಳದ ಪ್ರಯೋಜನಗಳು

### ಬ್ಯೂಟಿ ಟಿಪ್ಸ್

ದಾಸವಾಳ ಬ್ಯಾಕ್ಟೀರಿಯಾ ವಿರೋಧಿ ಗುಣಲಕ್ಷಣಗಳನ್ನು ಹೊಂದಿದೆ. ಇದರಲ್ಲಿ ಪ್ರೊಟೊಕಾಟೆಚುಯಿಕ್ ಆಮ್ಲ ಸಮೃದ್ಧವಾಗಿರುವುದರಿಂದ ದಾಸವಾಳದ ಚಹಾವು ಕ್ಯಾನ್ಸರ್ ಕೋಶಗಳ ಬೆಳವಣಿಗೆಯನ್ನು ತಡೆಯುವಲ್ಲಿ ಸಹಾಯಕಾರಿಯಾಗಿದೆ. ದಾಸವಾಳದ ಚಹಾವನ್ನು ಸೇವಿಸುವುದರಿಂದ ಜೀರ್ಣಕ್ರಿಯೆ ಸುಧಾರಿಸುತ್ತದೆ. ಇದು ತೂಕ ನಷ್ಟಕ್ಕೂ ಕಾರಣವಾಗುತ್ತದೆ. ಖಿನ್ನತೆಯನ್ನು ಶಮನಗೊಳಿಸುತ್ತದೆ. ಉತ್ಕರ್ಷಣ ನಿರೋಧಕಗಳನ್ನು ಹೊಂದಿರುವುದರಿಂದ ಯಕೃತ್ತಿನ ಸಮಸ್ಯೆಯಿಂದ ಪಾರು ಮಾಡುತ್ತದೆ. ಇದು ರಕ್ತದೊತ್ತಡವನ್ನು ಕಡಿಮೆ ಮಾಡುತ್ತದೆ. ನಿಮಗೆ ತಿಳಿದಿರಲಿ, ದಾಸವಾಳ ಹೂ ಅಥವಾ ದಾಸವಾಳ ಹೂವಿನ ಚಹಾ ಕುಡಿಯುವುದರಿಂದ ಸುಲಭವಾಗಿ ತೂಕವನ್ನು ಕಳೆದುಕೊಳ್ಳಬಹುದು. ದಾಸವಾಳದಲ್ಲಿನ ಸಾರಗಳು ಕೊಬ್ಬಿನ ಕೋಶಗಳನ್ನು ಸಂಗ್ರಹಿಸುವುದನ್ನು ತಡೆಯಲು ಸಹಾಯ ಮಾಡುತ್ತದೆ. ಕೆಲವು ಅಧ್ಯಯನದ ಪ್ರಕಾರ, ದಾಸವಾಳವನ್ನು ಆಹಾರವಾಗಿ ಸೇವನೆ ಮಾಡುವುದರಿಂದ ದೇಹದ ತೂಕ, ದೇಹದ ಕೊಬ್ಬು ಮತ್ತು ಕೊಬ್ಬಿನ ಅಂಗಾಂಶದಲ್ಲಿನ ಉರಿಯೂತದ ಸಂಯುಕ್ತಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಈ ದಾಸವಾಳ ಹೂವಿನಿಂದ ತಯಾರಿಸಿದ ಚಹಾವನ್ನು ಮಧುಮೇಹ ಹೊಂದಿರುವವರು ಸೇವನೆ ಮಾಡಿದರೆ, ರಕ್ತದಲ್ಲಿನ ಸಕ್ಕರೆಯ ಮಟ್ಟವನ್ನು ಕಡಿಮೆ ಮಾಡಿಕೊಳ್ಳಬಹುದು. ದಾಸವಾಳ ಹೂವು ಸ್ಥೂಲಕಾಯ, ಮಧುಮೇಹಗಳಿಗೆ ಮಾತ್ರ ಔಷಧಿಯಾಗಿಲ್ಲ ಬದಲಾಗಿ, ನಿಮ್ಮ ಯಕೃತ್ ಅನ್ನು ಆರೋಗ್ಯಕರವಾಗಿರುವಂತೆ ಮಾಡುತ್ತದೆ. ಕೆಲವು ಅಧ್ಯಯನದ ಪ್ರಕಾರ, ದಾಸವಾಳದ ಸಾರಗಳು ಕೀಮೋಥೆರಪಿ ಔಷಧಿಗಳೊಂದಿಗೆ ಸಂಬಂಧಿಸಿದ್ದು, ಯಕೃತ್ತಿನ ವಿಷತ್ವದಿಂದ ರಕ್ಷಿಸುತ್ತದೆ ಎಂದು ತಿಳಿದು ಬಂದಿದೆ.



## ರಶ್ಮಿಕಾ - ವಿಜಯ್ ಫ್ಯಾನ್ಸ್‌ಗೆ ಸಿಹಿ ಸುದ್ದಿ



ನಟ ವಿಜಯ್ ದೇವರಕೊಂಡ ಕೊನೆಯ ಬಾರಿಗೆ 'ದಿ ಫ್ಯಾಮಿಲಿ ಸ್ಟಾರ್' ಚಿತ್ರದಲ್ಲಿ ಕಾಣಿಸಿಕೊಂಡರು. ಕೌಟುಂಬಿಕ ಕಥಾ ಹಂದರದ ಈ ಚಿತ್ರವು ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಿತು. ಈ ಸಿನಿಮಾದ ನಂತರ ವಿಜಯ್ ಅವರು ನಟ ಪ್ರಭಾಸ್ ಅವರ ಚಿತ್ರ ಕಲ್ಕಿಯಲ್ಲಿ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು.. ಇದರ ನಂತರ, ನಟ ವಿಜಯ್ ದೇವರಕೊಂಡ ನಟಿಸಿರುವ ಕಿಂಗ್ಡಮ್ ಚಿತ್ರ ಬಿಡುಗಡೆಗೆ ಸಿದ್ಧವಾಗಿದೆ.

ಹೌದು.. ಕಿಂಗ್ಡಮ್ ಚಿತ್ರವನ್ನು ನಿರ್ದೇಶಕ ಗೌತಮ್ ತಿನ್ನನುರಿ ಬರೆದು ನಿರ್ದೇಶಿಸಿದ್ದಾರೆ. ಮೇ 30, 2025 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಸಂಗೀತ ಸಂಯೋಜಕ ಅನಿರುದ್ಧ್ ರವಿಚಂದ್ರನ್ ಈ ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಿದ್ದಾರೆ. ಈ ಚಿತ್ರದಲ್ಲಿನ ವಿಜಯ್ ಲುಕ್ ಅಭಿಮಾನಿಗಳಲ್ಲಿ ಕುತೂಹಲಕ್ಕೆ ಕಾರಣವಾಗಿದೆ.ಈ ಚಿತ್ರದಲ್ಲಿ ನಟ ವಿಜಯ್ ದೇವರಕೊಂಡ ಅವರೊಂದಿಗೆ ನಟಿ ಭಾಗ್ಯಶ್ರೀ ಫೋರ್ಸ್ ನಾಯಕಿಯಾಗಿ ನಟಿಸಿದ್ದಾರೆ. ಸಸ್ಪೆನ್ಸ್ ಥ್ರಿಲ್ಲರ್ ಶೈಲಿಯಲ್ಲಿ ತಯಾರಾಗಿರುವ ಈ ಚಿತ್ರದ ಪ್ರಚಾರದಲ್ಲಿ ಚಿತ್ರತಂಡ ಪ್ರಸ್ತುತ ಬ್ಯುಸಿಯಾಗಿದೆ. ಈ ಪರಿಸ್ಥಿತಿಯಲ್ಲಿ ಅವರ ಮುಂದಿನ ಚಿತ್ರದ ಘೋಷಣೆ ಅಭಿಮಾನಿಗಳಲ್ಲಿ ಮತ್ತಷ್ಟು ಉತ್ಸಾಹ ಮೂಡಿಸಿದೆ.

ಅದರಂತೆ, ನಿರ್ದೇಶಕ ರಾಹುಲ್ ಸಂಕೃತ್ಯನ್ ವಿಜಯ್ ದೇವರಕೊಂಡ ಅವರ 14 ನೇ ಚಿತ್ರವನ್ನು ನಿರ್ದೇಶಿಸಲಿದ್ದಾರೆ. ಇಂಡಿಯಾ ಗ್ಲಿಟ್ಜ್ ಪ್ರಕಟಿಸಿದ ವರದಿಯ ಪ್ರಕಾರ, ನಟಿ ರಶ್ಮಿಕಾ ಮಂದಣ್ಣ ಈ ಚಿತ್ರದಲ್ಲಿ ನಟ ವಿಜಯ್ ದೇವರಕೊಂಡ ಜೊತೆ ನಾಯಕಿಯಾಗಿ ನಟಿಸಲಿದ್ದಾರೆ ಎಂದು ತಿಳಿದು ಬಂದಿದೆ. ಕಥೆ ಕೇಳಿದ ತಕ್ಷಣ ನಟಿ ರಶ್ಮಿಕಾ ಮಂದಣ್ಣ ಚಿತ್ರದಲ್ಲಿ ನಟಿಸಲು ಒಪ್ಪಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ. ವಿಜಯ್ ದೇವರಕೊಂಡ ಅವರ 14 ನೇ ಚಿತ್ರದ ಕೆಲಸ ಈಗಾಗಲೇ ಪ್ರಾರಂಭವಾಗಿದ್ದು, ನಟಿ ರಶ್ಮಿಕಾ ಮಂದಣ್ಣ ಅವರ ಪ್ರಸ್ತುತ ಕುಬೇರ ಮತ್ತು ಥಾಮಾ ಚಿತ್ರೀಕರಣ ಪೂರ್ಣಗೊಂಡ ನಂತರ ಈ ಚಿತ್ರತಂಡ ಸೇರಲಿದ್ದಾರೆ ಎಂದು ವರದಿಯಾಗಿದೆ.ಈ ಜೋಡಿ ಈ ಹಿಂದೆ 2018 ರಲ್ಲಿ ಪರಶುರಾಮ್ ನಿರ್ದೇಶನದ ಗೀತಾ ಗೋವಿಂದಂ ಚಿತ್ರದಲ್ಲಿ ಮೊದಲ ಬಾರಿಗೆ ಒಟ್ಟಿಗೆ ಕೆಲಸ ಮಾಡಿತ್ತು. ಚಿತ್ರದ ಕಥೆ ಪ್ರೇಕ್ಷಕರಿಂದ ಹೆಚ್ಚು ಗಮನ ಸೆಳೆಯದಿದ್ದರೂ, ವಿಜಯ್ ದೇವರಕೊಂಡ–ರಶ್ಮಿಕಾ ಅವರ ಕೆಮಿಸ್ಟ್ರಿ ಅಭಿಮಾನಿಗಳಿಗೆ ಇಷ್ಟವಾಗಿತ್ತು. ಈ ಚಿತ್ರದ ನಂತರ, ಅವರಿಬ್ಬರೂ ಡಿಯರ್ ಕಾಮ್ರೇಡ್ ಚಿತ್ರದಲ್ಲೂ ಒಟ್ಟಿಗೆ ನಟಿಸಿದರು. ಈ ಸಿನಿಮಾ ವಿಮರ್ಶಾತ್ಮಕವಾಗಿ ಮತ್ತು ವಾಣಿಜ್ಯಕವಾಗಿ ಉತ್ತಮ ಪ್ರತಿಕ್ರಿಯೆ ಪಡೆಯಿತು.

ಹೀಗಿರುವಾಗ ಈ ಜೋಡಿ 6 ವರ್ಷಗಳ ನಂತರ ಮತ್ತೆ ಒಂದಾಗುತ್ತಿರುವುದು ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ.



## ರಾಮಗೌನಿ ಸಹೋದರಿಯರಾದ ಕು.ಮೌಕ್ತಿಕ, ಕು. ಪ್ರಿಶಿಕ ರಂಗ ಪ್ರವೇಶ



ಖ್ಯಾತ ನೃತ್ಯ ಗುರು ವಿದುಷಿ ಡಾ. ಪ್ರಿಯಾ ಗಣೇಶ್‌ರವರ ಶಿಷ್ಯೆರಾಮಗೌನಿ ಸಹೋದರಿಯರಾದಕು.ಮೌಕ್ತಿಕ ಮತ್ತು ಕು.ಪ್ರಿಶಿಕರಂಗಪ್ರವೇಶಮೇ 14ಬುಧವಾರ ಸಂಜೆ 5.00 ಗಂಟೆಗೆನಗರದಜೆ.ಸಿ.ರಸ್ತೆಯ ರವೀಂದ್ರ ಕಲಾಕ್ಷೇತ್ರದಲ್ಲಿಆಯೋಜಿಸಲಾಗಿದೆ.

6ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿರುವಕು .ಪ್ರಿಶಿಕಬಾಲ್ಯದಿಂದಲೂ ನಾಟ್ಯ ಕ್ಷೇತ್ರದಲ್ಲಿ ಆಸಕ್ತರು ಖ್ಯಾತ ನೃತ್ಯ ಗುರು ಡಾ. ಪ್ರಿಯಾ ಗಣೇಶ್‌ರವರ ಶಿಷ್ಯೆಯಾಗಿ ಭರತನಾಟ್ಯ ಜೂನಿಯರ್ ಪರೀಕ್ಷೆಯನ್ನು ಯಶಸ್ವಿಯಾಗಿ ಪೂರೈಸಿ ಕರ್ನಾಟಕ ಶಾಸ್ತ್ರೀಯ ಸಂಗೀತವನ್ನು ಅಭ್ಯಸುಸಿತ್ತಿದ್ದಾರೆ.ಜಿಮ್ನಾನಿಷಿಯಂ ಮತ್ತು ಈಜುವಿಕೆಯಲ್ಲೂ ಆಸಕ್ತರಾಗಿಅಯೋಧ್ಯಾ ರಾಮಮಂದಿರ ಮುಂತಾದ ಹಲವು ಪ್ರಮುಖ ವೇದಿಕೆಗಳಲ್ಲಿ ಪ್ರದರ್ಶನ ನೀಡಿರುವ ಈ ಯುವ ಪ್ರತಿಭೆಗೆ ಅರಸಿ ಬಂದ ಗೌರವಗಳು ಅನೇಕ .

ದಂತ ವೈದ್ಯೆ ಡಾ.ಉಷಾ ಮತ್ತು ಪ್ರತಾಪ್ ರಾಮಗೌನಿ ಸುಪುತ್ರಿಯರಾದಈಕೆಯ ಸಹೋದರಿ4ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವಕು.ಮೌಕ್ತಿಕಕೂಡ ಕಿರಿವಯಸ್ಸಿನಲ್ಲೆ ಅಪಾರ ಸಾಧನೆ ಮಾಡಿದ್ದಾರೆ.

ವಿಶೇಷ ಮಕ್ಕಳಿಗೆ ನೃತ್ಯ ಮತ್ತು ಯೋಗದ ಪರಿಮಾಣಕಾರಿತ್ವಕುರಿತು ಪಿ.ಹೆಚ್‌ಡಿ ಮಾಡಿರುವ ಡಾ.ಪ್ರಿಯಾ ಗಣೇಶ್ ಗುರುವಿನ ಮಾರ್ಗದರ್ಶನ ಮತ್ತು ವೇದಿಕೆ ಅನುಭವ ಮೂಲಕಸಮುದ್ಭವ ನೃತ್ಯ ಮತ್ತು ಕಲಾ ಶಾಲೆಯ ವಿದ್ಯಾರ್ಥಿನಿಯರಾದಕು. ಮೌಕ್ತಿಕ ಮತ್ತು ಕು.ಪ್ರಿಶಿಕಪ್ರಸ್ತುತ ಪಡಿಸುವ'ರಂಗಪ್ರವೇಶದಿವ್ಯ ಕುಮಾರರುಕೃಷ್ಣ ಹಾಗೂ ಬಲರಾಮರ ಬಾಲ್ಯ ಲೀಲೆಗಳು,ಆಟ ಪಾಠಗಳು,ಲೋಕ ಕಲ್ಯಾಣ ಕಾರ್ಯಗಳು ಹಾಗೂ ಧರ್ಮಪಾಲನೆಯ ವಿಶಿಷ್ಟ ನೃತ್ಯಾತ್ಮಕ ಪ್ರಸ್ತುತಿಗೆಖ್ಯಾತ ನೃತ್ಯಪಟು , ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ಅಧ್ಯಕ್ಷೆ ಶುಭಾ ಧನಂಜಯ, ಲೇಖಕಿ ರಂಜಿನಿ ದತ್ತಾತ್ರಿ ಮತ್ತು ಜೋತಿಷಿ ಶ್ರೀಕಂಠ ಶಾಸ್ತ್ರೀಸಾಕ್ಷಿಯಾಗಲಿದ್ದಾರೆ. ಕು.ಸಾನಿಧ್ಯ.ಪಿ ಮತ್ತು ಕು.ಪೂರ್ವಿ.ಎಂ.ಎಸ್ ಕೋರವಂಜಿ ಶೈಲಿಯ ವಿಶಿಷ್ಟ ನಿರೂಪಣೆ,ವಿ.ಅನಿಲ್ ಕುಮಾರ್– ನಟುವಾಂಗ,ವಿ.ದೇಬೂರು ಎಸ್ ಶ್ರೀವತ್ಸಗಾಯನ,ವಿ.ಶ್ರೀಹರಿ ಅರ್.ಮೃದಂಗ,ವಿ.ಎನ್ ಆರ್‌ನರಸಿಂಹ ಮೂರ್ತಿಕೊಳಲು,ವಿ. ತುಮಕೂರು ಬಿ.ಶಶಿಕುಮಾರ್ ಘಟಂ ಮತ್ತು ಮೋರ್ಚಿಂಗ್ ಹಾಗೂ ಅರುಣ್ ಭಾರದ್ವಾಜ್ ಸಾಹಿತ್ಯಸಹಚರ್ಯದಲ್ಲಿ ಮೂಡಿಬರುವ ಕಾರ್ಯಕ್ರಮ ಕಲಾ ರಸಿಕರ ಮನಸೂರೆಗೊಳ್ಳಲಿದೆ. ಗುರು ವಿದುಷಿ ಡಾ.ಪ್ರಿಯಾ ಗಣೇಶ್ ಶಿಷ್ಯೆ ಯಿಂದ'ದಿವ್ಯ ಕುಮಾರರು'ರಂಗಪ್ರಸ್ತುತಿ ಸಮಯ: ಸಂಜೆ5 .00ಘಂಟೆಗೆಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ.ರಸ್ತೆ ,ಬೆಂಗಳೂರು



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಉದ್ಯೋಗದಲ್ಲಿ ಬಡ್ತಿ, ಪರಿಶ್ರಮಕ್ಕೆ ತಕ್ಕ ಫಲ, ಶತ್ರು ಭಾದೆ, ದೇವತಾ ಕಾರ್ಯಗಳಲ್ಲಿ ಭಾಗಿ.

**ವೃಷಭ:** ವಿರೋಧಿಗಳಿಂದ ತೊಂದರೆ, ಋಣಭಾದೆ, ಅನಿರೀಕ್ಷಿತ ಧನ ನಷ್ಟ, ಮನೋವ್ಯಥೆ, ಕುಟುಂಬದಲ್ಲಿ ಹಿತಕರ ವಾತಾವರಣ.

**ಮಿಥುನ:** ಕೆಲಸ ಕಾರ್ಯಗಳಲ್ಲಿ ಸ್ವಲ್ಪ ವಿಳಂಬ, ಶರೀರದಲ್ಲಿ ತಳಮಳ, ಶತ್ರು ಧ್ವಂಸ, ಗಣ್ಯ ವ್ಯಕ್ತಿಗಳ ಭೇಟಿ, ಪರಸ್ತ್ರೀ ಧನ ಲಾಭ.

**ಕಟಕ:** ಕಾರ್ಯಸಿದ್ಧಿ, ಆರೋಗ್ಯದ ಸಮಸ್ಯೆ, ಜೋರಾಗ್ನಿ ಭೀತಿ, ಪರಸ್ಥಳವಾಸ, ವ್ಯವಹಾರದಲ್ಲಿ ಅಲ್ಪ ಅಭಿವೃದ್ಧಿ.

**ಸಿಂಹ:** ಸ್ಥಗಿತ ಕಾರ್ಯದಲ್ಲಿ ಮುನ್ನಡೆ, ಸುಖ ಭೋಜನ, ಕುಟುಂಬ ಸೌಖ್ಯ, ಮನಶಾಂತಿ, ಗೌರವಪ್ರಾಪ್ತಿ, ಬಂಧುಗಳಲ್ಲಿ ವೈರತ್ವ.

**ಕನ್ಯಾ:** ಹಣಕಾಸಿನ ಪರಿಸ್ಥಿತಿ ಉತ್ತಮ, ತೀರ್ಥಯಾತ್ರೆ, ತಾಳ್ಮೆಯಿಂದ ಇರಿ, ಅವಾಚ್ಯ ಶಬ್ದಗಳಿಂದ ನಿಂದನೆ.

**ತುಲಾ:** ಶ್ರಮವಿಲ್ಲದೆ ಏನು ನಡೆಯುವುದಿಲ್ಲ, ವಿದ್ಯಾರ್ಥಿಗಳಲ್ಲಿ ಪ್ರಗತಿ, ಕಾರ್ಯ ಸಾಧನೆ, ಸ್ತ್ರೀ ಲಾಭ, ಉತ್ತಮ ಪ್ರಗತಿ.

**ವೃಶ್ಚಿಕ:** ಅನಿರೀಕ್ಷಿತ ಖರ್ಚು, ಧಾರ್ಮಿಕ ಕಾರ್ಯ, ಪ್ರೀತಿ ಪಾತ್ರರ ಆಗಮನ, ಶೀತಸಂಬಂಧ ರೋಗ, ದಂಡ ಕಟ್ಟುವಿರಿ.

**ಧನಸ್ಸು:** ಯತ್ನ ಕಾರ್ಯ ಜಯ, ಕೃಷಿಕರಿಗೆ ಲಾಭ, ಸರಾಗವಾಗಿ ಯಶಸ್ಸನ್ನು ಕಾಣುವಿರಿ, ಮನಸ್ಸಿಗೆ ನೆಮ್ಮದಿ.

**ಮಕರ:** ಅನಾವಶ್ಯಕ ವಿಷಯಗಳ ಚರ್ಚೆ, ಪರರಿಗೆ ಸಹಾಯ, ಕೋಪ ಜಾಸ್ತಿ, ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ.

**ಕುಂಭ:** ಕೋರ್ಟ್ ವ್ಯಾಜ್ಯಗಳಿಂದ ತೊಂದರೆ, ವಾಹನ ರಿಪೇರಿ, ಅಕಾಲ ಭೋಜನ, ಆರೋಗ್ಯದಲ್ಲಿ ಸಮಸ್ಯೆ.

**ಮೀನ:** ಸ್ತ್ರೀಯರಿಗೆ ಹೆಚ್ಚಿನ ಜವಾಬ್ದಾರಿ, ಯಾರನ್ನು ನಂಬಬೇಡಿ, ಶತ್ರುಭಾದೆ, ಸಾಧಾರಣ ಫಲ, ಮಕ್ಕಳ ಅಗತ್ಯಕ್ಕೆ ಖರ್ಚು.

## ವಿಶ್ವ ಸೌಲಭ್ಯಗಳ ನಿರ್ವಹಣಾ ದಿನ

ವಿಶ್ವ ಸೌಲಭ್ಯ ನಿರ್ವಹಣಾ ದಿನವನ್ನು ವಾರ್ಷಿಕವಾಗಿ ಮೇ ತಿಂಗಳ ಎರಡನೇ ಪೂರ್ಣ ವಾರದ ಬುಧವಾರ ಆಚರಿಸಲಾಗುತ್ತದೆ ಮತ್ತು ಈ ವರ್ಷ, ಇದು ಮೇ 14 ರಂದು ಬರುತ್ತದೆ. ಪರಿಸರದ ಸುರಕ್ಷತೆ ಮತ್ತು ಸೌಕರ್ಯವನ್ನು ಖಾತ್ರಿಪಡಿಸುವ ಸೌಲಭ್ಯ ನಿರ್ವಹಣೆಯಲ್ಲಿ ಕೆಲಸ ಮಾಡುವ ವ್ಯಕ್ತಿಗಳ ಕೊಡುಗೆಗಳನ್ನು ಆಚರಿಸಲು ಇದು. ಸೌಲಭ್ಯಗಳ ನಿರ್ವಹಣೆಯಲ್ಲಿ ತೊಡಗಿರುವ ಜನರನ್ನು ಪ್ರಶಂಸಿಸುವುದು ಮತ್ತು ಗುರುತಿಸುವುದು ದಿನದ ಉದ್ದೇಶವಾಗಿದೆ.

ಗ್ಲೋಬಲ್ ಎಫ್.ಎಂ. ಪ್ರಾರಂಭಿಸಿದ ವಿಶ್ವ ಸೌಲಭ್ಯ ನಿರ್ವಹಣಾ ದಿನವನ್ನು ಮೊದಲು ಆಗಸ್ಟ್ 28, 2009 ರಂದು ಆಚರಿಸಲಾಯಿತು. ವರ್ಷಗಳಲ್ಲಿ ದಿನದ ನಿಖರವಾದ ದಿನಾಂಕ ಬದಲಾಗಿದೆ ಎಂದು ವರದಿಯಾಗಿದೆ. ಇದನ್ನು ಜೂನ್ 2010 ರಿಂದ 2013 ರ ನಾಲ್ಕನೇ ಗುರುವಾರ; ಜೂನ್ 2014 ರಿಂದ 2015 ರ ಮೊದಲ ಪೂರ್ಣ ವಾರದ ಬುಧವಾರ; ಜುಲೈ 13, 2016 ರಂದು ಆಚರಿಸಲಾಯಿತು; ಮತ್ತು 2017 ರಿಂದ ಇಲ್ಲಿಯವರೆಗೆ ಮೇ ತಿಂಗಳ ಎರಡನೇ ಪೂರ್ಣ ವಾರದ ಬುಧವಾರ. ಏನೇ ಇರಲಿ, ವಿಶ್ವ ಸೌಲಭ್ಯ ನಿರ್ವಹಣಾ ದಿನದ ಉದ್ದೇಶ ಒಂದೇ ಆಗಿರುತ್ತದೆ: ಸೌಲಭ್ಯ ನಿರ್ವಹಣೆಯಲ್ಲಿ ಕೆಲಸ ಮಾಡುವ ವ್ಯಕ್ತಿಗಳ ಕೊಡುಗೆಗಳನ್ನು ಗುರುತಿಸುವುದು, ಪ್ರಶಂಸಿಸುವುದು ಮತ್ತು ಆಚರಿಸುವುದು.

ಸೌಲಭ್ಯ ನಿರ್ವಹಣೆಯು ಸಂಸ್ಥೆಯ ವ್ಯವಹಾರ ಕಾರ್ಯಾಚರಣೆಗಳಿಗೆ ಮೂಲಭೂತ ಬೆಂಬಲವನ್ನು ಒದಗಿಸುವ ಗುರಿಯನ್ನು ಹೊಂದಿದೆ ಮತ್ತು ಬಹುತೇಕ ಎಲ್ಲಾ ಪರಿಸರಗಳಲ್ಲಿ ಇದು ಅಗತ್ಯವಾಗಿರುತ್ತದೆ: ಕಚೇರಿಗಳು, ಆಸ್ಪತ್ರೆಗಳು, ಆರೈಕೆ ಗೃಹಗಳು ಮತ್ತು ಶೈಕ್ಷಣಿಕ ಸಂಸ್ಥೆಗಳು, ಲಾಜಿಸ್ಟಿಕ್ ಕೇಂದ್ರಗಳು, ಹೋಟೆಲ್‌ಗಳು ಮತ್ತು ರಂಗಗಳು. ಕೆಲಸದ ವಾತಾವರಣದ ಸುರಕ್ಷತೆ ಮತ್ತು ಸೌಕರ್ಯವನ್ನು ಖಚಿತಪಡಿಸಿಕೊಳ್ಳಲು ಸೌಲಭ್ಯ ನಿರ್ವಹಣೆ ಅತ್ಯಗತ್ಯ. ಕೆಲಸದ ಸ್ಥಳವನ್ನು ಉತ್ತಮವಾಗಿ ನಿರ್ವಹಿಸಿದರೆ, ಜನರು ತಮ್ಮ ಕೆಲಸದ ಬಗ್ಗೆ ಹೆಚ್ಚು ಉತ್ಪಾದಕ ಮತ್ತು ಉತ್ಸಾಹಭರಿತರಾಗಿರಲು ಪ್ರೋತ್ಸಾಹಿಸಲಾಗುತ್ತದೆ.

ಸೌಲಭ್ಯ ನಿರ್ವಹಣೆಯಲ್ಲಿ ಎರಡು ವರ್ಗಗಳಿವೆ: 'ಹಾರ್ಡ್ ಎಫ್.ಎಂ.' ಮತ್ತು 'ಸಾಫ್ಟ್ ಎಫ್.ಎಂ.' ಹಾರ್ಡ್ ಎಫ್.ಎಂ. ಯಾಂತ್ರಿಕ ಮತ್ತು ವಿದ್ಯುತ್ ನಿರ್ವಹಣೆ, ಬಟ್ಟೆ ನಿರ್ವಹಣೆ, ಪ್ಲಂಬಿಂಗ್ ಮತ್ತು ಹವಾನಿಯಂತ್ರಣದಂತಹ ಕಟ್ಟಡದ ಭೌತಿಕ ವಸ್ತುಗಳಿಗೆ ಸಂಬಂಧಿಸಿದೆ. ಸಾಫ್ಟ್ ಎಫ್.ಎಂ. ಆತಿಥ್ಯ, ಅಡುಗೆ, ಶುಚಿಗೊಳಿಸುವಿಕೆ ಮತ್ತು ಮಾನವ ಸಂಪನ್ಮೂಲಗಳನ್ನು ಒಳಗೊಂಡಂತೆ ಜನರು ಮತ್ತು ಸಂಘಟನೆಯ ಬಗ್ಗೆ. ಎರಡಕ್ಕೂ ಉತ್ತಮ ತಂಡದ ಕೆಲಸ ಬೇಕಾಗುತ್ತದೆ. ಇಂಟರ್ನ್ಯಾಷನಲ್ ಆರ್ಗನೈಸೇಶನ್ ಫಾರ್ ಸ್ಟ್ಯಾಂಡರ್ಡೈಸೇಶನ್ ವ್ಯಾಖ್ಯಾನಿಸಿದಂತೆ, ಸೌಲಭ್ಯಗಳ ವ್ಯವಸ್ಥಾಪಕರು ಜನರು, ಸ್ಥಳ, ಪ್ರಕ್ರಿಯೆ ಮತ್ತು ತಂತ್ರಜ್ಞಾನವನ್ನು ಸಂಯೋಜಿಸುವಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಲು ಸಾಧ್ಯವಾದರೆ, ನಿರ್ಮಿತ ಪರಿಸರವು ಖಂಡಿತವಾಗಿಯೂ ಸುರಕ್ಷಿತ, ಆರಾಮದಾಯಕ ಮತ್ತು ಕ್ರಿಯಾತ್ಮಕವಾಗಿರುತ್ತದೆ.

## ಕಾಶ್ಮೀರ ವಿಷಯದಲ್ಲಿ ಮಧ್ಯಸ್ಥಿಕೆ ಬೇಕಿಲ್ಲ: ಟ್ರಂಪ್ ಗೆ ತಿರುಗೇಟು



**ನವದೆಹಲಿ:** ಕಾಶ್ಮೀರ ವಿಷಯವು ಭಾರತ ಮತ್ತು ಪಾಕಿಸ್ತಾನದ ನಡುವಿನ ಸಮಸ್ಯೆಯಾಗಿದೆ. ಅದನ್ನು ಉಭಯ ರಾಷ್ಟ್ರಗಳು ಮಾತ್ರ ಬಗೆಹರಿಸಿಕೊಳ್ಳಲಿವೆ. ಇದರಲ್ಲಿ ಬೇರೊಬ್ಬರ ಮಧ್ಯಸ್ಥಿಕೆ ಬೇಕಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟ ಮಾತುಗಳಲ್ಲಿ ಹೇಳಿದೆ. ಕಾಶ್ಮೀರ ವಿವಾದದಲ್ಲಿ ಮಧ್ಯಸ್ಥಿಕೆ ವಹಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಧ್ಯಸ್ಥಿಕೆ ವಹಿಸುವುದಾಗಿ ಹೇಳಿದ್ದರು. ಈ ಕುರಿತು ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳು ಸರ್ಕಾರದ ನಿಲುವನ್ನು ಪ್ರಶ್ನಿಸಿದ್ದ ಬೆನ್ನಲ್ಲೇ, ಭಾರತ ಸರ್ಕಾರ ಸ್ಪಷ್ಟನೆ ನೀಡಿದೆ. ಕಾಶ್ಮೀರದ ಕುರಿತು ಪಾಕಿಸ್ತಾನ ಮತ್ತು ಭಾರತ ಮಾತ್ರ ಚರ್ಚಿಸಬೇಕು. ದೀರ್ಘಕಾಲದ ಈ ನಿಲುವು ಸ್ಪಷ್ಟ ಮತ್ತು ದೃಢವಾಗಿದೆ. ಇದರಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಹೇಳುವ ಮೂಲಕ ಅಮೆರಿಕದ ಮಧ್ಯಸ್ಥಿಕೆ ಪ್ರಸ್ತಾವವನ್ನು ಸ್ಪಷ್ಟವಾಗಿ ನಿರಾಕರಿಸಿದೆ.ಪಾಕಿಸ್ತಾನವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತೀಯ ಭೂಪ್ರದೇಶವನ್ನು ಬಿಟ್ಟುಕೊಡುವುದು ಮಾತ್ರ ಚರ್ಚಿಸುವ ವಿಷಯವಾಗಿದೆ. ಅದನ್ನು ಉಭಯ ರಾಷ್ಟ್ರಗಳು ಮಾತ್ರ ಮಾಡಲಿವೆ. ಮೂರನೇ ರಾಷ್ಟ್ರ ಮತ್ತು ವ್ಯಕ್ತಿಯ ನೆರವು ಇದರಲ್ಲಿ ಬೇಕಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದರು.

## ರಶ್ಯಾದಿಂದ ಹೆಚ್ಚುವರಿ 'ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ' ಕೋರಿದ ಭಾರತ



**ಹೊಸದಿಲ್ಲಿ:** ಎಸ್-400 ವಾಯು ರಕ್ಷಣಾ ಕ್ಷಿಪಣಿ ವ್ಯವಸ್ಥೆಯ ಹೆಚ್ಚುವರಿ ಘಟಕ ಕೋರಿ ಭಾರತ ಔಪಚಾರಿಕವಾಗಿ ರಶ್ಯಾವನ್ನು ಸಂಪರ್ಕಿಸಿದೆ ಎಂದು ಉನ್ನತ ಸ್ಥಾನದಲ್ಲಿರುವ ರಕ್ಷಣಾ ಇಲಾಖೆಯ ಮೂಲಗಳು ತಿಳಿಸಿವೆ. 'ಆಪರೇಷನ್ ಸಿಂಧೂರ' ಸಂದರ್ಭ ಎಸ್-400 ವಾಯು ರಕ್ಷಣಾ ಕ್ಷಿಪಣಿ ವ್ಯವಸ್ಥೆಯ ಯಶಸ್ವಿ ಬಳಕೆಯ ಹಿನ್ನೆಲೆಯಲ್ಲಿ ಭಾರತ ಇದರ ಹೆಚ್ಚುವರಿ ಘಟಕವನ್ನು ಕೋರಿ ರಶ್ಯವನ್ನು ಸಂಪರ್ಕಿಸಿದೆ.

ಪಶ್ಚಿಮ ಗಡಿಯಾಚೆಯ ವೈಮಾನಿಕ ಬೆದರಿಕೆಗಳನ್ನು ಎದುರಿಸುವಲ್ಲಿ ಈ ವ್ಯವಸ್ಥೆ ಹೆಚ್ಚಿನ ನಿಖರತೆ ಹಾಗೂ ಪರಿಣಾಮಕಾರಿತ್ವವನ್ನು ಪ್ರದರ್ಶಿಸಿದ್ದವು ಎಂದು 'ಆಪರೇಷನ್ ಸಿಂಧೂರ' ಕುರಿತು ಅರಿವಿರುವ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇದರ ಕಾರ್ಯಕ್ಷಮತೆಯಿಂದ ಉತ್ತೇಜನಗೊಂಡ ಭಾರತ ಇನ್ನಷ್ಟು ಘಟಕಗಳನ್ನು ರಶ್ಯಾದಿಂದ ಪಡೆಯುವ ಮೂಲಕ ತನ್ನ ವಾಯು ರಕ್ಷಣಾ ಸಾಮರ್ಥ್ಯವನ್ನು ವಿಸ್ತರಿಸಲು ಮುಂದಾಗಿದೆ. ರಷ್ಯ ಸದ್ಯದಲ್ಲೇ ಈ ಕೋರಿಕೆಗೆ ಅನುಮೋದನೆ ನೀಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

## ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಭದ್ರತಾ ಸಭೆ

**ನವದೆಹಲಿ:** ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಮಂಗಳವಾರ ರಾಷ್ಟ್ರ ರಾಜಧಾನಿಯಲ್ಲಿ ಭಾರತದ ಉನ್ನತ ರಕ್ಷಣಾ ನಾಯಕತ್ವದೊಂದಿಗೆ ಉನ್ನತ ಮಟ್ಟದ ಭದ್ರತಾ ಸಭೆ ನಡೆಸಿದರು.ಸಭೆಯಲ್ಲಿ ರಕ್ಷಣಾ ಸಿಬ್ಬಂದಿಯ ಮುಖ್ಯಸ್ಥ ಜನರಲ್ ಅನಿಲ್ ಚೌಹಾನ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಹಾಗೂ ರಕ್ಷಣಾ ಕಾರ್ಯದರ್ಶಿ ಗಿರಿಧರ್ ಅರಮನೆ ಭಾಗವಹಿಸಿದ್ದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ರಾಷ್ಟ್ರವ್ಯಾಪಿ ಭಾಷಣದ 24 ಗಂಟೆಗಳ ಒಳಗೆ ನಡೆದ ಈ ಸಭೆ, ಭಾರತದ ಭಯೋತ್ಪಾದನೆ ವಿರೋಧಿ ಕಾರ್ಯತಂತ್ರದಲ್ಲಿ ನಿರ್ಣಾಯಕ ಕ್ಷಣವನ್ನು ಸೂಚಿಸಿತು. ಭಾರತವು ಈಗ ಕೇವಲ ಪ್ರತಿಕ್ರಿಯೆ ನೀಡುತ್ತಿಲ್ಲ, ಬದಲಿಗೆ ನಿರಂತರ ಪ್ರತೀಕಾರದ ಸಿದ್ಧಾಂತವನ್ನು ರೂಪಿಸುತ್ತಿದೆ.

ಸಭೆಯ ಚರ್ಚೆಗಳ ಬಗ್ಗೆ ಮಾಹಿತಿಯುಳ್ಳ ಮೂಲಗಳ ಪ್ರಕಾರ, 'ಆಪರೇಷನ್ ಸಿಂದೂರ' ಕುರಿತಾದ ಕಾರ್ಯಾಚರಣೆಯ ನವೀಕರಣಗಳು ಸಭೆಯ ಕೇಂದ್ರ ಬಿಂದುವಾಗಿದ್ದವು. ಮೇ 7 ರಂದು ಆರಂಭವಾದ ಭಾರತದ ಇತ್ತೀಚಿನ ತ್ರಿ-ಸೇವಾ ಕಾರ್ಯಾಚರಣೆಯು, ಏಪ್ರಿಲ್ 22 ರಂದು ಪಾಹಲಗಾಮ್‌ನಲ್ಲಿ 26 ನಾಗರಿಕರನ್ನು ಕೊಂದ ಭೀಕರ ದಾಳಿಯ ನಂತರ, ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಒಳಗಿನ ಹಲವಾರು ಭಯೋತ್ಪಾದಕ ಮೂಲಸೌಕರ್ಯ ಕೇಂದ್ರಗಳನ್ನು ಈಗಾಗಲೇ ಧ್ವಂಸಗೊಳಿಸಿದೆ. ರಾಜನಾಥ್ ಸಿಂಗ್ ಅವರ ತುರ್ತು ಸಭೆಯು ಭವಿಷ್ಯದ ಯೋಜನೆಗಳ ಕುರಿತಾಗಿತ್ತು: ಭಾರತದ ಪ್ರತಿರೋಧ ಸಾಮರ್ಥ್ಯವು ತೀಕ್ಷ್ಣವಾಗಿರುವುದನ್ನು, ಗುಪ್ತಚರ ವ್ಯವಸ್ಥೆಯು ಬಿಗಿಯಾಗಿರುವುದನ್ನು ಮತ್ತು ಪ್ರತಿಕ್ರಿಯೆಯು ತ್ವರಿತವಾಗಿರುವುದನ್ನು ಖಚಿತಪಡಿಸಿಕೊಳ್ಳುವುದು. ಭಾರತವು ಪ್ರತಿಕ್ರಿಯಾತ್ಮಕ ಧೋರಣೆಯಿಂದ ಪೂರ್ವಕಾಲಿಕ ಕಾರ್ಯತಂತ್ರಕ್ಕೆ ಬದಲಾಗಿದೆ. ಈ ಹೊಸ ಮಾದರಿಯಲ್ಲಿ, ಸೇನೆಯು ಕೇವಲ ಗಡಿಗಳನ್ನು ರಕ್ಷಿಸುತ್ತಿಲ್ಲ; ಆಧಿಪತ್ಯ ಮತ್ತು ಪ್ರತಿರೋಧದ ಮೂಲಕ ಗಡಿಗಳನ್ನು ಕಾರ್ಯತಂತ್ರವಾಗಿ ಮರುರೂಪಿಸುತ್ತಿದೆ.'ಆಪರೇಷನ್ ಸಿಂದೂರ' ವಾಯು, ಭೂಮಿ ಮತ್ತು ಸಮುದ್ರದಾದ್ಯಂತ ನಿಖರವಾದ ದಾಳಿಗಳಿಂದ ಕೂಡಿದ್ದು, ಭಾರತವು 11 ಪಾಕಿಸ್ತಾನದ ಕಾರ್ಯತಂತ್ರದ ವಾಯುನೆಲೆಗಳನ್ನು ಗುರಿಯಾಗಿಸಿ, 100ಕ್ಕೂ ಹೆಚ್ಚು ಭಯೋತ್ಪಾದಕರನ್ನು ನಿಷ್ಕ್ರಿಯಗೊಳಿಸಿತು.ಆದರೆ ಈ ಕಾರ್ಯಾಚರಣೆಯನ್ನು ವಿಶಿಷ್ಟಗೊಳಿಸಿದ್ದು ಗರಿಷ್ಠ ಮಿಲಿಟರಿಧ್ವಂಸದೊಂದಿಗೆ ಕನಿಷ್ಠ ಜನಸಾಮಾನ್ಯರ ಹಾನಿ ಎನ್ನುವಅದರ ಸಂಯಮಿತ ವಿಧಾನವಾಗಿದೆ.



# ಪಂಜಾಬ್‌ನ ಆದಂಪುರ್ ಏರ್ ಬೇಸ್‌ಗೆ ಪ್ರಧಾನಿ ಭೇಟಿ



**ನವದೆಹಲಿ:** ಭಾರತ-ಪಾಕಿಸ್ತಾನ ನಡುವಿನ ತೀವ್ರ ಸಂಘರ್ಷ ಕದನ ವಿರಾಮದ ಮೂಲಕ ಅಂತ್ಯವಾದ ಬೆನ್ನಲ್ಲೇ ಪಂಜಾಬ್ ನ ಆದಂಪುರ್ ಏರ್ ಬೇಸ್‌ಗೆ (ವೈಮಾನಿಕ ನೆಲೆ) ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ ಯೋಧರೊಂದಿಗೆ ಮಾತುಕತೆ ನಡೆಸಿದರು.

ಈ ಕುರಿತು ಎಕ್ಸ್ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಎಫ್ ಎಸ್ ಆದಂಪುರಕ್ಕೆ ಭೇಟಿ ನೀಡಿ, ವಾಯುಪಡೆಯ ವೀರ ಯೋಧರನ್ನು ಭೇಟಿ ಮಾಡಿದೆ. ಧೈರ್ಯ, ದೃಢನಿಶ್ಚಯ ಮತ್ತು ನಿರ್ಭಯತೆಯ ಯೋಧರನ್ನು ಭೇಟಿ ಮಾಡಿದ್ದು, ಒಂದು ವಿಶೇಷ ಅನುಭವ ಎಂದು ತಿಳಿಸಿದ್ದಾರೆ.

ಮೇ 7ರಂದು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ(ಕಆಪಿ) ಉಗ್ರರ ಅಡಗುತಾಣಗಳ ಮೇಲೆ ಭಾರತೀಯ ಸೇನೆ ಆಪರೇಷನ್ ಸಿಂಧೂರ ಹೆಸರಿನಲ್ಲಿ ಕಾರ್ಯಾಚರಣೆ ನಡೆಸಿದ ಬೆನ್ನಲ್ಲೇ ಉಂಟಾದ ಎರಡು ದೇಶಗಳ ನಡುವಿನ ಸಂಘರ್ಷ ಮೇ 10ರಂದು ಕದನ ವಿರಾಮದ ಮೂಲಕ ಅಂತ್ಯಗೊಂಡಿತು. ಇದಾಗಿ ಎರಡು ದಿನಗಳಲ್ಲೇ ಪ್ರಧಾನಿ ಏರ್ ಬೇಸ್ ಗೆ ಭೇಟಿ ನೀಡಿದ್ದಾರೆ.

ಭಾರತ ತನ್ನ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಿದೆ. ಮುಂದಿನ ಕ್ರಮಗಳು ಪಾಕಿಸ್ತಾನದ ನಡವಳಿಕೆಯ ಆಧಾರದ ಮೇಲೆ ನಿರ್ಧಾರವಾಗುತ್ತವೆ ಎಂದು ಭಾರತ ಎಚ್ಚರಿಕೆ ನೀಡಿದೆ. ಉಗ್ರರ ವಿರುದ್ಧ ಭಾರತ ನಡೆಸಿದ ವೈಮಾನಿಕ ದಾಳಿಯ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಪಂಜಾಬ್ ನಲ್ಲಿರುವ ಆದಂಪುರ್ ಏರ್ ಬೇಸ್ ಸಕ್ರಿಯವಾಗಿ ಕಾರ್ಯಾಚರಣೆ ನಡೆಸಿತು.

## ಪಾಕಿಸ್ತಾನಿ ರಾಜತಾಂತ್ರಿಕ ಅಧಿಕಾರಿಗೆ 24 ಗಂಟೆಗಳ ಗಡುವು

**ನವದೆಹಲಿ:** ಪಾಕಿಸ್ತಾನ ರಾಯಭಾರಿ ಕಚೇರಿಯಲ್ಲಿ ನಿಯೋಜನೆಗೊಂಡಿರುವ ಪಾಕಿಸ್ತಾನಿ ಅಧಿಕಾರಿಯೊಬ್ಬರನ್ನು 'ಪರ್ಸನಾ ನಾನ್ ಗ್ರಾಟಾ' ಎಂದು ಘೋಷಿಸಿರುವ ಭಾರತ ಸರ್ಕಾರ, 24 ಗಂಟೆಗಳ ಒಳಗೆ ದೇಶ ಬಿಟ್ಟು ಹೋಗುವಂತೆ ಆದೇಶಿಸಿದೆ. ದೆಹಲಿಯಲ್ಲಿ ಕುಳಿತು ಈ ವ್ಯಕ್ತಿ ಭಾರತದ ವಿರುದ್ಧ ಸಂಚು ರೂಪಿಸುತ್ತಿದ್ದ ವಿಚಾರ ಬೆಳಕಿಗೆ ಬಂದಿದೆ. ಇದರ ಬೆನ್ನಲ್ಲೇ ಭಾರತ ಸರ್ಕಾರ ಮಹತ್ವದ ನಿರ್ಧಾರ ತೆಗೆದುಕೊಂಡು ಆತನನ್ನು ದೇಶ ತೊರೆಯುವಂತೆ ಆದೇಶ ಹೊರಡಿಸಿದೆ. ವಿದೇಶಾಂಗ ಸಚಿವಾಲಯದ ಪ್ರಕಾರ, ಈ ಅಧಿಕಾರಿ ಭಾರತದಲ್ಲಿನ ತನ್ನ ರಾಜತಾಂತ್ರಿಕ ಮಾನದಂಡಗಳಿಗೆ ವಿರುದ್ಧವಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರು. ಆ ಅಧಿಕಾರಿ ದೆಹಲಿಯಲ್ಲಿ ಕುಳಿತುಕೊಂಡು ಭಾರತ ವಿರೋಧಿ ಚಟುವಟಿಕೆಗಳು ಮತ್ತು ಪಿತೂರಿಗಳಲ್ಲಿ ಭಾಗಿಯಾಗಿದ್ದ. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಭಾರತ ಸರ್ಕಾರ, ರಾಜತಾಂತ್ರಿಕ ಮಾನದಂಡಗಳ ಉಲ್ಲಂಘನೆಯನ್ನು ಸಹಿಸುವುದಿಲ್ಲ ಮತ್ತು ಅಂತಹ ಸಂದರ್ಭಗಳಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದೆ. ಎರಡೂ ದೇಶಗಳ ನಡುವಿನ ಸಂಬಂಧಗಳು ಈಗಾಗಲೇ ಉದ್ವಿಗ್ನಗೊಂಡಿರುವ ಸಂದರ್ಭದಲ್ಲಿ ಈ ಬೆಳವಣಿಗೆಯನ್ನು ಅತ್ಯಂತ ಮುಖ್ಯವೆಂದು ಪರಿಗಣಿಸಲಾಗುತ್ತಿದೆ. ಇದಕ್ಕೂ ಮುಂಚೆಯೇ, ಭಾರತವು ಪಾಕಿಸ್ತಾನದ ಹೆಚ್ಚಿನ ರಾಜತಾಂತ್ರಿಕರನ್ನು ದೇಶ ತೊರೆಯುವಂತೆ ಆದೇಶಿಸಿತ್ತು.

## ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ ಸಚಿವ

**ಭೋಪಾಲ್:** ಮಧ್ಯಪ್ರದೇಶದ ಸಚಿವ ಕುನ್ವರ್ ವಿಜಯ್ ಶಾ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ನೀಡಿರುವ ಹೇಳಿಕೆ ವಿವಾದಕ್ಕೆ ಕಾರಣವಾಗಿದೆ. ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಭಯೋತ್ಪಾದಕರ ಸಹೋದರಿ ಎಂದು ಮಧ್ಯಪ್ರದೇಶದ ಸಚಿವ, ಬಿಜೆಪಿ ನಾಯಕ ವಿಜಯ್ ಶಾ ಕರೆದಿದ್ದಾರೆ ಎಂದು ಕಾಂಗ್ರೆಸ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಇಂದೋರ್ ಜಿಲ್ಲೆಯ ಮಾಹುವಿನ ರಾಯ್ಕುಂಡ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾ ಮಾಡಿರುವ ಭಾಷಣದ ತುಣುಕನ್ನು ಕಾಂಗ್ರೆಸ್ ಹಂಚಿಕೊಂಡಿದೆ. ಅದರಲ್ಲಿ ಅವರು ಹಿಂದಿಯಲ್ಲಿ, ಅವರು ನಮ್ಮ ಸಹೋದರಿಯರು ಮತ್ತು ಹೆಣ್ಣುಮಕ್ಕಳ ಸಿಂಧೂರವನ್ನು ಅಳಿಸಿದ್ದರು. ಭಯೋತ್ಪಾದಕರು ನಮ್ಮ ಸಹೋದರಿಯರು ಮತ್ತು ಹೆಣ್ಣುಮಕ್ಕಳ ಸಿಂಧೂರವನ್ನು ಒರೆಸುವ ಮೂಲಕ ಅಗೌರವ ತೋರಿದ್ದರು. ಅವರಿಗೆ ಸೂಕ್ತ ಉತ್ತರ ನೀಡಲು ಮೋದಿಜಿ ಅವರದ್ದೇ ಜಾತಿಯವರಾದ ಅವರ ಸಹೋದರಿಯನ್ನೇ ಕಳುಹಿಸಿ ಅವರ ಬಟ್ಟೆಬಿಚ್ಚಿ ಹೊಡೆದರು ಎಂದು ಹೇಳಿರುವುದು ವೀಡಿಯೊದಲ್ಲಿ ಸೆರೆಯಾಗಿದೆ. ಸೇನಾಧಿಕಾರಿ ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಹೆಸರಿಸದೆ ಸಚಿವರು ಅವಹೇಳನಕಾರಿ ರೀತಿಯಲ್ಲಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಲಾಗಿದೆ.

## ಪೆನ್ಸಿಲ್ವೇನಿಯಾದಲ್ಲಿ ಭೀಕರ ರಸ್ತೆ ಅಪಘಾತ: ಭಾರತೀಯ ಮೂಲದ ಇಬ್ಬರು ವಿದ್ಯಾರ್ಥಿಗಳ ಸಾವು

**ನ್ಯೂಯಾರ್ಕ್:** ಪೆನ್ಸಿಲ್ವೇನಿಯಾದಲ್ಲಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಕ್ಲೀವ್‌ಲ್ಯಾಂಡ್ ಸ್ಟೇಟ್ ಯೂನಿವರ್ಸಿಟಿಯ ಇಬ್ಬರು ಭಾರತೀಯ ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆಂದು ಅಧಿಕಾರಿಗಳು ತಿಳಿಸಿದ್ದಾರೆ.ಮೃತ ವಿದ್ಯಾರ್ಥಿಗಳನ್ನು ಮಾನವ್ ಪಟೇಲ್ (20) ಮತ್ತು ಸೌರವ್ ಪ್ರಭಾಕರ್ (23) ಎಂದು ಗುರುತಿಸಲಾಗಿದೆ. ವಾಹನದ ಮುಂಭಾಗದ ಸೀಟಿನಲ್ಲಿದ್ದ ಮತ್ತೊಬ್ಬ ಪ್ರಯಾಣಿಕ ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಕಾರು ಮರಕ್ಕೆ ಡಿಕ್ಕಿ ಹೊಡೆದು, ಬಳಿಕ ಸೇತುವೆಗೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಇಬ್ಬರು ಸಾವನ್ನಪ್ಪಿದ್ದಾರೆಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಘಟನೆ ಸಂಬಂಧ ನ್ಯೂಯಾರ್ಕ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದು, ಮೃತರ ಕುಟುಂಬಗಳೊಂದಿಗೆ ಸಂಪರ್ಕದಲ್ಲಿದ್ದು, ಅವರಿಗೆ ಸಾಧ್ಯವಿರುವ ಎಲ್ಲಾ ನೆರವು ನೀಡಲಾಗುತ್ತಿದೆ ಎಂದು ತಿಳಿಸಿದೆ. ಈ ಕಷ್ಟದ ಸಮಯದಲ್ಲಿ ಅವರ ಕುಟುಂಬಗಳೊಂದಿಗೆ ಸಂತಾಪ ಸೂಚಿಸುತ್ತೇವೆಂದು ರಾಯಭಾರ ಕಚೇರಿ ಹೇಳಿದೆ.



## ಸತತ ಎರಡನೇ ಬಾರಿ ಲೇಬರ್ ಪಕ್ಷ ಅಧಿಕಾರಕ್ಕೆ: ಪ್ರಧಾನಿ ಆಂಥೋನಿ ಅಲ್ಬನೀಸ್ ಸೇರಿ ಸಚಿವರ ಪ್ರಮಾಣ ವಚನ

**ಕ್ಯಾನ್‌ಬೆರಾ:** ಕಳೆದ ಮೇ 3 ರಂದು ಮಧ್ಯ-ಎಡ ಲೇಬರ್ ಪಕ್ಷವು ಭರ್ಜರಿ ಗೆಲುವಿನೊಂದಿಗೆ ಮರು ಆಯ್ಕೆಯಾದ ನಂತರ ಆಸ್ಟ್ರೇಲಿಯಾದ ಸಚಿವ ಪ್ರಮಾಣ ವಚನ ಸ್ವೀಕರಿಸಿತು. ಮತ ಎಣಿಕೆ ಇನ್ನೂ ಮುಂದುವರೆದಿದ್ದು, 150 ಸ್ಥಾನಗಳ ಸದನದಲ್ಲಿ ಲೇಬರ್ ಪಕ್ಷವು 92 ರಿಂದ 95 ಸ್ಥಾನಗಳನ್ನು ಪಡೆಯುವ ನಿರೀಕ್ಷೆಯಿದೆ. ಹಿಂದಿನ ಸಂಸತ್ತಿನಲ್ಲಿ ಪಕ್ಷವು 78 ಸ್ಥಾನಗಳನ್ನು ಹೊಂದಿತ್ತು. ವಿರೋಧ ಪಕ್ಷಗಳ ಮೈತ್ರಿಕೂಟವು 41 ಸ್ಥಾನಗಳನ್ನು ಗೆಲ್ಲುವ ಹಾದಿಯಲ್ಲಿದೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದ ನಂತರ ಸಂಪುಟವು ತನ್ನ ಮೊದಲ ಸಭೆಯನ್ನು ನಡೆಸಿತು. ಪ್ರಧಾನಿ ಆಂಥೋನಿ ಅಲ್ಬನೀಸ್ ನಾಳೆ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಅವರನ್ನು ಭೇಟಿ ಮಾಡಲು ಜಕಾರ್ತಾಗೆ ಹೋಗುವ ನಿರೀಕ್ಷೆಯಿದೆ. ನಂತರ ಅವರು ಭಾನುವಾರ ಪೋಪ್ ಲಿಯೋ ಘಿಋಗಿ ರ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲು ಇಂಡೋನೇಷ್ಯಾದಿಂದ ರೋಮ್‌ಗೆ ತೆರಳಲಿದ್ದಾರೆ. ರೋಮ್‌ನಲ್ಲಿ ಅವರು ಮೊದಲ ಬಾರಿಗೆ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಸೇರಿದಂತೆ ವಿಶ್ವ ನಾಯಕರನ್ನು ಭೇಟಿ ಮಾಡಲಿದ್ದಾರೆ. ವಿರೋಧ ಪಕ್ಷ ಲಿಬರಲ್ ಪಕ್ಷವು ಮಾಜಿ ಸಚಿವೆ ಸುಸಾನ್ ಲೇ ಅವರನ್ನು ತಮ್ಮ ಹೊಸ ನಾಯಕಿಯಾಗಿ ಆಯ್ಕೆ ಮಾಡಿದೆ. 1944 ರಲ್ಲಿ ಸ್ಥಾಪನೆಯಾದ ಪಕ್ಷವನ್ನು ಮುನ್ನಡೆಸಿದ ಮೊದಲ ಮಹಿಳೆ ಇವರು. ಅವರ ಪೂರ್ವವರ್ತಿ ಪೀಟರ್ ಡಟ್ಟನ್ ಚುನಾವಣೆಯಲ್ಲಿ ತಮ್ಮ ಸಂಸತ್ತಿನ ಸ್ಥಾನವನ್ನು ಕಳೆದುಕೊಂಡ ಏಕೈಕ ಆಸ್ಟ್ರೇಲಿಯಾದ ವಿರೋಧ ಪಕ್ಷದ ನಾಯಕರಾಗಿದ್ದಾರೆ.



## INSವಿಕ್ರಾಂತ್ ಎಲ್ಲಿದೆ ಹೇಳಿ? ಪಿಎಂ ಕಚೇರಿ ಅಧಿಕಾರಿಯಂತೆ ಕರೆ ಮಾಡಿದ್ದವ ಅರೆಸ್ಟ್

**ತಿರುವನಂತಪುರಂ:** ಪ್ರಧಾನಮಂತ್ರಿ ಕಚೇರಿಯ ಅಧಿಕಾರಿ ಎಂದು ಹೇಳಿಕೊಂಡು ನೌಕಾಪಡೆಯ INS ವಿಕ್ರಾಂತ್ ( ಹಡಗಿನ ಬಗ್ಗೆ ಮಾಹಿತಿ ಕೇಳಿದ್ದ ಕೆರಳದ ವ್ಯಕ್ತಿಯನ್ನು ಪೊಲೀಸರು ಕೊಚ್ಚಿಯಲ್ಲಿ ಬಂಧಿಸಿದ್ದಾರೆ. ಬಂಧಿತನನ್ನು ಕೇರಳದ ಕೋಝಿಕೋಡ್ ಎಲ್ಲೂರ್ ನಿವಾಸಿ ಮುಜೀಬ್ ರೆಹಮಾಮ್ ಎಂದು ಗುರುತಿಸಲಾಗಿದೆ. ಆತ ತಾನು ಪ್ರಧಾನ ಮಂತ್ರಿ ಕಚೇರಿಯ ಅಧಿಕಾರಿ ಎಂದು ಹೇಳಿಕೊಂಡು ಕೊಚ್ಚಿ ನೌಕಾ ಪ್ರಧಾನ ಕಚೇರಿಗೆ ಕರೆ ಮಾಡಿ, ಖಓಖ ವಿಕ್ರಾಂತ್ ಬಗ್ಗೆ ಮಾಹಿತಿ ಕೇಳಿದ್ದ. ಅಲ್ಲದೇ ವಿಕ್ರಾಂತ್ ಇರುವ ನಿಖರವಾದ ಸ್ಥಳವನ್ನು ತಿಳಿಸುವಂತೆ ಹೇಳಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆತನ ಮಾತುಗಳಿಂದ ಅನುಮಾನಗೊಂಡ ನೌಕಪಡೆಯ ಸಿಬ್ಬಂದಿ ಪೊಲೀಸರಿಗೆ ಮಾಹಿತಿ ನೀಡಿದ್ದರು. ಮಾಹಿತಿಯ ಬೆನ್ನಲ್ಲೇ ಪೊಲೀಸರು ಆತನನ್ನು ಬಂಧಿಸಿದ್ದಾರೆ. ಬಂಧಿತನನ್ನು ನೌಕಾಪಡೆ ಅಧಿಕಾರಿಗಳು ಹಾಗೂ ಐಬಿ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ಮುಜೀಬ್ ರೆಹಮಾಮ್ ಬಂಧನವಾಗುತ್ತಿದ್ದಂತೆ ಆತ ಖಿನ್ನತೆಯಿಂದ ಬಳತ್ತಿದ್ದಾನೆ ಎಂದು ಕುಟುಂಬಸ್ಥರು ಮಾಹಿತಿ ನೀಡಿದ್ದಾರೆ.



## ಪಹಲ್ಗಾಮ್ ದಾಳಿಯ 3 ಉಗ್ರರ ಫೋಟೋ ರಿಲೀಸ್: ಸುಳಿವು ಕೊಟ್ಟವರಿಗೆ 20 ಲಕ್ಷ ಬಹುಮಾನ




**ಶ್ರೀನಗರ:** ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಉಗ್ರರ ಪೋಸ್ಟರ್‌ಗಳನ್ನು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಬಿಡುಗಡೆಗೊಳಿಸಿದ್ದು, ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸಿದ್ದಾರೆ.

ಏ.22 ರಂದು ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಹಿಂದೂಗಳ ನರಮೇಧದಲ್ಲಿ 26 ಜನರು ಸಾವನ್ನಪ್ಪಿದ್ದರು. ಈ ದಾಳಿಯಲ್ಲಿ ಭಾಗಿಯಾಗಿದ್ದ ಭಯೋತ್ಪಾದಕರನ್ನು ಪತ್ತೆ ಹಚ್ಚಲು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಮೂವರು ಶಂಕಿತ ಪಾಕ್ ಉಗ್ರರ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿದ್ದಾರೆ. ಆ ಪೋಸ್ಟರ್ ಗಳನ್ನು ಅಂಟಿಸಿ ಸುಳಿವು ಕೊಟ್ಟವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸಿದ್ದಾರೆ. ಜೊತೆಗೆಸುಳಿವುಕೊಟ್ಟವರ ಮಾಹಿತಿಯನ್ನು ಗೌಪ್ಯವಾಗಿಡಲಾಗುವುದು ಎಂದು ಉಲ್ಲೇಖಿಸಿದ್ದಾರೆ. ಸದ್ಯ ಜಮ್ಮು ಮತ್ತು ಕಾಶ್ಮೀರದಾದ್ಯಂತ 'ಭಯೋತ್ಪಾದನೆ ಮುಕ್ತ ಕಾಶ್ಮೀರ' ಎಂಬ ಸಂದೇಶಗಳನ್ನು ಒಳಗೊಂಡಿರುವ ಪೋಸ್ಟರ್‌ಗಳು ಕಾಣಿಸಿಕೊಂಡಿದ್ದು, ಅದರಲ್ಲಿ ಲಷ್ಕರ್-ಇ-ತೈಬಾದ ಮೂವರು ಭಯೋತ್ಪಾದಕರಾದ ಅನಂತ್‌ನಾಗ್ ನಿವಾಸಿ ಆದಿಲ್ ಹುಸೇನ್ ಥೋಕರ್ ಮತ್ತು ಪಾಕ್ ಪ್ರಜೆಗಳಾದ ಅಲಿ ಭಾಯ್ ಅಕಾ ತಲ್ಹಾ ಭಾಯ್ ಮತ್ತು ಹಶಿಮ್ ಮೂಸಾ ಅಕಾ ಸುಲೇಮಾನ್ ಫೋಟೋಗಳಿವೆ.ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ಮೇ 7ರಂದು 'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಪಾಕ್‌ನ 9 ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ನಡೆಸಿತು. ಅದಾದ ಬಳಿಕ ಪಾಕಿಸ್ತಾನ ಹಲವು ಬಾರಿ ಅಪ್ರಚೋದಿತ ದಾಳಿ ನಡೆಸಿದ್ದು, ಮೇ 10ರಂದು ಭಾರತ-ಪಾಕಿಸ್ತಾನ ಕದನ ವಿರಾಮ ಘೋಷಿಸಿವೆ.

## ಧಾರಾಕಾರ ಮಳೆಗೆ ತತ್ತರಿಸಿದ ಕೀನ್ಯಾ: ರಸ್ತೆಗಳು ಸಂಪೂರ್ಣ ಜಲಾವೃತ

**ನೈರೋಬಿಯ:** ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಕೀನ್ಯಾ ಸಂಪೂರ್ಣವಾಗಿ ತತ್ತರಿಸಿ ಹೋಗಿದ್ದು, ಪ್ರವಾಹಪರಿಸ್ಥಿತಿ ಉಂಟಾಗಿದೆ. ಭಾನುವಾರಸಂಜೆಸುರಿದಭಾರೀಮಳೆಯಿಂದಾಗಿನೈರೋಬಿಯ ಬೀದಿಗಳು ಸಂಪೂರ್ಣ ಜಲಾವೃತಗೊಂಡಿದ್ದು, ವಾಹನ ಸವಾರರು, ಪಾದಚಾರಿಗಳು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಮಳೆಯೊಂದಿಗೆ ಭೀಕರವಾಗಿ ಗಾಳಿಯೂ ಬೀಸುತ್ತಿದ್ದು, ಜನರು ಸಂಕಷ್ಟ ಸಿಲುಕಿಕೊಂಡಿದ್ದಾರೆ. ರಸ್ತೆಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದ್ದು, ವಾಹನಗಳು ನೀರಿನಲ್ಲಿ ನಿಂತು ಹೋಗಿವೆ. ಮೇ 5ರಂದು ಕೀನ್ಯಾ ಹವಾಮಾನ ಇಲಾಖೆ ಭಾರೀ ಮಳೆ ಹಾಗೂ ತಾಪಮಾನದ ಮುನ್ಸೂಚನೆಯನ್ನು ನೀಡಿದ್ದು, ಜನರಿಗೆ ಮುನ್ನೆಚ್ಚರಿಕೆ ವಹಿಸುವಂತೆ ತಿಳಿಸಿತ್ತು. ಮೇ 6 ರಿಂದ 12ರವರೆಗೆ ಸೆಂಟ್ರಲ್ ಹೈಲ್ಯಾಂಡ್ಸ್, ಲೇಕ್ ವಿಕ್ಟೋರಿಯಾ ಬೇಸಿನ್, ರಿಫ್ಟ್ ಕಣಿವೆಯ ಕೆಲವು ಭಾಗಗಳು, ಕರಾವಳಿ, ಪಶ್ಚಿಮ ಮತ್ತು ವಾಯುವ್ಯ ಕೀನ್ಯಾ ಸೇರಿದಂತೆ ಹಲವು ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ವರದಿ ಮಾಡಿತ್ತು. ಸದ್ಯ ಕೀನ್ಯಾ ಅನಿರೀಕ್ಷಿತ ಹವಾಮಾನವನ್ನು ಎದುರಿಸುತ್ತಿದ್ದು, ರೈತರು, ವಾಹನ ಚಾಲಕರು ಮತ್ತು ಹಿಂದುಳಿದ ಪ್ರದೇಶಗಳಲ್ಲಿನ ನಿವಾಸಿಗಳು ಸ್ಥಳೀಯ ಅಧಿಕಾರಿಗಳು ನೀಡುವ ಸುರಕ್ಷತಾ ಮಾರ್ಗಸೂಚಿಗಳನ್ನು ಪಾಲಿಸಬೇಕು ಎಂದು ಹವಾಮಾನ ಇಲಾಖೆ ಸೂಚಿಸಿದೆ.



## ಬುರ್ಕಿನಾ ಫಾಸೊದಲ್ಲಿ ಜಿಹಾದಿ ದಾಳಿ, 100ಕ್ಕೂ ಅಧಿಕ ಮಂದಿ ಸಾವು

**ಬುರ್ಕಿನಾ ಫಾಸೊ:** ಉತ್ತರ ಬುರ್ಕಿನಾ ಫಾಸೊ ದಲ್ಲಿರುವ ಜಿಹಾದಿ ಗುಂಪು ಮಿಲಿಟರಿ ನೆಲೆಗಳು ಮತ್ತು ಜಿಬೊ ನಗರ ಸೇರಿದಂತೆ ಹಲವಾರು ಸ್ಥಳಗಳ ಮೇಲೆ ದಾಳಿ ಮಾಡಿದೆ. ಈ ದಾಳಿಯಲ್ಲಿ 100 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದರು. ಸಾವನ್ನಪ್ಪಿದವರಲ್ಲಿ ಹೆಚ್ಚಿನವರು ಸೈನಿಕರಾಗಿದ್ದರು. ಬುರ್ಕಿನಾ ಫಾಸೊದ ಅತ್ಯಂತ ಹಾನಿಗೊಳಗಾದ ಪ್ರದೇಶದಲ್ಲಿರುವ ವ್ಯಕ್ತಿಯೊಬ್ಬರು ಮಿಲಿಟರಿ ನೆಲೆ ಮತ್ತು ಜಿಬೊ ನಗರ ಸೇರಿದಂತೆ ಹಲವಾರು ಸ್ಥಳಗಳ ಮೇಲೆ ಭಾನುವಾರ ಮುಂಜಾನೆ ದಾಳಿ ನಡೆದಿದೆ ಎಂದು ಹೇಳಿದರು. ಈ ದಾಳಿಯಲ್ಲಿ ತನ್ನ ತಂದೆ ಕೂಡ ಸಾವನ್ನಪ್ಪಿದ್ದಾರೆ ಎಂದು ವಿದ್ಯಾರ್ಥಿನಿಯೊಬ್ಬಳು ಹೇಳಿದ್ದಾಳೆ. ಅಲ್-ಖೈದಾ ಸಂಬಂಧಿತ ಜಿಹಾದಿ ಸಂಘಟನೆ ಜಮಾತ್ ನಸ್ರ್ ಅಲ್-ಇಸ್ಲಾಂ ವಾಲ್-ಮುಸ್ಲಿಮೀನ್ ಅಥವಾ ಜೆಎನ್‌ಐಎಂ ಈ ದಾಳಿಯ ಹೊಣೆಯನ್ನು ಹೊತ್ತುಕೊಂಡಿದೆ . ಈ ಸಂಸ್ಥೆ ಸಹೇಲ್ ಪ್ರದೇಶದಲ್ಲಿ ಸಕ್ರಿಯವಾಗಿದೆ. ದೇಶದ ಜನಸಂಖ್ಯೆ 23 ಮಿಲಿಯನ್. ಈ ದೇಶವು ಆಫ್ರಿಕಾದ ಸಹೇಲ್ ಪ್ರದೇಶದಲ್ಲಿದೆ, ಇಲ್ಲಿ ಭಯೋತ್ಪಾದನೆ ಮತ್ತು ಹಿಂಸಾಚಾರವು ಹೆಚ್ಚು ಪರಿಣಾಮ ಬೀರುತ್ತದೆ. ಹಿಂಸಾಚಾರವು 2022 ರಲ್ಲಿ ಎರಡು ದಂಗೆಗಳಿಗೆ ಕಾರಣವಾಯಿತು, ಬುರ್ಕಿನಾ ಫಾಸೊದ ಸರಿಸುಮಾರು ಅರ್ಧದಷ್ಟು ಭಾಗವು ಸರ್ಕಾರದ ನಿಯಂತ್ರಣದಿಂದ ಹೊರಗಿತ್ತು. ಭದ್ರತಾ ಪಡೆಗಳ ಮೇಲೂ ಕಾನೂನು ಬಾಹಿರ ಹತ್ಯೆಗಳ ಆರೋಪ ಹೊರಿಸಲಾಗಿದೆ. ಭಾನುವಾರ ಬೆಳಗ್ಗೆ 6 ಗಂಟೆಗೆ ಅನೇಕ ಸ್ಥಳಗಳಲ್ಲಿ ದಾಳಿಗಳು ಏಕಕಾಲದಲ್ಲಿ ಪ್ರಾರಂಭವಾದವು ಎಂದು ವಿಶ್ಲೇಷಕ ಚಾರ್ಲಿ ವರ್ಬ್ ಹೇಳಿದ್ದಾರೆ. ಬುರ್ಕಿನಾ ಫಾಸೊದ ವಾಯುಪಡೆಯನ್ನು ಚದುರಿಸುವ ಪ್ರಯತ್ನದಲ್ಲಿ ಜೆಎನ್‌ಐಎಂ ಹೋರಾಟಗಾರರು ಎಂಟು ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದರು. ಜಿಬೊದಲ್ಲಿ ಅತಿದೊಡ್ಡ ದಾಳಿ ನಡೆದಿದ್ದು, ಅಲ್ಲಿ ಜೆಎನ್‌ಐಎಂ ಹೋರಾಟಗಾರರು ಮಿಲಿಟರಿ ಶಿಬಿರಗಳು ಮತ್ತು ಭಯೋತ್ಪಾದನಾ ನಿಗ್ರಹ ಘಟಕದ ಶಿಬಿರದ ಮೇಲೆ ದಾಳಿ ಮಾಡಿದರು. ಇದಕ್ಕೂ ಮುನ್ನ, ಹೋರಾಟಗಾರರು ನಗರದ ಎಲ್ಲಾ ಪ್ರವೇಶ ಬಿಂದುಗಳನ್ನು ವಶಪಡಿಸಿಕೊಂಡರು. ಬುರ್ಕಿನಾ ಫಾಸೊ ಸೈನ್ಯದ ವಾಯು ಬೆಂಬಲವಿಲ್ಲದೆ ದಾಳಿಕೋರರು ಆ ಪ್ರದೇಶವನ್ನು ಹಲವಾರು ಗಂಟೆಗಳ ಕಾಲ ವಶಪಡಿಸಿಕೊಂಡರು ಎಂದು ವಿಶ್ಲೇಷಕ ವರ್ಬ್ ಹೇಳಿದ್ದಾರೆ. ಆದಾಗ್ಯೂ, ಜಿಬೊದಲ್ಲಿ ಅದೇ ಸ್ಥಳದಲ್ಲಿ ಹಿಂದಿನ ದಾಳಿಗಳಲ್ಲಿ, ಭದ್ರತಾ ಪಡೆಗಳು ಉಗ್ರಗಾಮಿಗಳನ್ನು ಹಿಮ್ಮೆಟ್ಟಿಸಿದ್ದವು. ವಾಸೆಮ್ ನಾಸ್ರ್ ಮಾತನಾಡಿ, ಬೆಳಗ್ಗೆ ನಡೆದ ದಾಳಿಯು ಬುರ್ಕಿನಾ ಫಾಸೊದಲ್ಲಿ JNIM ಎಂದಿಗಿಂತಲೂ ಹೆಚ್ಚು ಶಕ್ತಿಶಾಲಿ ಮತ್ತು ಸಕ್ರಿಯವಾಗಿದೆ ಎಂದು ತೋರಿಸಿದೆ ಎಂದು ಹೇಳಿದರು. ಜಿಬೋದಂತಹ ನಗರವನ್ನು ಗುರಿಯಾಗಿಸಿಕೊಂಡಿರುವುದು ಈ ಸಂಸ್ಥೆ ಈಗ ದೇಶದೊಳಗೆ ಸುಲಭವಾಗಿ ಚಲಿಸಬಹುದು ಎಂಬುದರ ಸೂಚನೆಯಾಗಿದೆ ಎಂದು ಅವರು ಹೇಳಿದರು.



## ಶೋಪಿಯಾನ್‌ನ ಅರಣ್ಯದಲ್ಲಿ ಎನ್‌ಕೌಂಟರ್: 3 ಉಗ್ರರ ಸದೆಬಡಿದ ಭದ್ರತಾ ಪಡೆ

**ಶೋಪಿಯಾನ್:** ದಕ್ಷಿಣ ಕಾಶ್ಮೀರದ ಶೋಪಿಯಾನ್ ಜಿಲ್ಲೆಯ ಕೆಲ್ಲಾರ್‌ನ ಶುಕ್ರೂ ಅರಣ್ಯ ಪ್ರದೇಶದಲ್ಲಿ ಮಂಗಳವಾರ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಭೀಕರ ಗುಂಡಿನ ಚಕಮಕಿ ನಡೆದಿದೆ. ಮೂವರು ಉಗ್ರರು ಹತರಾಗಿದ್ದಾರೆ. ಪೊಲೀಸ್, ಸೇನೆ ಮತ್ತು ಸಿಆರ್‌ಪಿಎಫ್‌ನ ಜಂಟಿ ತಂಡವು ಅರಣ್ಯ ಪ್ರದೇಶದಲ್ಲಿ ಸುತ್ತುವರಿದು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದೆ ಎಂದು ವರದಿಗಳು ತಿಳಿಸಿವೆ. ಪಡೆಗಳ ಜಂಟಿ ತಂಡವು ಶಂಕಿತ ಸ್ಥಳದ ಕಡೆಗೆ ಸಮೀಪಿಸುತ್ತಿದ್ದಂತೆ, ಅಡಗಿಕೊಂಡಿದ್ದ ಉಗ್ರಗಾಮಿಗಳು ಪಡೆಗಳ ಮೇಲೆ ಗುಂಡು ಹಾರಿಸಿದರು, ಗುಂಡಿನ ಚಕಮಕಿ ನಡೆಯಿತು.

ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆದಿರುವುದನ್ನು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ.ಮೂಲಗಳ ಪ್ರಕಾರ ಎರಡರಿಂದ ಮೂರು ಉಗ್ರರು ಸಿಕ್ಕಿಬಿದ್ದಿದ್ದಾರೆ ಎಂದು ಹೇಳಲಾಗುತ್ತಿದೆ. ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಗೆ ಕಾರಣರಾದವರ ಬಗ್ಗೆ ವಿಶ್ವಾಸಾರ್ಹ ಮಾಹಿತಿ ನೀಡಿದವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಘೋಷಿಸುವ ಪೋಸ್ಟರ್ ಗಳು ಪುಲ್ವಾಮಾ ಜಿಲ್ಲೆಯಾದ್ಯಂತ ಕಾಣಿಸಿಕೊಂಡ ಕೆಲವೇ ಗಂಟೆಗಳ ನಂತರ ಈ ಎನ್‌ಕೌಂಟರ್ ನಡೆದಿದೆ. ಜಮ್ಮು ಮತ್ತು ಕಾಶ್ಮೀರದ ಬಂಡಿಪೋರಾ ಜಿಲ್ಲೆಯಲ್ಲಿ ಎನ್ಕೌಂಟರ್ ನಡೆದಿದ್ದು, ಅಡಗಿ ಕುಳಿತಿರುವ ಉಗ್ರರು ಹಾಗೂ ಭಾರತೀಯ ಸೇನಾಪಡೆಗಳ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿತ್ತು.

ಬಂಡಿಪೋರಾ ಜಿಲ್ಲೆಯ ಕುಲ್ನರ್ ಬಾಜಿಪೋರಾ ಪ್ರದೇಶದಲ್ಲಿ ಉಗ್ರರು ಇರುವ ಬಗ್ಗೆ ಖಚಿತ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ಸ್ಥಳದಲ್ಲಿ ಕಾರ್ಯಾಚರಣೆ ಆರಂಭಿಸಿತ್ತು. ಈ ವೇಳೆ ಅಡಗಿ ಕುಳಿತಿದ್ದ ಉಗ್ರರು ಏಕಾಏಕಿ ಸೇನಾಪಡೆ ಮೇಲೆ ಗುಂಡಿನ ದಾಳಿ ನಡೆಸಲು ಆರಂಭಿಸಿದ್ದಾರೆ. ಪರಿಣಾಮ ಇಬ್ಬರು ಯೋಧರಿಗೆ ಗಾಯಗಳಾಗಿವೆ ಎಂದು ತಿಳಿದುಬಂದಿದೆ. ಉಗ್ರರ ದಾಳಿ ಹಿನ್ನೆಲೆಯಲ್ಲಿ ಸ್ಥಳವನ್ನು ಸುತ್ತುವರೆದಿರುವ ಸೇನಾಪಡೆ ಕಾರ್ಯಾಚರಣೆಯನ್ನು ಎನ್ಕೌಂಟರ್ ಆಗಿ ಬದಲಾಯಿಸಿದ್ದು, ದಾಳಿಗೆ ತಕ್ಕ ಉತ್ತರ ನೀಡುತ್ತಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಟಾಲಿವುಡ್‌ನತ್ತ ನಟ- 'ಪುಷ್ಪ 2' ನಿರ್ಮಿಸಿದ್ದ ಸಂಸ್ಥೆ ಜೊತೆ ಕೈಜೋಡಿಸಿದ ಉಪೇಂದ್ರ

ಕನ್ನಡದ ಸ್ಟಾರ್ ನಟ ಉಪೇಂದ್ರ, ಮತ್ತೆ ಟಾಲಿವುಡ್‌ನತ್ತ ಮುಖ ಮಾಡಿದ್ದಾರೆ. 'ಪುಷ್ಪ 2' ಸಿನಿಮಾ ನಿರ್ಮಿಸಿದ್ದ ಮೈತ್ರಿ ಮೂವಿ ಮೇಕರ್ಸ್ ಜೊತೆ ಸಿನಿಮಾ ಮಾಡಲು ಮುಂದಾಗಿದ್ದಾರೆ. ರಾಮ್ ಪೋತಿನೇನಿ ಸಿನಿಮಾದಲ್ಲಿ ಉಪೇಂದ್ರ, ಕಾಣಿಸಿಕೊಂಡಿದ್ದಾರೆ. ಇದೀಗ ಅವರ ಪಾತ್ರದ ಲುಕ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ.

ರಾಮ್ ಪೋತಿನೇನಿ ನಟನೆಯ 22ನೇ ಸಿನಿಮಾದಲ್ಲಿ ಉಪೇಂದ್ರ, ಅವರು ಸೂರ್ಯ ಕುಮಾರ್ ಎಂಬ ಪವರ್ ಫುಲ್ ಪಾತ್ರದಲ್ಲಿ ಕಾಣಿಸಿಕೊಳ್ಳಿದ್ದಾರೆ. ಅವರ ಪಾತ್ರದ ಲುಕ್ ಸಖತ್ ಸ್ಟೈಲೀಶ್ ಆಗಿದೆ. ಶರ್ಟ್ ಮೇಲೆ ಜಾಕೆಟ್ ಹಾಕಿದ್ದು, ಕಣ್ಣಿಗೆ ಕೂಲಿಂಗ್ ಗ್ಲಾಸ್ ಧರಿಸಿದ್ದಾರೆ. ಅವರ ಬೆನ್ನ ಹಿಂದೆ ಕೂಡ ಲೈಟ್ ಮತ್ತು ಕ್ಯಾಮೆರಾ ಆನ್ ಆಗಿದೆ. ಹೀಗಾಗಿ ಚಿತ್ರದಲ್ಲಿಯೂ ಕೂಡ ಅವರು ಸೂಪರ್ ಸ್ಟಾರ್ ಪಾತ್ರ ಮಾಡ್ತಿರಬಹುದಾ ಎಂದು ಫ್ಯಾನ್ಸ್ ಊಹಿಸಿದ್ದಾರೆ.

ಉಪೇಂದ್ರ, ಪಾತ್ರದ ಗ್ಲಿಂಪ್ಸ್ ಅನ್ನು ಮೇ 15ರಂದು ರಿಲೀಸ್ ಮಾಡೋದಾಗಿ ಚಿತ್ರತಂಡ ತಿಳಿಸಿದೆ. ಈ ಹಿಂದೆ ಅನುಷ್ಕಾ ಶೆಟ್ಟಿ ನಟಿಸಿದ್ದ 'ಮಿಸ್ ಶೆಟ್ಟಿ ಮಿಸ್ಟರ್ ಪೋಲಿಶೆಟ್ಟಿ' ನಿರ್ದೇಶನ ಮಾಡಿದ್ದ ಮಹೇಶ್ ಬಾಬು ಪಿ ಅವರು ಈಗ ರಾಮ್ ಪೋತಿನೇನಿ ಚಿತ್ರಕ್ಕೂ ನಿರ್ದೇಶನ ಮಾಡ್ತಿದ್ದಾರೆ.

ಉಪೇಂದ್ರ, ಈಗಾಗಲೇ ಸೌತ್ ಸಿನಿಮಾಗಳಲ್ಲಿ ಕೆಲಸ ಮಾಡಿ ಪಳಗಿದ್ದಾರೆ. ಈ ಹಿಂದೆ ಅಲ್ಲು ಅರ್ಜುನ್ ನಟನೆಯ 'ಸನ್ ಆಫ್ ಸತ್ಯಮೂರ್ತಿ' ಚಿತ್ರದಲ್ಲಿ



ವಿಲನ್ ಆಗಿ ಅಬ್ಬರಿಸಿದ್ದರು. 'ಯುಐ' ಚಿತ್ರ ಕೂಡ ತೆಲುಗು ವರ್ಷನ್‌ನಲ್ಲಿ ರಿಲೀಸ್ ಆಗಿ ಮೆಚ್ಚುಗೆ ಗಳಿಸಿತ್ತು. ಅದಷ್ಟೇ ಅಲ್ಲ, ತಮಿಳಿನ ಸ್ಟಾರ್ ತಲೈವಾ ಜೊತೆ 'ಕೂಲಿ' ಸಿನಿಮಾದಲ್ಲೂ ನಟಿಸುತ್ತಿದ್ದಾರೆ ಉಪೇಂದ್ರ. ಹಾಗಾಗಿ ತೆಲುಗು, ತಮಿಳು ಎರಡು ಭಾಷೆಯಲ್ಲೂ ನಟಿಸಿ ಅವರು ಸೈ ಎನಿಸಿಕೊಂಡಿದ್ದಾರೆ.

# 'ಬಿಗ್ ಬಾಸ್' ಫ್ರೆಂಡ್ಸ್ ಜೊತೆ ಮೋಕ್ಷಿತಾ ಫಾರಿನ್ ಟ್ರಿಪ್

'ಬಿಗ್ ಬಾಸ್ ಕನ್ನಡ 11'ರಲ್ಲಿ ಮೋಕ್ಷಿತಾ, ಐಶ್ವರ್ಯಾ, ಶಿಶಿರ್ ಶಾಸ್ತ್ರಿ ನಡುವೆ ಶುರುವಾದ ಸ್ನೇಹ ಕಾರ್ಯಕ್ರಮ ಮುಗಿದ್ಮೇಲೆಯೂ ಮುಂದುವರೆದಿದೆ. ಶೋಗಷ್ಟೇ ಸೀಮಿತವಾಗಿಡದೇ ಮುಗಿದ್ಮೇಲೆಯೂ ಮೂವರ ನಡುವೆ ಗಾಢವಾದ ಸ್ನೇಹ ಬೆಳೆದಿದೆ. ಇದೀಗ ಮೂವರು ವಿದೇಶಕ್ಕೆ ತೆರಳಿದ್ದಾರೆ. ಐಶ್ವರ್ಯಾ, ಶಿಶಿರ್ ಜೊತೆ ಮೋಕ್ಷಿತಾ ಫಾರಿನ್‌ನಲ್ಲಿ ಎಂಜಾಯ್ ಮಾಡ್ತಿದ್ದಾರೆ.

ಮೋಕ್ಷಿತಾಗೆ ಟ್ರಾವೆಲಿಂಗ್ ಎಂದರೆ ತುಂಬಾ ಇಷ್ಟ. ಸದಾ ಹೊಸ ಜಾಗಗಳಿಗೆ ಭೇಟಿ ನೀಡೋ ನಟಿ ಈಗ 'ಬಿಗ್ ಬಾಸ್' ಫ್ರೆಂಡ್ಸ್ ಐಶ್ವರ್ಯಾ, ಶಿಶಿರ್ ಶಾಸ್ತ್ರಿ ಜೊತೆ ಅಜೆರ್ಬೈಜಾನ್‌ನ ಬಾಕುಗೆ ತೆರಳಿದ್ದಾರೆ. ಅವರೊಂದಿಗೆ ಮೋಕ್ಷಿತಾ ತಂಗಿ ಅಮೃತಾ ಕೂಡ ಸಾಥ್ ನೀಡಿದ್ದಾರೆ.





ಬಾಕು ಕೊಲ್ಲಿಯ ವಿಶಾಲವಾದ ಪ್ರದೇಶಗಳಲ್ಲಿ ಬಿಗ್ ಬಾಸ್ ಸ್ಪರ್ಧಿಗಳು ಸುತ್ತಾಡಿದ್ದಾರೆ. ಪ್ರಪಂಚದ ಅತಿದೊಡ್ಡ ಒಳನಾಡಿನ ಜಲರಾಶಿಯಾಗಿರೋ ಕ್ಯಾಸ್ಪಿಯನ್ ಸಮುದ್ರಕ್ಕೆ ಭೇಟಿ ಕೊಟ್ಟಿದ್ದಾರೆ. ಇಲ್ಲಿನ ಸುಂದರ ಫೋಟೋಗಳನ್ನು ನಟಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಬಿಗ್ ಬಾಸ್ ಕಾರ್ಯಕ್ರಮ ಮುಕ್ತಾಯ ಆದ್ಮೇಲೆಯೂ ಈ ಮೂವರು ಜೊತೆಯಾಗಿರೋದನ್ನು ನೋಡಿ ಫ್ಯಾನ್ಸ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಧರ್ಮಸ್ಥಳ, ಕೊಲ್ಲೂರು ದೇಗುಲಕ್ಕೆ ಐಶ್ವರ್ಯಾ, ಶಿಶಿರ್ ಶಾಸ್ತ್ರಿ ಜೊತೆ ಮೋಕ್ಷಿತಾ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.



# 'ಡ್ಯಾಗನ್' ಹೀರೋಗೆ ಜೊತೆಯಾದ ಕೃತಿ ಶೆಟ್ಟಿ

'ಡ್ರ್ಯಾಗನ್' ಖ್ಯಾತಿಯ ಪ್ರದೀಪ್ ರಂಗನಾಥನ್ ಜೊತೆ ಕೃತಿ ಶೆಟ್ಟಿ ರೊಮ್ಯಾನ್ಸ್ ಮಾಡಿದ್ದಾರೆ. ಈ ಸಿನಿಮಾ ರಿಲೀಸ್ ಆಗೋದು ಯಾವಾಗ ಎಂಬ ಪ್ರೇಕ್ಷಕರ ಕುತೂಹಲಕ್ಕೆ ಈಗ ಉತ್ತರ ಸಿಕ್ಕಿದೆ. ಈ ವರ್ಷ ಸೆಪ್ಟೆಂಬರ್ 18ಕ್ಕೆ ರಿಲೀಸ್ ಮಾಡೋದಾಗಿ ಚಿತ್ರತಂಡ ಬಿಗ್ ಅಪ್‌ಡೇಟ್ ಹಂಚಿಕೊಂಡಿದೆ.

ಕೃತಿ ಶೆಟ್ಟಿ ಸಾಲು ಸಾಲು ಸೋಲುಗಳನ್ನೇ ಕಂಡಿರುವ ನಟಿ. ಇದೀಗ ವಿಘ್ನೇಶ್ ಶಿವನ್ ನಿರ್ದೇಶನದ 'ಲವ್ ಇನ್ಶೂರೆನ್ಸ್ ಕಂಪನಿ' ಚಿತ್ರದ ಮೂಲಕ ಕುಡ್ಲದ ನಟಿ ಕೃತಿ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ನಯನತಾರಾ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಪ್ರದೀಪ್ ಮತ್ತು ಕೃತಿ ಜೋಡಿಯ ಮೂಲಕ ವಿಭಿನ್ನ ಪ್ರೇಮಕಥೆಯನ್ನು ಹೇಳಲು ರೆಡಿಯಾಗಿದ್ದಾರೆ.

ಸ್ಕ್ರಿಪ್ಟ್ ಕೆಲಸ, ವರ್ಕ್ ಶಾಪ್ ಅಂತ ತೆರೆಮರೆಯಲ್ಲಿ ಸಾಕಷ್ಟು ತಯಾರಿ ಮಾಡಿಕೊಂಡೇ ಈ ಚಿತ್ರವನ್ನು ವಿಘ್ನೇಶ್ ಶಿವನ್ ಕಂಪ್ಲೀಟ್ ಮಾಡಿದ್ದಾರೆ. ಹೀಗಾಗಿ ಕಾರಣಾಂತರಗಳಿಂದ ರಿಲೀಸ್‌ಗೆ ತಡವಾಗಿತ್ತು. ಈಗ 'ಲವ್ ಇನ್ಶೂರೆನ್ಸ್ ಕಂಪನಿ' ಸೆ.18ರಂದು ರಿಲೀಸ್‌ಗೆ ಸಜ್ಜಾಗಿದೆ.

'ಡ್ಯಾಗನ್' ಮೂಲಕ ಸಕ್ಸಸ್ ಕಂಡಿರುವ ಪ್ರದೀಪ್‌ಗೆ ಕೃತಿ ಜೊತೆಯಾಗಿರೋದ್ರಿಂದ ಈ ಸಿನಿಮಾ ಮೇಲಿನ ನಿರೀಕ್ಷೆ ಹೆಚ್ಚಾಗಿದೆ. ಹೊಸ ಜೋಡಿಯನ್ನು ಸಿನಿಮಾದಲ್ಲಿ ಕಣ್ತುಂಬಿಕೊಳ್ಳಲು ಫ್ಯಾನ್ಸ್ ಕಾಯ್ತಿದ್ದಾರೆ.

# ಮತ್ತೆ ಕಿರುತೆರೆಗೆ ಬಂದ ಗೌತಮಿ

'ಬಿಗ್ ಬಾಸ್' ಬೆಡಗಿ ಗೌತಮಿ ಜಾಧವ್‌ದೊಡ್ಮನೆ ಆಟ ಮುಗಿದ್ಮೇಲೆ ಅದ್ಯಾವ ಪ್ರಾಜೆಕ್ಟ್ ಮೂಲಕ ಬರುತ್ತಾರೆ ಎಂದು ಕಾಯುತ್ತಿದ್ದ ಫ್ಯಾನ್ಸ್‌ಗೆ ಗುಡ್ ನ್ಯೂಸ್ ಸಿಕ್ಕಿದೆ. ಲೇಡಿ ಪೊಲೀಸ್ ಆಫೀಸರ್ ಸಿಂಧೂರಿಯಾಗಿ ನಟಿ ಎಂಟ್ರಿ ಕೊಟ್ಟಿದ್ದಾರೆ.

'ಸತ್ಯ' ಸೀರಿಯಲ್, 'ಬಿಗ್ ಬಾಸ್ ಕನ್ನಡ 11'ರ ಶೋ ಮುಗಿದ ಬಳಿಕ ಸಿನಿಮಾ ಅಥವಾ ಸೀರಿಯಲ್ ಬಗ್ಗೆ ಅಪ್‌ಡೇಟ್ ಸಿಕ್ಕಿರಲಿಲ್ಲ. ಈಗ 'ಭಾರ್ಗವಿ ಐಐಃ' ಸೀರಿಯಲ್ ಮೂಲಕ ಕಿರುತೆರೆಗೆ ರೀ ಎಂಟ್ರಿ ಕೊಟ್ಟಿದ್ದಾರೆ. ಈ ಸೀರಿಯಲ್‌ನಲ್ಲಿ ಕೇಡಿಗಳ ಚಕ್ರವ್ಯೂಹದಲ್ಲಿ ಸಿಕ್ಕಿ ಬಿದ್ದಿರುವ ನಾಯಕಿ ಭಾರ್ಗವಿಯ ರಕ್ಷಣೆಗೆ ಬರುವ ಸಿಂಧೂರಿ ಪಾತ್ರದಲ್ಲಿ ಗೌತಮಿ ಬಣ್ಣ ಹಚ್ಚಿದ್ದಾರೆ.

ಈ ಸೀರಿಯಲ್‌ನಲ್ಲಿ ಖಡಕ್ ಡೈಲಾಗ್ ಹೊಡೆಯುತ್ತಾ ಎಂಟ್ರಿ ಕೊಟ್ಟಿದ್ದಾರೆ. ನಾನು ಎಲ್ಲಿ ಕಾಲಿಟ್ರೂ, ಅಲ್ಲೊಂದು ಸೌಂಡ್ ಇರುತ್ತಮ್ಮ ಎಂದು ಅವರು ವಿಲನ್‌ಗಳಿಗೆ ಸಖತ್ ಮಾಸ್ ಆಗಿ ಪಂಚಿಂಗ್ ಡೈಲಾಗ್ ಹೊಡೆದಿದ್ದಾರೆ. ಡೈಲಾಗ್ ಕೇಳಿದ್ರೆ ಅಭಿಮಾನಿಗಳಿಗೆ 'ಸತ್ಯ' ಸೀರಿಯಲ್‌ನ ಸತ್ಯಳ ಪಾತ್ರವನ್ನೇ ನೆನಪಿಸುವಂತೆ ಮಾಡಿದೆ. ಆದರೆ ಈ ಪಾತ್ರದಲ್ಲಿ ಅವರು ಸೀರೆಯಲ್ಲಿ ಮಿಂಚಿದ್ದಾರೆ. ಒಟ್ನಲ್ಲಿ ಗೌತಮಿ ಹೊಸ ಪಾತ್ರ, ಹೊಸ ಅವತಾರ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ.



# ಹೊಸಬರೇ ಸಾಕು: ರೋಹಿತ್, ಕೊಹ್ಲಿ ನಿವೃತ್ತಿಗೆ ಗೌತಮ್ ಗಂಭೀರ್ ಕಾರಣ?

ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಲು ಯಾರು ಕಾರಣ? ಈ ಮಿಲಿಯನ್ ಡಾಲರ್ ಪ್ರಶ್ನೆಗೆ ಸದ್ಯ ಸಿಗುತ್ತಿರುವ ಉತ್ತರ ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್. ಭಾರತ ತಂಡದ ಮುಖ್ಯ ಕೋಚ್ ಅವರ ಸೂಚನೆಯ ಮೇರೆಗೆ ಆಯ್ಕೆ ಸಮಿತಿಯು ಗಟ್ಟಿ ನಿರ್ಧಾರ ತೆಗೆದುಕೊಂಡಿದೆ ಎಂದು ವರದಿಯಾಗಿದೆ.

ಅಂದರೆ ಇಲ್ಲಿ ಗೌತಮ್ ಗಂಭೀರ್ ಹೊಸ ಮುಖಗಳಿಗೆ ಪ್ರಾಧಾನ್ಯ ನೀಡಬೇಕೆಂದು ಆಯ್ಕೆ ಸಮಿತಿ ಮುಂದೆ ಬೇಡಿಕೆಯಿಟ್ಟಿದ್ದಾರೆ. ಇದೇ ಕಾರಣದಿಂದಾಗಿ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಿಂದ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿಯನ್ನು ಕೈ ಬಿಡಲು ಆಯ್ಕೆ ಸಮಿತಿ ಮುಂದಾಗಿತ್ತು ಪಿಟಿಐ ವರದಿ ಮಾಡಿದೆ.

ಗೌತಮ್ ಗಂಭೀರ್ ಕೋಚ್ ಆದ ಬಳಿಕ ಟೆಸ್ಟ್ ಕ್ರಿಕೆಟ್‌ನಲ್ಲಿ ಟೀಮ್ ಇಂಡಿಯಾ ಅತ್ಯಂತ ಕೆಟ್ಟ ಪ್ರದರ್ಶನ ನೀಡಿದೆ. ಅದರಲ್ಲೂ ನ್ಯೂಝಿಲೆಂಡ್ ಹಾಗೂ ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್‌ನಲ್ಲಿ ಭಾರತ ತಂಡ ಹೀನಾಯವಾಗಿ ಸೋಲನುಭವಿಸಿದೆ. ಈ ಸೋಲುಗಳಿಗೆ ಉತ್ತರ ಕಂಡುಕೊಳ್ಳಲು ಗಂಭೀರ್ ಹೊಸ ತಂಡ ಕಟ್ಟಲು ಮುಂದಾಗಿದ್ದಾರೆ.

ಅದರಲ್ಲೂ 2027ರ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಸರಣಿಯು ಇಂಗ್ಲೆಂಡ್ ವಿರುದ್ಧದ ಸರಣಿಯೊಂದಿಗೆ ಶುರುವಾಗುತ್ತಿದೆ. ಈ ಸರಣಿಗೆ ಹೊಸ ಆಟಗಾರರಿಗೆ ಪ್ರಾಧಾನ್ಯ ನೀಡಬೇಕೆಂದು ಗಂಭೀರ್ ಆಗ್ರಹಿಸಿದ್ದಾರೆ. ಅಷ್ಟೇ ಅಲ್ಲದೆ ಭಾರತ ತಂಡದಲ್ಲಿ ಸ್ಟಾರ್ ಸಂಸ್ಕೃತಿಯನ್ನು ಕೊನೆಗಾಣಿಸುವುದು ಅವರ ಮೊದಲ ಗುರಿ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.

ಇತ್ತ ಆಯ್ಕೆ ಸಮಿತಿ ಮುಖ್ಯಸ್ಥ ಅಜಿತ್ ಅಗರ್ಕರ್ ಕೂಡ ತಂಡದಲ್ಲಿನ ಸ್ಟಾರ್ ಸಂಸ್ಕೃತಿಯನ್ನು



ಕೊನೆಗೊಳಿಸುವ ಇರಾದೆಯಲ್ಲಿದ್ದರು. ಇಲ್ಲಿ ಗಂಭೀರ್ ಹಾಗೂ ಅಗರ್ಕರ್ ಅವರ ಉದ್ದೇಶಗಳು ಹೊಂದಿಕೆಯಾಗಿರುವ ಕಾರಣ, ದೃಢ ನಿರ್ಧಾರ ತೆಗೆದುಕೊಳ್ಳಲು ನಿರ್ಧರಿಸಿದ್ದಾರೆ.

ಅದರ ಮೊದಲ ಹೆಜ್ಜೆಯಾಗಿ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿಗೆ ಇಂಗ್ಲೆಂಡ್ ವಿರುದ್ಧದ ಸರಣಿಗೆ ಆಯ್ಕೆ ಮಾಡಲಾಗುವುದಿಲ್ಲ ಎಂದು ತಿಳಿಸಲಾಗಿತ್ತು. ಇದೇ ಕಾರಣದಿಂದಾಗಿ ಇಬ್ಬರು ದಿಗ್ಗಜರು ದಿಢೀರ್ ನಿವೃತ್ತಿ ಘೋಷಿಸಿದ್ದಾರೆ ಎಂದು ತಿಳಿದು ಬಂದಿದೆ.

ಇದೀಗ ಗೌತಮ್ ಗಂಭೀರ್ ಯುಗ ಆರಂಭವಾಗುತ್ತಿದೆ. ಮುಂದಿನ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಆವೃತ್ತಿಯಲ್ಲಿ ಭಾರತ ಹೊಸ ಮುಖಗಳನ್ನು ಹೊಂದಿರಬೇಕು ಎಂದು ಅವರು ಸ್ಪಷ್ಟವಾಗಿ ಹೇಳಿದ್ದರು. ಹೀಗಾಗಿಯೇ ತಂಡದಿಂದ ಹಿರಿಯ ಆಟಗಾರರನ್ನು ಕೈ ಬಿಡಲು ನಿರ್ಧರಿಸಲಾಗಿದೆ ಎಂದು ಹೆಸರು ಹೇಳಲು ಇಚ್ಛಿಸದ ಬಿಸಿಸಿಐನ ವ್ಯಕ್ತಿಯೊಬ್ಬರು ಪಿಟಿಐ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ.

ಇದು ತಂಡದೊಳಗೆ ಹೆಚ್ಚುತ್ತಿರುವ ಗೌತಮ್ ಗಂಭೀರ್ ಅವರ ಪ್ರಭಾವವನ್ನು ಸೂಚಿಸುತ್ತಿದೆ. ಹೀಗಾಗಿಯೇ ಇನ್ಮುಂದೆ ಟೀಮ್ ಇಂಡಿಯಾದಲ್ಲಿ ಗಂಭೀರ್ ಅವರ ನಿರ್ಧಾರಗಳೇ ಫೈನಲ್ ಆಗಲಿವೆ. ಈ ನಿರ್ಧಾರಗಳೊಂದಿಗೆ ಇಂಗ್ಲೆಂಡ್‌ನಲ್ಲಿ ಟೀಮ್ ಇಂಡಿಯಾ ಹೇಗೆ ಪ್ರದರ್ಶನ ನೀಡಲಿದೆ ಎಂಬುದನ್ನು ಕಾದು ನೋಡಬೇಕಿದೆ.

# ಪಕ್ಷಾತೀತವಾಗಿ ಮೇ 15ರಿಂದ 23ರವರೆಗೆ ಕರ್ನಾಟಕದಲ್ಲಿ ತಿರಂಗಾ ಯಾತ್ರೆ

**ಬೆಂಗಳೂರು:** ರಾಷ್ಟ್ರ ರಕ್ಷಣೆಗಾಗಿ ಆಪರೇಷನ್ ಸಿಂಧೂರದ ಜೊತೆ ನಾವಿದ್ದೇವೆ; ಭಾರತದ ಸೇನೆ ಜೊತೆ ನಾವೆಲ್ಲರೂ ಇದ್ದೇವೆ ಎಂದು ಸಂದೇಶ ನೀಡುವ ಸಲುವಾಗಿ ನಾಳೆ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನಲ್ಲಿ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗುವುದು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮಲ್ಲೇಶ್ವರ ಮಂತ್ರಿಮಾಲ್‌ನ ಸಂಪಿಗೆ ರಸ್ತೆಯ ಸಿರೂರು ಆಟದ ಮೈದಾನದಿಂದ ಪ್ರಾರಂಭವಾಗಿ 18ನೇ ಕ್ರಾಸ್‌ವರೆಗೂ ರಾಷ್ಟ್ರಧ್ವಜದೊಂದಿಗೆ ತಿರಂಗಾ ಯಾತ್ರೆ ಜರುಗಲಿದೆ. ಪಕ್ಷಾತೀತವಾಗಿ ನಡೆಯುವ ಈ ಯಾತ್ರೆಯಲ್ಲಿ ಪಕ್ಷದ ಯಾವುದೇ ಬ್ಯಾನರ್‌ಗಳು ಇರುವುದಿಲ್ಲ. ಈ ಯಾತ್ರೆಯಲ್ಲಿ ವೈದ್ಯರು, ಇಂಜಿನಿಯರ್‌ಗಳು, ವಿದ್ಯಾರ್ಥಿಗಳು, ರೈತರು, ಕಾರ್ಮಿಕರು ಎಲ್ಲರೂ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮೇ 16 ಮತ್ತು 17ರಂದು ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ಮೇ 18ರಿಂದ 23ರವರೆಗೆ ತಾಲೂಕು ಕೇಂದ್ರಗಳಲ್ಲಿ ತಿರಂಗಾ ಯಾತ್ರೆಯನ್ನು ಮಾಡಲಾಗುತ್ತದೆ ಎಂದು ಹೇಳಿದರು. ಪ್ರತಿಹಳ್ಳಿಗಳಲ್ಲಿ ಮತ್ತು ತಾಲೂಕು ಕೇಂದ್ರಗಳಲ್ಲಿ ಪಕ್ಷದ ಬ್ಯಾನರ್ ಇಲ್ಲದೇ ಯಾತ್ರೆಯನ್ನು ಕೈಗೊಳ್ಳಲು ನಮ್ಮ ಕಾರ್ಯಕರ್ತರಿಗೆ ಸೂಚನೆಯನ್ನು ಕೊಡಲಾಗಿದೆ



ಎಂದು ವಿವರಿಸಿದರು.

ಭಾರತದ ತಾಯಂದಿರ ಸಿಂಧೂರ ಅಳಿಸಿದರೆ ಏನು ಆಗುತ್ತದೆ ಎಂಬುದನ್ನು ನಮ್ಮ ಸೇನೆಯು ಇಡೀ ವಿಶ್ವಕ್ಕೆ ತೋರಿಸಿಕೊಟ್ಟಿದೆ ಮತ್ತು ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿದ್ದಾರೆ. ಸುಮಾರು 100ಕ್ಕೂ ಹೆಚ್ಚು ಭಯೋತ್ಪಾದಕರು ಹತರಾಗಿದ್ದಾರೆ. ಪಾಕಿಸ್ತಾನದ ಉಗ್ರರ ಸ್ಥಳಗಳನ್ನು ಈಗಾಗಲೇ ಧ್ವಂಸಗೊಳಿಸಲಾಗಿದೆ. ಪಾಕಿಸ್ತಾನವು ಕೊನೆಗೆ ಈ ಉದ್ವಿಗ್ನತೆಯನ್ನು ಕಡಿಮೆ ಮಾಡಲು ಅಂಗಲಾಚುವ ಸ್ಥಿತಿಗೆ ನಮ್ಮ ಸೈನಿಕರು ತಂದಿದ್ದಾರೆ. ಭಾರತ ಎಂದೂ ಉಗ್ರವಾದವನ್ನು ಸಹಿಸಲ್ಲ ಎಂಬ ಸಂದೇಶವನ್ನು ಇಡೀ ಪ್ರಪಂಚಕ್ಕೆ ನೀಡಿರುತ್ತಾರೆ ಎಂದು ವಿಶ್ಲೇಷಿಸಿದರು.

ಸಿಂಧೂ ನದಿ ನೀರಿನ ವಿಚಾರವಾಗಿ ಈ ಹಿಂದೆ 90% ನೀರು ಪಾಕಿಸ್ತಾನಕ್ಕೆ 10% ಮಾತ್ರ ಭಾರತಕ್ಕೆ ಎಂಬ ಒಪ್ಪಂದವನ್ನು ಪ್ರಧಾನ ಮೋದಿ ಜೀಯವರು ರದ್ದುಪಡಿಸಿರುವುದು ಒಂದು ಸಾಧನೆಯಾಗಿದೆ. ನ್ಯೂಕ್ಲಿಯರ್ ಬಾಂಬ್ ಬೆದರಿಕೆಗೆ ನಾವು ಹೆದರುವುದಿಲ್ಲ ಎಂಬ ಸಂದೇಶವನ್ನು ನಮ್ಮ ಪ್ರಧಾನಿಯವರು ಪಾಕಿಸ್ತಾನಕ್ಕೆ ನೀಡಿದ್ದಾರೆ ಎಂದು ತಿಳಿಸಿದರು.

ನಮ್ಮ ಸೈನಿಕರು ದಾಳಿ ಮಾಡಿರುವುದಕ್ಕೆ ಸಾಕ್ಷಿ ಇದೆಯೇ ಎಂದು ಪ್ರಶ್ನಿಸುತ್ತಿದ್ದರು. ಅಲ್ಲಿನ ಸೈನಿಕರು ಮತ್ತು ಭಯೋತ್ಪಾದಕರು ಎಷ್ಟು ಜನ ಹತರಾಗಿದ್ದಾರೆ ಎಂದು ಪಾಕಿಸ್ತಾನವು ಈಗಾಗಲೇ ಒಪ್ಪಿಕೊಂಡಿದೆ. ನಮ್ಮ ಸೇನಾ ಅಧಿಕಾರಿಗಳೇ ಪತ್ರಿಕಾಗೋಷ್ಠಿ ನೀಡಿ, ಪಾಕಿಸ್ತಾನದ ಮೇಲೆ ದಾಳಿ ಮಾಡಿರುವುದಕ್ಕೆ ಸಾಕ್ಷಿ ಸಮೇತ ಉತ್ತರ ನೀಡಿದ್ದಾರೆ. ಆದರೂ ಪಾಕಿಸ್ತಾನ ಜಿಂದಾಬಾದ್ ಎನ್ನುವವರಿಗೆ ನಂಬಲು ಆಗುತಿಲ್ಲ ಮತ್ತು ಭಾರತದ ಕಾರ್ಯಾಚರಣೆಯನ್ನು ಸಹಿಸಲು ಆಗುತ್ತಿಲ್ಲ ಎಂದರು.

ಇಂದು ನಮ್ಮ ಸೈನಿಕರು ಕಾಶ್ಮೀರ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರವು ನಮ್ಮದು ಎಂದು ತೋರಿಸಿಕೊಟ್ಟಿದ್ದಾರೆ. ಅಲ್ಲದೆ ನಮ್ಮ ಪ್ರಧಾನ ಮೋದಿ ಜೀರವರು ಸಹ ಹೇಳಿದ್ದಾರೆ. ಪಾಕಿಸ್ತಾನ ಅಕ್ರಮಿತ ಕಾಶ್ಮೀರವನ್ನು ನಾವು ವಾಪಸ್ ಪಡೆಯುತ್ತೇವೆ ಹಾಗೂ ಸಿಂಧೂ ನದಿಯ ಯಾವುದೇ ಒಪ್ಪಂದವನ್ನು ಮಾಡುವುದಿಲ್ಲ. ಪಾಕಿಸ್ತಾನದ ಭಯೋತ್ಪಾದಕರಿಗೆ ಮತ್ತು ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿರುವ ನಮ್ಮ ಸೈನಿಕರಿಗೆ ಗೌರವ ನೀಡುವ ಸಲುವಾಗಿ ಈ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

# ಅಬ್ಬಬ್ಬಾ ಈ ಮಾವಿನ ಹಣ್ಣಿನ ಕೆಜಿ ಬೆಲೆ ಬರೋಬ್ಬರಿ 2.7 ಲಕ್ಷ!

**ಧಾರವಾಡ:** ಏಪ್ರಿಲ್, ಮೇ ತಿಂಗಳು ಬಂತೆಂದರೆ ಸಾಕು ಹಣ್ಣುಗಳ ರಾಜನ ದರ್ಬಾರ್ ಶುರುವಾಗೇ ಬಿಡುತ್ತೆ. ಮಾರುಕಟ್ಟೆಯಲ್ಲಿ 1 ಬಾಕ್ಸ್ ಮಾವಿನ ಹಣ್ಣಿಗೆ 300, 350 ಅಥವಾ 400 ರೂ. ಇರುತ್ತದೆ. ಆದರೆ ಇಲ್ಲೊಂದು ಮಾವಿನ ಹಣ್ಣಿನ ಕೆಜಿಗೆ ಬರೋಬ್ಬರಿ 2.7 ಲಕ್ಷ ರೂ. ಆಗಿದ್ದು, 1 ಮಾವಿನ ಹಣ್ಣಿಗೆ 10 ಸಾವಿರ ರೂ. ಬೆಲೆಯಿದೆ.

ಹೌದು, ಈ ಮಾವಿನ ಹಣ್ಣಿನ ಹೆಸರು ಮಿಯಾ ಜಾಕಿ, ಇದು ಜಪಾನ್ ದೇಶದ ಮಾವಿನ ಹಣ್ಣಿನ ತಳಿಯಾಗಿದೆ. ಈ ಹಣ್ಣನ್ನು ಧಾರವಾಡದ ರೈತ ಪ್ರಮೋದ ಗಾಂವಕರ ಕಲಕೇರಿಯ ತಮ್ಮ ತೋಟದಲ್ಲಿ ಬೆಳೆದಿದ್ದಾರೆ. ಪ್ರತಿವರ್ಷ ಏಳೆಂಟು ಹಣ್ಣು ಬಿಡುತ್ತಿದ್ದ ಮಿಯಾ ಜಾಕಿ ಮರಗಳು, ಈ ವರ್ಷ 25-26 ಹಣ್ಣುಗಳನ್ನು ಬಿಟ್ಟಿವೆ. ಧಾರವಾಡದಲ್ಲಿ ನಡೆದ ಮಾವಿನ ಮೇಳದಲ್ಲೂ ಈ ಮಿಯಾ ಜಾಕಿ ಮಾವಿನ ಹಣ್ಣು ಎಲ್ಲರ ಗಮನ ಸೆಳೆಯಿತು.

ಮಿಯಾ ಜಾಕಿ ಎಂಬುದು ಜಪಾನ್ ದೇಶದ



ಓರ್ವ ರೈತನ ಹೆಸರು. ಮಿಯಾ ಜಾಕಿ ಎಂಬ ರೈತ ಅಲ್ಲಿ ಈ ಮಾವಿನ ಹಣ್ಣು ಬೆಳೆದಿದ್ದ. ಹೀಗಾಗಿ ಆ ಹಣ್ಣಿಗೆ ಮಿಯಾಜಾಕಿ ಎಂಬ ರೈತನ ಹೆಸರಿಡಲಾಗಿದೆ ಎಂದು ಹೇಳಲಾಗುತ್ತಿದೆ.

ಪ್ರಮೋದ್ ಅವರು ಜಪಾನ್‌ಗೆ ತೆರಳಿದ್ದ ವೇಳೆ ಅಲ್ಲಿಂದ ಈ ಹಣ್ಣಿನ ಎರಡು ಸಸಿಗಳನ್ನು ತಂದು, ತಮ್ಮ ತೋಟದಲ್ಲಿ ನೆಟ್ಟಿದ್ದರು. ಇಲ್ಲಿನ ವಾತಾವರಣಕ್ಕೆ ಹೊಂದಿಕೊಂಡ ಎರಡೂ ಸಸಿಗಳು ಬೆಳೆದು ಇದೀಗ ಫಲ ಕೊಡಲಾರಂಭಿಸಿವೆ.

ಮಾವಿನ ಮೇಳದಲ್ಲಿ ಮಿಯಾ ಜಾಕಿ ಕಂಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಈ ಮಿಯಾ ಜಾಕಿ ಹಣ್ಣನ್ನು ಯಾವ ರೈತರೂ ಬೆಳೆಯುತ್ತಿಲ್ಲ. ಆ ಹಣ್ಣಿನ ಉತ್ಪಾದನೆ ಹೆಚ್ಚಾದರೆ ಅದರ ದರವೂ ಕಡಿಮೆಯಾಗುತ್ತದೆ. ತೋಟಗಾರಿಕಾ ಇಲಾಖೆ ಅಧಿಕಾರಿಗಳು ಮಿಯಾ ಜಾಕಿ ಹಣ್ಣಿನ ತಳಿಯ ಸಸಿಗಳನ್ನು ತರಿಸಿ, ಇತರ ರೈತರೂ ಅದನ್ನು ಬೆಳೆಯುವಂತೆ ಪ್ರೋತ್ಸಾಹಿಸಬೇಕಿದೆ. ಒಂದು ಹಣ್ಣಿಗೆ 10 ಸಾವಿರ ಎಂದರೆ ಅದು ದುಬಾರಿಯಾಗುತ್ತದೆ. ಆದ್ದರಿಂದ ಆ ಹಣ್ಣಿನ ಉತ್ಪಾದನೆ ಹೆಚ್ಚಳ ಮಾಡಬೇಕಿದೆ ಎಂದು ಹೇಳಿದರು.

ಪ್ರವೋದ್ ಗಾಂವಕರ ಅವರು ತಮ್ಮ ತೋಟದಲ್ಲಿ ಇಸ್ರೇಲ್, ಅಮೆರಿಕ, ಜಪಾನ್, ಇಟಲಿ, ಥೈಲ್ಯಾಂಡ್ ಸೇರಿ ವಿವಿಧ ದೇಶಗಳ ಸುಮಾರು 25 ಜಾತಿಯ ಮಾವಿನ ಹಣ್ಣಿನ ಸಸಿಗಳನ್ನು ಬೆಳೆದಿದ್ದಾರೆ. ಸದ್ಯ ಮಾವಿನ ಮೇಳದಲ್ಲಿ ಪ್ರಮೋದ್ ಗಾಂವಕರ ಅವರು ಬೆಳೆದ ಮಿಯಾಜಾಕಿ ಎಲ್ಲರ ಗಮನ ಸೆಳೆದಿದೆ.

# ಪ್ರಧಾನಿ ಹಾಗೂ ರಕ್ಷಣಾ ತಂಡಗಳನ್ನು ಶ್ಲಾಘಿಸಿದ: ತೆಂಡೂಲ್ಕರ್

**ನವದೆಹಲಿ:** ಆಪರೇಷನ್ ಸಿಂಧೂರದ ಯಶಸ್ವಿಗೆ ಕಾರಣಕರ್ತರಾದ ಪ್ರಧಾನಿ ನರೇಂದ್ರ ಮೋದಿ ಹಾಗೂ ರಕ್ಷಣಾ ತಂಡಗಳ ಕುರಿತು ಮಾಜಿ ಕ್ರಿಕೆಟಿಗ ಸಚಿನ್ ತೆಂಡೂಲ್ಕರ್ ಪ್ರಶಂಸೆಯ ಬರಹವನ್ನು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ?:** ಆಪರೇಷನ್ ಸಿಂಧೂರದ ಕಾರ್ಯಾಚರಣೆಯಲ್ಲಿ 1.6 ಬಿಲಿಯನ್‌ಗಿಂತಲೂ ಹೆಚ್ಚು ಜನರು ಒಗ್ಗಟ್ಟಿನಿಂದ ಹೋರಾಡಿದ್ದಾರೆ. ಭಾರತೀಯ ಸೇನೆ ಬಲವಾದ ದೃಢನಿಶ್ಚಯ ಮತ್ತು ಸಂಯಮದ ಹೋರಾಡಿದೆ.

ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿಯವರ ಹಾಗೂ ಮೂರು ರಕ್ಷಣಾ ತಂಡಗಳ ಅವಿಶ್ರಾಂತ ಪರಿಶ್ರಮವು ಗಮನಾರ್ಹವಾಗಿದೆ. ಅಲ್ಲದೇ ನಮ್ಮ ಧೈರ್ಯಶಾಲಿ ಸೈನಿಕರು ಹಾಗೂ ಗಡಿ ಪ್ರದೇಶದಲ್ಲಿ ವಾಸಿಸುತ್ತಿರುವ ನಾಗರಿಕರ ಬಗ್ಗೆ ಇಲ್ಲಿ ನಾನು ವಿಶೇಷವಾಗಿ ಉಲ್ಲೇಖಿಸುತ್ತಿದ್ದೇನೆ. ಜೈ ಹಿಂದ್ ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ.



Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079. Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085, email: sanjemugilu@gmail.com, RNI No.KARKAN/2002/08054